ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450


Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 84 ಸಂಚಿಕೆ- 84 | PAGE-8 ಪುಟ-8 | ಗುರುವಾರ 08.05.2025 | RS.2/- ಬೆಲೆ 2/-

# ಪಾಕ್‌ನ 9 ಉಗ್ರರ ನೆಲೆ ಧ್ವಂಸ



## ಸಿಂಧೂರ ಕಿತ್ತುಕೊಂಡ ಉಗ್ರರಿಗೆ ಸೇನೆಯಿಂದ ತಕ್ಕ ಪಾಠ







ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಮೇ.7: ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ 26 ಹಿಂದೂಗಳ ಮಾರಣಹೋಮ ನಡೆಸಿದ ಭಯೋತ್ಪಾದಕರ ವಿರುದ್ಧ ಆಪರೇಷನ್ ಸಿಂದೂರ್" ಹೆಸರಲ್ಲಿ ಸೇನಾ ಪಡೆ 9 ಭಯೋತ್ಪಾದಕರ ಅಡಗುದಾಣದ ಮೇಲೆ ರಾತ್ರೋರಾತ್ರಿ ಕ್ಷಿಪಣಿ ದಾಳಿ ನಡೆಸಿ ಉಗ್ರರ ಶಿಬಿರಗಳನ್ನು ಧ್ವಂಸಗೊಳಿಸಿದೆ.

25 ನಿಮಿಷಗಳ ಕಾಲ ನಡೆದ ಈ ಭೀಕರ ಕ್ಷಿಪಣಿ ದಾಳಿಯಲ್ಲಿ 100ಕ್ಕೂ ಹೆಚ್ಚು ಭಯೋತ್ಪಾದಕರನ್ನು ಭಾರತೀಯ ವಾಯುಸೇನೆ ಸಂಹಾರ ಮಾಡುವ ಮೂಲಕ ಪಹಲ್ಗಾಮ್‌ ದಾಳಿಗೆ ಪ್ರತೀಕಾರ ತೀರಿಸಿಕೊಂಡಿದೆ.

ಅಲ್ಲದೆ ಉಗ್ರರ ಯಾವುದೇ ಗೊಡ್ಡು ಬೆದರಿಕೆಗಳಿಗೆ ಸೊಪ್ಪು ಹಾಕುವುದಿಲ್ಲ ಎಂದು ನೆರೆ ರಾಷ್ಟ್ರ ಪಾಕಿಸ್ತಾನ ಮತ್ತು ಭಯೋತ್ಪಾದಕರಿಗೆ ಖಡಕ್ ಸಂದೇಶ ರವಾನಿಸಿದೆ. ಈ ದಾಳಿಗೆ ಫ್ರಾನ್ಸ್‌ನಿಂದ ಖರೀದಿಸಿದ್ದ ರಫೆಲ್ ಯುದ್ಧ ವಿಮಾನಗಳನ್ನು ಬಳಸಿಕೊಳ್ಳಲಾಗಿದೆ.

ವಾಯು ದಾಳಿಯ ಸಮಯದಲ್ಲಿ ರಫೇಲ್ ಯುದ್ಧ ವಿಮಾನಗಳು, ಕ್ರೂಸ್ ಕ್ಷಿಪಣಿಗಳು ಮತ್ತು ನಿಖರ-ಮಾರ್ಗದರ್ಶಿತ ಬಾಂಬ್‌ಗಳನ್ನು ಒಳಗೊಂಡಿದ್ದು, ಭಾರತೀಯ ವಾಯುಪ್ರದೇಶದೊಳಗೆ ಸಾರ್ವಜನಿಕರಿಗೆ ತೊಂದರೆಯಾಗದಂತೆ ನಿಖರತೆಯೊಂದಿಗೆ ಕಾರ್ಯಾಚರಣೆ ನಡೆಸಿದೆ.

ಇಂದು ಮುಂಜಾನೆ 1.05 ನಿಮಿಷದಿಂದ 1.30ರ ಸಮಯದಲ್ಲಿ ಭಾರತೀಯ ವಾಯು ಸೇನೆಯ ಯುದ್ಧ ವಿಮಾನಗಳು 9 ಸ್ಥಳಗಳಲ್ಲಿ 21 ಭಯೋತ್ಪಾದಕರ ನೆಲೆಗಳನ್ನು ಧ್ವಂಸಗೊಳಿಸುವ ಮೂಲಕ ಪಹಲ್ಗಾಮ್‌ನಲ್ಲಿ ಹತ್ಯೆಯಾದ ಜನರಿಗೆ ನ್ಯಾಯ ನೀಡುವಲ್ಲಿ ಯಶಸ್ವಿಯಾಗಿವೆ.

ಪಾಕಿಸ್ತಾನದ ಮೇಲೆ ನಡೆಸಿದ ವಾಯುದಾಳಿ ಕುರಿತು ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ವಿಕ್ರಮ್ ಮಿಸ್ತ್ರಿ ,ಭೂಸೇನೆಯ ಕರ್ನಲ್ ಸೋಫಿಯಾ ಖುರೇಷಿ ಮತ್ತು ವಾಯುಪಡೆಯ ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ತಡರಾತ್ರಿ ನಡೆಸಿದ ದಾಳಿಯ ಕುರಿತು ಮಾಹಿತಿ ನೀಡಿದರು.

ಪಹಲ್ಗಾಮ್‌ನಲ್ಲಿ 25 ಭಾರತೀಯರು ಮತ್ತು ನೇಪಾಳಿ ಪ್ರಜೆಯನ್ನು ಕೊಂದ ಮಾರಣಾಂತಿಕ ದಾಳಿಯ ನಂತರ ಭಾರತೀಯ ಸಶಸ್ತ್ರಪಡೆಗಳು 'ಆಪರೇಷನ್ ಸಿಂದೂರ್' ಅಡಿಯಲ್ಲಿ ಒಂಬತ್ತು ಭಯೋತ್ಪಾದಕರ ತಾಣಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿವೆ.

ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ವಿಕ್ರಮ್ ಮಿಸ್ತ್ರಿ ಮಾತನಾಡಿ ಪಾಕಿಸ್ತಾನ ಸದಾ ಭಯೋತ್ಪಾದನೆಯನ್ನು ಪ್ರೋತ್ಸಾಹಿಸುತ್ತಿದೆ ಎನ್ನುವುದಕ್ಕೆ ಹಲವು ನಿದರ್ಶನಗಳಿವೆ ಎಂದ ಅವರು,ಪಹಲ್ಗಾಮ್ ದಾಳಿಯ ಅಪರಾಧಿಗಳಿಗೆ ತಕ್ಕ ಶಾಸ್ತಿ ಮಾಡುವ ಸಲುವಾಗಿ ಕಳೆದ ಹದಿನೈದು ದಿನಗಳಿಂದ ಯೋಜನೆ ರೂಪಿಲಾಗುತ್ತಿತ್ತು ಎಂದಿದ್ದಾರೆ.

ರೆಸಿಸ್ಟೆನ್ಸ್ ಫ್ರಂಟ್ ಎಂದು ಕರೆದುಕೊಳ್ಳುವ ಒಂದು ಗುಂಪು

(2ನೇ ಪುಟ ನೋಡಿ)

# ರಾಷ್ಟ್ರೀಯ ಭದ್ರತೆ ವಿಷಯದಲ್ಲಿ ಯಾವುದೇ ರಾಜಿ ಸಾಧ್ಯವಿಲ್ಲ:ಸಿಎಂ ಸಿದ್ದರಾಮಯ್ಯ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು, ಮೇ 07 :ದೇಶದ ಸೇನಾಪಡೆ ಪಾಕಿಸ್ತಾನ ಹಾಗೂ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿರುವ ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಿ ನಮ್ಮ ಯೋಧರು ಪರಾಕ್ರಮ ಮೆರೆದಿದ್ದಾರೆ. ಇದು ಇಡೀ ದೇಶವೇ ಹೆಮ್ಮೆಪಡುವ ವಿಷಯ. ದೇಶದ ಸೇನಾಪಡೆಯ ಪರಾಕ್ರಮಕ್ಕೆ ನಾನು ದೇಶದ ಮತ್ತು ರಾಜ್ಯದ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ಗೃಹ ಕಚೇರಿ ಕಾವೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ

ಮಾತನಾಡಿದ ಅವರು, ರಾಷ್ಟ್ರ ಭದ್ರತೆ ವಿಷಯದಲ್ಲಿ ಯಾವುದೇ ರಾಜಿ ಸಾಧ್ಯವಿಲ್ಲ. ಈ ದಾಳಿಯನ್ನು ಎಲ್ಲರೂ ಬೆಂಬಲಿಸಿದ್ದೇವೆ. ಇದು ಪಾಕಿಸ್ತಾನಕ್ಕೆ ಎಚ್ಚರಿಕೆಯ ಗಂಟೆ-ಯಾಗಿದೆ. ನಮ್ಮ ಸರ್ಕಾರ ನೂರಕ್ಕೆ ನೂರರಷ್ಟು ಸೇನೆ

(2ನೇ ಪುಟ ನೋಡಿ)

# ಆಪರೇಷನ್ ಸಿಂಧೂರ ಯಶಸ್ವಿ: ಮುಜರಾಯಿ ದೇವಾಲಯಗಳಲ್ಲಿ ವಿಶೇಷ ಪೂಜೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.7: ಭಾರತೀಯ ಸೇನೆಯು "ಆಪರೇಷನ್ ಸಿಂಧೂರ' ಕಾರ್ಯಚರಣೆಯನ್ನು ಯಶಸ್ವಿಯಾಗಿ ಕೈಗೊಂಡಿರುವುದರಿಂದ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ದೇವಾಲಯಗಳಲ್ಲಿ ವಿಶೇಷ ಪೂಜೆಯನ್ನು ನೆರವೇರಿಸುವಂತೆ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿಯವರು ಸೂಚಿಸಿದ್ದಾರೆ. ನಿರ್ದೇಶನದ ಮೇರೆಗೆ 22.04.2025ರಂದು ಕಾಶ್ಮೀರದ ಪಹಲ್ಕಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಉತ್ತರವಾಗಿ, ದಿನಾಂಕ:07.05.2025ರಂದು ಮುಂಜಾನೆ ಭಾರತವು ಪಾಕ್ ಆಕ್ರಮಿತ ಕಾಶ್ಮೀರದ ಭಯೋತ್ಪಾದಕ ಶಿಬಿರಗಳ ಮೇಲೆ ಆಪರೇಷನ್ ಸಿಂಧೂ ಹೆಸರಿನಲ್ಲಿ ಸೇನಾ ಕಾರ್ಯಾಚರಣೆಯನ್ನು ಯಶಸ್ವಿಯಾಗಿ ನಡೆಸಿದೆ.ಆದ್ದರಿಂದ ಕರ್ನಾಟಕ ಸರ್ಕಾರದ ಸಾರಿಗೆ ಮತ್ತು ಮುಜರಾಯಿ ಸಚಿವರಾದ ಶ್ರೀ ರಾಮಲಿಂಗಾರೆಡ್ಡಿರವರು ಭಾರತೀಯ ಸೇನೆಯ ಕಾರ್ಯಾಚರಣೆಗೆ ಶುಭಾಶಯವನ್ನು ಸಲ್ಲಿಸಿರುತ್ತಾರೆ. ಭಾರತದ ಹೆಮ್ಮೆಯ ಸೇನಾ ಕಾರ್ಯಾಚರಣೆಗೆ ಅಭಿನಂದನೆಗಳನ್ನು ಸಲ್ಲಿಸುತ್ತಾ, ರಾಜ್ಯದ ಧಾರ್ಮಿಕ ದತ್ತಿ ಇಲಾಖೆಯ ಎಲ್ಲಾ

ದೇವಾಲಯಗಳಲ್ಲಿ ಭಾರತೀಯ ಸೇನೆಯ ಹೆಸರಿನಲ್ಲಿ ಹಾಗೂ ಭಾರತೀಯ ಯೋಧರಿಗೆ ಒಳಿತಾಗಲಿ ಎಂದು ಹಾರೈಸುತ್ತಾ, ಭಾರತೀಯ ಸೇನೆಗೆ ಮತ್ತಷ್ಟು ಶಕ್ತಿಯನ್ನು ಭಗವಂತನು ಅನುಗ್ರಹಿಸಿ ಕರುಣಿಸಲಿ ಎಂದು ಪ್ರಾರ್ಥಿಸಿ ವಿಶೇಷ ಸಂಕಲ್ಪದೊಂದಿಗೆ ಪೂಜೆಗಳನ್ನು ನೆರವೇರಿಸಲು ಕ್ರಮ ಕೈಗೊಳ್ಳಲು ಸೂಚಿಸಿದ್ದಾರೆ ಎಂದು ಧಾರ್ಮಿಕ ದತ್ತಿ ಇಲಾಖೆ ಆಯುಕ್ತರಾದ ಡಾ:ವೆಂಕಟೇಶ್, ಎಂ.ವಿ. ತಿಳಿಸಿದ್ದಾರೆ.



## ಒಂದನೇ ಪುಟದಿಂದ

# ರಾಜಿ ಸಾಧ್ಯವಿಲ್ಲ:ಸಿಎಂ ಸಿದ್ದರಾಮಯ್ಯ

ಕೈಗೊಂಡಿರುವ ಈ ಕ್ರಮವನ್ನು ಬೆಂಬಲಿಸುತ್ತದೆ ಎಂದರು.

'ಆಪರೇಷನ್ ಸಿಂಧೂರ' ಹೆಸರಿನಲ್ಲಿ ಸುಮಾರು 9 ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಲಾಗಿದೆ. ಕೇವಲ ಉಗ್ರಗಾಮಿಗಳ ನೆಲೆಗಳ ಮೇಲೆ ಮಾತ್ರ ದಾಳಿ ನಡೆಸಲಾಗಿದ್ದು, ನಮ್ಮ ಸೈನಿಕರು ಉಗ್ರರ ನೆಲೆಗಳನ್ನು ಪತ್ತೆ ಹಚ್ಚಿ ದಾಳಿ ಮಾಡಿದ್ದಾರೆ. ಅಮಾಯಕ ಜನರ ಸಾವು ನೋವು ತಪ್ಪಿಸಿದ್ದಾರೆ. ನಮ್ಮ ಸೈನಿಕರ ಕಾರ್ಯದಕ್ಷತೆಗೆ ದೊಡ್ಡ ಸಲಾಂ. ಈ ದಾಳಿಯನ್ನು ನಾವು ಸ್ವಾಗತಿಸುತ್ತೇವೆ.

ಕಾಶ್ಮೀರದ ಪಹಲ್ಗಾ???ನಲ್ಲಿ ಅಮಾಯಕ 26 ಜನ ಹತ್ಯೆ ನಡೆಸಿದ ಉಗ್ರರನ್ನು ಬೆಂಬಲಿಸುವವರು, ಸಾಕುವವರು ಸಹ ಪಾಕಿಸ್ತಾನದವರೇ ಎಂಬುವುದು ಸ್ಪಷ್ಟವಾಗಿದೆ. ನಾವು ಕೇಂದ್ರ ಸರ್ಕಾರದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಸಂಪೂರ್ಣ ಬೆಂಬಲವನ್ನು ವ್ಯಕ್ತಪಡಿಸಿದ್ದೇವೆ. ರಾಜ್ಯದಲ್ಲಿ ಸುರಕ್ಷತೆಯ ಕುರಿತು ಎಲ್ಲಾ ಎಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡಿದ್ದೇವೆ ಎಂದು ತಿಳಿಸಿದರು.

ಉಗ್ರರ ಮೇಲಿನ ದಾಳಿ ಹಿನ್ನೆಲೆಯಲ್ಲಿ ಸಂವಿಧಾನ ಉಳಿಸಿ ಅಡಿಯಲ್ಲಿ ರಾಯಚೂರಿನಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನಾ ಕಾರ್ಯಕ್ರಮನ್ನು ರದ್ದುಗೊಳಿಸಲಾಗಿದೆ. ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ) ಗಳಲ್ಲಿನ ಉಗ್ರಗಾಮಿಗಳ ನೆಲೆಯನ್ನು ನಾಶ ಮಾಡಿ ಪರಾಕ್ರಮ ಮೆರೆದ ಭಾರತದ ಹೆಮ್ಮೆಯ ಧೀರ ಸೈನಿಕರಿಗೆ ಮೊದಲಿಗೆ ಇಡೀ ರಾಜ್ಯದ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುತ್ತೇನೆ.

ಸೇನೆ ನಡೆಸಿರುವ ಈ ದಾಳಿ ಭಾರತದ ಮೇಲೆ ಸತತವಾಗಿ ದಾಳಿ ನಡೆಸಿ ಹತ್ಯಾಕಾಂಡ ನಡೆಸುತ್ತಿದ್ದ ಉಗ್ರಗಾಮಿಗಳಿಗೆ ಕಲಿಸಿದ ಪಾಠ ಮಾತ್ರವಲ್ಲ ಈ ಉಗ್ರರಿಗೆ ಆಶ್ರಯ ಮತ್ತು ನೆರವು ನೀಡಿ ಭಾರತದ ವಿರುದ್ಧ ಅವರನ್ನು ಛೂಬಿಡುತ್ತಿದ್ದ ಪಾಕಿಸ್ತಾನಕ್ಕೂ ನೀಡಿರುವ ಎಚ್ಚರಿಕೆ ಆಗಿದೆ.

ಈ ಸೇನಾದಾಳಿ ನಡೆಸದೆ ಭಾರತದ ಮುಂದೆ ಬೇರೆ ಆಯ್ಕೆಗಳಿರಲಿಲ್ಲ. ಪಹಲ್ಗಾಮ್‌ನಲ್ಲಿ ನಡೆದ ಹತ್ಯಾಕಾಂಡ ನಡೆಸಿದ ಉಗ್ರಗಾಮಿಗಳು ಪಾಕಿಸ್ತಾನಕ್ಕೆ ಸೇರಿದವರೆಂದು ಜಗಜ್ಜಾಹೀರಾಗಿದ್ದರೂ. ಪಾಕಿಸ್ತಾನ ಇದನ್ನು ಒಪ್ಪಿಕೊಂಡು ಕ್ರಮಕೈಗೊಳ್ಳುವ ಭರವಸೆ ನೀಡದೆ ಹಠಮಾರಿ ಧೋರಣೆ ತಳೆದಿರುವ ಕಾರಣದಿಂದಾಗಿ ಭಾರತಕ್ಕೂ ಈ ದಾಳಿ ನಡೆಸದೆ ಬೇರೆ ಆಯ್ಕೆಗಳಿರಲಿಲ್ಲ.

ಉಗ್ರಗಾಮಿಗಳ ನೆಲೆಗಳನ್ನು ಧೂಳೀಪಟ ಮಾಡಿ ಉಗ್ರರನ್ನು ಶಿಕ್ಷಿಸಿದ ನಮ್ಮ ಸೈನಿಕರ ಧೀರೋದ್ದಾತ ಪರಾಕ್ರಮದಿಂದ ಪಹಲ್ಗಾಮ್ ಹತ್ಯಾಕಾಂಡದಲ್ಲಿ ತಮ್ಮವರನ್ನು ಕಳೆದುಕೊಂಡ ಕುಟುಂಬಗಳಿಗೆ ತುಸು ನೆಮ್ಮದಿ, ಸಮಾಧಾನ ಸಿಕ್ಕಿರಬಹುದೆಂದು ಭಾವಿಸಿದ್ದೇನೆ. ಇದು ಪಾಕಿಸ್ತಾನಕ್ಕೆ ಮಾತ್ರವಲ್ಲ ಭಾರತದ ಜೊತೆ ಈ ರೀತಿಯ ಕಿಡಿಗೇಡಿತನವನ್ನು ನಡೆಸುವ ನೆರೆಯ ಎಲ್ಲ ದೇಶಗಳಿಗೆ ಕೂಡಾ ಇಂದಿನ ಸೇನಾದಾಳಿ ಎಚ್ಚರಿಕೆಯ ಗಂಟೆ–ಯಾಗಿದೆ ಎಂದು ತಿಳಿಸಿದರು.

ಭಾರತ ಸರ್ಕಾರ ಕೈಗೊಂಡಿರುವ ಈ ನಿರ್ಧಾರವನ್ನು ನಮ್ಮ ಪಕ್ಷ ಸಂಪೂರ್ಣ ಬೆಂಬಲಿಸಿದೆ. ನಾನು ಕೂಡಾ ನಮ್ಮ ಸರ್ಕಾರ ಮತ್ತು ರಾಜ್ಯದ ಪರವಾಗಿ ಸಂಪೂರ್ಣ ಬೆಂಬಲ ಘೋಷಿಸುತ್ತಿದ್ದೇನೆ ಎಂದು ಹೇಳಿದರು.

ಇದು ನಾವೆಲ್ಲರೂ ಒಗ್ಗಟ್ಟಿನಿಂದ ಮತ್ತು ಅಷ್ಟೇ ಎಚ್ಚರದಿಂದ ಇರುವ ಕಾಲ. ರಾಜ್ಯದ ಭದ್ರತಾ ವ್ಯವಸ್ಥೆ ಮೇಲೆ ನಿಗಾ ಇಡುವಂತೆ ಪೊಲೀಸ್ ವರಿಷ್ಠರಿಗೆ ತಿಳಿಸಿದ್ದೇನೆ. ನಮ್ಮ ಸರ್ಕಾರ ಕೇಂದ್ರ ಸರ್ಕಾರದ ಜೊತೆಯಲ್ಲಿಯೂ ಸಂಪರ್ಕದಲ್ಲಿರುತ್ತದೆ. ಅಲ್ಲಿಂದ ಬರುವ ಸೂಚನೆಗಳನ್ನು ಪಾಲಿಸಲಾಗುತ್ತದೆ. ಯಾರೂ ಭಯಭೀತರಾಗುವ ಅವಶ್ಯಕತೆ ಇಲ್ಲ. ಕಟ್ಟುನಿಟ್ಟಿನ ಕ್ರಮಗಳೊಂದಿಗೆ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಲಾಗುವುದು ಎಂದು ತಿಳಿಸಿದರು.

# ಸೇನೆಯಿಂದ ತಕ್ಕ ಪಾಠ

ಪಹಲ್ಗಾಮ್ ದಾಳಿಯ ಹೊಣೆ ಹೊತ್ತುಕೊಂಡಿತ್ತು. ಈ ಗುಂಪು ವಿಶ್ವಸಂಸ್ಥೆಯ ನಿಷೇಧಿತ ಪಾಕಿಸ್ತಾನಿ ಭಯೋತ್ಪಾದಕ ಗುಂಪು ಲಷ್ಕರ್–ಎ–ತೈಬಾದ ಒಂದು ಭಾಗವಾಗಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿ ಪಾಕಿಸ್ತಾನ ಭಯೋತ್ಪಾದಕ ದಾಳಿಯನ್ನು ಪ್ರೋತ್ಸಾಹಿಸುತ್ತಿದೆ ಎನ್ನುವುದಕ್ಕೆ ಮತ್ತೊಂದು ನಿದರ್ಶನವಾಗಿದೆ ಎಂದು ಅವರು ತಿಳಿಸಿದ್ದಾರೆ

ಭೂಸೇನೆಯ ಕರ್ನಲ್ ಸೋಫಿಯಾ ಖುರೇಷಿ ಮಾತನಾಡಿ,ಮುಂಡ್ರಿಕೆ ಮತ್ತು ಪಾಕಿಸ್ತಾನ ಮತ್ತು ಪಿಒಕೆಯಲ್ಲಿರುವ ಭಯೋತ್ಪಾದಕ ಶಿಬಿರಗಳ ಕುರಿತು ಸಮಗ್ರ ಮಾಹಿತಿ ಕಲೆ ಹಾಕಿದ ನಂತರ ನಾಗರಿಕರಿಗೆ ತೊಂದರೆ ಆಗದಂತೆ ಭಯೋತ್ಪಾದಕ ಶಿಬಿರ ಗುರಿಯಾಗಿಸಿ ದಾಳಿ ನಡೆಸಿದ್ದೇವೆ ಎಂದರು.

ಭಯೋತ್ಪಾದಕ ಶಿಬಿರಗಳ ಮೇಲೆ ಭಾರತೀಯ ಸೇನಾ ಪಡೆಗಳು ಬಹು ಹಂತದಲ್ಲಿ ದಾಳಿ ಮಾಡಿದ ವಿಡಿಯೋಗಳನ್ನು ಅವರು ಇದೇ ಸಂದರ್ಭದಲ್ಲಿ ಪ್ರದರ್ಶಿಸಿದರು

ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಮಾತನಾಡಿ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಲಿಪಶುಗಳು ಮತ್ತು ಅವರ ಕುಟುಂಬಗಳಿಗೆ ನ್ಯಾಯ ಒದಗಿಸಲು ಭಾರತೀಯ ಸಶಸ್ತ್ರ ಪಡೆಗಳು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿದವು. ಒಂಬತ್ತು ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿಕೊಂಡು ಯಶಸ್ವಿಯಾಗಿ ನಾಶಪಡಿಸಿದ್ದೇವೆ. ನಾಗರಿಕ ಮೂಲಸೌಕರ್ಯಗಳಿಗೆ ಹಾನಿಯಾಗದಂತೆ ಮತ್ತು ಯಾವುದೇ ನಾಗರಿಕ ಜೀವಹಾನಿಯನ್ನು ತಪ್ಪಿಸಲು ಸ್ಥಳಗಳನ್ನು ಆಯ್ಕೆ ಮಾಡಿ ದಾಳಿ ಮಾಡಿದ್ದೇವೆ ಎಂದು ಅವರು ತಿಳಿಸಿದ್ದಾರೆ

ದಾಳಿಗೊಳಗಾದ 9 ಸ್ಥಳಗಳು:

1)ಬಹವಾಲ್ಪುರ್: ಅಂತರರಾಷ್ಟ್ರೀಯ ಗಡಿಯಿಂದ ಸುಮಾರು 100 ಕಿ.ಮೀ ದೂರದಲ್ಲಿರುವ ಬಹವಾಲ್ಪುರ್ ಮೇಲೆ ದಾಳಿ ನಡೆದಿದೆ. ಇದು ಜೈಷ್ ಉಗ್ರ ಸಂಘಟನೆಯ ಪ್ರಧಾನ ಕಚೇರಿಯಾಗಿತ್ತು.

2) ಮುರಿಡ್ಕೆ: ಸಾಂಬಾ ಎದುರಿನ ಗಡಿಯಿಂದ 30 ಕಿ.ಮೀ ದೂರದಲ್ಲಿದ್ದು ಇದು ಲಷ್ಕರ್–ಎ–ತೈಬಾ ಸಂಘಟನೆ ಉಗ್ರರ ಶಿಬಿರ ನಡೆಸುತ್ತಿತ್ತು. ಮುಂಬೈ ದಾಳಿ ನಡೆಸಿದ ಉಗ್ರರಿಗೆ ಇಲ್ಲಿ ತರಬೇತಿ ನೀಡಲಾಗಿತ್ತು.

3) ಗುಲ್ಪುರ್ : ಗಡಿ ನಿಯಂತ್ರಣ ರೇಖೆ ಪೂಂಚ್–ರಾಜೌರಿಯಿಂದ 35 ಕಿ.ಮೀ ದೂರದಲ್ಲಿದೆ. ಪೂಂಚ್‌ನಲ್ಲಿ ಏಪ್ರಿಲ್ 20, 2023 ರಂದು ನಡೆದ ದಾಳಿ ಮತ್ತು ಜೂನ್ 24 ರಂದು ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಅಮಾಯಕ ಯಾತ್ರಿಕರ ಮೇಲೆ ಇಲ್ಲಿ ತರಬೇತಿ ಪಡೆದ ಉಗ್ರರು ದಾಳಿ ನಡೆಸಿದ್ದರು.

4) ಸವಾಯಿ: ಲಷ್ಕರ್ ಉಗ್ರರ ಕ್ಯಾಂಪ್ ಇದಾಗಿದ್ದು ಗಡಿ ನಿಯಂತ್ರಣ ರೇಖೆಯಿಂದ 30 ಕಿ.ಮೀ ದೂರದಲ್ಲಿದೆ. ಕಳೆದ ವರ್ಷ ಅಕ್ಟೋಬರ್ 20, 24 ರಂದು ಸೋನ್‌ಮಾರ್ಗ್, ಅಕ್ಟೋಬರ್ 24 ರಂದು ಗುಲ್ಮಾರ್ಗ್ ಮತ್ತು ಏಪ್ರಿಲ್ 22 ರಂದು ಪಹಲ್ಗಾಮ್ ಮೇಲೆ ದಾಳಿ ನಡೆಸಿದ ಉಗ್ರರು ಇಲ್ಲಿ ತರಬೇತಿ ಪಡೆದಿದ್ದರು.

5) ಬಿಲಾಲ್: ಉಗ್ರ ಸಂಘಟನೆ ಜೈಷ್–ಎ–ಮೊಹಮದ್ ಲಾಂಚ್ ಪ್ಯಾಡ್ ಇದಾಗಿದ್ದು ಉಗ್ರರು ಇಲ್ಲಿ ಕೊನೆಯ ಹಂತದ ತರಬೇತಿ ಪಡೆದು ಭಾರತಕ್ಕೆ ನುಗ್ಗುತ್ತಿದ್ದರು.

6) ಕೋಟ್ಲಿ: ಗಡಿ ನಿಯಂತ್ರಣ ರೇಖೆಯಿಂದ 15 ಕಿ.ಮೀ ದೂರದಲ್ಲಿದೆ. ಲಷ್ಕರ್ ಉಗ್ರರ ಕ್ಯಾಂಪ್ ಇದಾಗಿದ್ದು 50 ಉಗ್ರರಿಗೆ ತರಬೇತಿ ನೀಡುವ ಸಾಮರ್ಥ್ಯ ಹೊಂದಿತ್ತು.

7) ಬರ್ನಾಲಾ: ಭಾರತ ಗಡಿಯಿಂದ 10 ಕಿ.ಮೀ ದೂರದಲ್ಲಿದೆ. ಇಲ್ಲೂ ಲಷ್ಕರ್ ಉಗ್ರರಿಗೆ ತರಬೇತಿ ನೀಡಲಾಗುತ್ತಿತ್ತು.

8) ಸರ್ಜಲ್: ಸಾಂಬಾ ಕಟುವಾ ಬಳಿ ಅಂತಾರಾಷ್ಟ್ರೀಯ ಗಡಿಯಿಂದ 8 ಕಿಲೋಮೀಟರ್ ದೂರದಲ್ಲಿ ಜೈಶ್ ಎ ಮೊಹಮದ್ ಕ್ಯಾಂಪ್.

9) ಮಹಮೂನಾ: ಸಿಯಾಲ್ ಕೋಟ್ ಬಳಿಯ ಅಂತಾರಾಷ್ಟ್ರೀಯ ಗಡಿಯಿಂದ 15 ಕಿಲೋಮೀಟರ್ ದೂರದಲ್ಲಿ ಹಿಜ್ಬುಲ್ಲಾ ಟ್ರೈನಿಂಗ್ ಸೆಂಟರ್.

# ಪಾಕ್ ಉಗ್ರರ ಮೇಲೆ ದಾಳಿ: ವಿಜಯೋತ್ಸವ



ಕಲಬುರಗಿ,ಮೇ.7:ಜಮ್ಮು ಮತ್ತುಕಾಶ್ಮೀರದಪಹಲ್ಗಾಮ್‌ನಲ್ಲಿ 26 ಜನ ಭಾರತೀಯರನ್ನು ಹತ್ಯೆಮಾಡಿದ ಪ್ರತೀಕಾರಕ್ಕಾಗಿ ಭಾರತದ ಸೇನೆಯು ಸಿಂಧೂರ್ ಹೆಸರಿನಲ್ಲಿ ಪಾಕಿಸ್ತಾನ್‌ದ ಉಗ್ರರ ಮೇಲೆ ದಾಳಿ ಮಾಡಿದ್ದನ್ನು ಸ್ವಾಗತಿಸಿ ಹಿಂದೂ ಜಾಗೃತಿ ಸೇನೆ ಹಾಗೂ ರಾಮ್ ಸೇನೆ ಕರ್ನಾಟಕ ಕಾರ್ಯಕರ್ತರು ಬುಧವಾರ ನಗರದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಲ್ಲಿ ಸಿಹಿ ಹಂಚಿ ಹಾಗೂ ಪಟಾಕಿಗಳನ್ನು ಸಿಡಿಸಿ ಸಂಭ್ರಮಿಸಿದರು.

ಸುಮಾರು 26 ಸಹೋದರಿಯರ ಸಿಂಧೂರ ಅಳಿಸಿದ ಪಾಕಿಸ್ತಾನಕ್ಕೆ ಆಪರೇಷನ್ ಸಿಂಧೂರ ಮೂಲಕ 9 ಉಗ್ರರ ತಾಣಗಳನ್ನು ಮತ್ತು 100 ಉಗ್ರರನ್ನು ಹತ್ಯೆ ಮಾಡುವ ಮೂಲಕ ತಕ್ಕ ಪಾಠ ಕಲಿಸಲಾಗಿದೆ ಎಂದು ಕಾರ್ಯಕರ್ತರು ಸಂಭ್ರಮಿಸಿದರಲ್ಲದೇ, ಭಾರತೀಯ ಸೇನೆಗೆ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಸುನಿಲ ಶಿರ್ಕೆ, ಮಹೇಶ್ ಕೆಂಭಾವಿ, ದಶರಥ್ ಇಂಗೋಳೆ, ಚಿದಾನಂದ್ ಮಠಪತಿ, ಪ್ರಶಾಂತ್ ಸಿರೂರ್, ರಮೇಶ್ ದೇಸಾಯಿ, ತನಿಷ್ ಗಾಜರೆ, ಕೇದಾರನಾಥ್ ಕಂಠಿ, ಶ್ರೀಮತಿ ದಿವ್ಯಾ ಹಾಗರಗಿ, ಶ್ವೇತಾ ಅವರೂ ಸೇರಿದಂತೆ ಅನೇಕ ಕಾರ್ಯಕರ್ತರು ಪಾಲ್ಗೊಂಡಿದ್ದರು.

ತಿಲಕ ಹಚ್ಚಿ ಸಂಭ್ರಮ: ಶ್ರೀಮತಿ ದಿವ್ಯಾ ಹಾಗರಗಿ ಅವರು ವಿಜಯೋತ್ಸವ ಸಂದರ್ಭದಲ್ಲಿ ಮಹಿಳಾ ಕಾರ್ಯಕರ್ತೆಯರಿಗೆ ಸಿಂಧೂರ ಹಚ್ಚಿ ಸಂಭ್ರಮಿಸಿದರು. 26 ಜನರನ್ನು ಹತ್ಯೆಮಾಡಿ ಅವರ ಪತ್ನಿಯರನ್ನು ವಿಧವೆಯರನ್ನಾಗಿ ಮಾಡಿದ್ದಲ್ಲದೇ ಭಯೋತ್ಪಾದಕರು ಮೋದಿ ಅವರಿಗೆ ಹೋಗಿ ಹೇಳಿ ಎಂದು ಹಾಸ್ಯ ಮಾಡಿದ್ದರು. ಪ್ರಧಾನಿಯವರು ದಿಟ್ಟ ನಿರ್ಧಾರ ಕೈಗೊಂಡು ಭಯೋತ್ಪಾದಕರ ಹುಟ್ಟು ಅಡಗಿಸಿದ್ದಾರೆ ಎಂದು ದಿವ್ಯಾ ಹಾಗರಗಿ ಅವರು ಹೇಳಿದರು.

# ಕರ್ತಾರ್‌ಪುರ ಕಾರಿಡಾರ್ ಬಂದ್, ಅಟ್ಟಾರಿ ಗಡಿಯಲ್ಲಿ ಬೀಟಿಂಗ್ ರಿಟ್ರೀಟ್ ರದ್ದು



ಮಲ್ಲಮ್ಮ ನುಡಿ ವಾರ್ತೆ

ಚಂಡೀಗಢ:ಮೇ.7:ಆಪರೇಷನ್ ಸಿಂಧೂರ್ ನಂತರ, ಪಂಜಾಬ್‌ನ ಗುರುದಾಸ್ಪುರ ಜಿಲ್ಲೆಯ ಡೇರಾ ಬಾಬಾನಾನಕ್‌ನಿಂದ ಪಾಕಿಸ್ತಾನದ ಕರ್ತಾರ್‌ಪುರದ ದರ್ಬಾರ್ ಸಾಹಿಬ್ ಗುರುದ್ವಾರದವರೆಗಿನ ಕರ್ತಾರ್‌ಪುರ ಕಾರಿಡಾರ್ ಅನ್ನು ಯಾತ್ರಿಕರಿಗೆ ಬಂದ್ ಮಾಡಲಾಗಿದೆ.

ಇನ್ನು ಅಮೃತಸರ ಬಳಿಯ ಅಟ್ಟಾರಿ ಗಡಿಯಲ್ಲಿ ನಡೆಯುತ್ತಿದ್ದ ಬೀಟಿಂಗ್ ರಿಟ್ರೀಟ್ ಅನ್ನು ಸಹ ಮುಂದಿನ ಸೂಚನೆ ಬರುವವರೆಗೆ ರದ್ದುಗೊಳಿಸಲಾಗಿದೆ.

ಭಾರತೀಯ ಸೇನೆ 'ಆಪರೇಷನ್ ಸಿಂಧೂರ್' ಹೆಸರಿನಲ್ಲಿ ಬುಧವಾರ ಬೆಳಗಿನ ಜಾವ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಉಗ್ರರ ನೆಲೆಗಳ ಮೇಲೆ ಕ್ಷಿಪಣಿ ದಾಳಿ ನಡೆಸುವ ಮೂಲಕ ಪಹಲ್ಗಾಮ್ ಉಗ್ರ ದಾಳಿಗೆ ಪ್ರತೀಕಾರ ತೀರಿಸಿಕೊಂಡಿದೆ.

ಕರ್ತಾರ್‌ಪುರದ ದರ್ಬಾರ್ ಸಾಹಿಬ್ ಗುರುದ್ವಾರಕ್ಕೆ ಹೋಗಲು ಇಂದು ಬೆಳಗ್ಗೆ ಕರ್ತಾರ್‌ಪುರ ಕಾರಿಡಾರ್ ತಲುಪಿದ್ದ ಸುಮಾರು 100 ಸಿಖ್ ಭಕ್ತರನ್ನು ಚೆಕ್‌ಪೋಸ್ಟ್‌ನಲ್ಲಿ ತಡೆಯಲಾಗಿದ್ದು, ಸುಮಾರು ಒಂದೂವರೆ ಗಂಟೆ ನಂತರ ಮನೆಗೆ ಮರಳುವಂತೆ ಅವರಿಗೆ ಸೂಚಿಸಲಾಯಿತು ಎಂದು ಮೂಲಗಳು ತಿಳಿಸಿವೆ.

ಇಂದು ಬೆಳಗಿನ ಜಾವದಿಂದ ನಡೆಯುತ್ತಿರುವ ಸಂಘರ್ಷದಿಂದಾಗಿ ಪಾಕಿಸ್ತಾನಕ್ಕೆ ತೆರಳಲು ಅವಕಾಶ ನೀಡಲಾಗುವುದಿಲ್ಲ ಎಂಬ ಆತಂಕದ ನಡುವೆ ಯಾತ್ರಿಕರು ಕರ್ತಾರ್‌ಪುರ ಕಾರಿಡಾರ್ ತಲುಪಿದ್ದರು. "ಪರಿಸ್ಥಿತಿ ಅನುಕೂಲಕರವಾಗಿಲ್ಲ ಎಂದು ಅಧಿಕಾರಿಗಳು ನಮಗೆ ತಿಳಿಸಿದರು ಮತ್ತು ಹಿಂತಿರುಗಲು ಸಲಹೆ ನೀಡಿದರು. ರಾಷ್ಟ್ರೀಯ ಹಿತಾಸಕ್ತಿ ಎಲ್ಲಕ್ಕಿಂತ ಹೆಚ್ಚು" ಎಂದು ಭಕ್ತರೊಬ್ಬರು ಹೇಳಿದ್ದಾರೆ.

ಕರ್ತಾರ್‌ಪುರ ಕಾರಿಡಾರ್ ಬಂದ್ ಮಾಡಿರುವುದನ್ನು ಖಚಿತಪಡಿಸಿದ ಹಿರಿಯ ಅಧಿಕಾರಿಯೊಬ್ಬರು, ಇಂದು ಬೆಳಗ್ಗೆ ಸುಮಾರು 500 ಯಾತ್ರಿಕರು ಕಾರಿಡಾರ್ ಮೂಲಕ ಪಾಕಿಸ್ತಾನದ ದರ್ಬಾರ್ ಸಾಹಿಬ್ ಗುರುದ್ವಾರಕ್ಕೆ ಭೇಟಿ ನೀಡಲು ನೋಂದಾಯಿಸಿಕೊಂಡಿದ್ದರು ಮತ್ತು ಸುಮಾರು 100 ಯಾತ್ರಿಕರು ಗಡಿ ದಾಟಲು ಬಂದಿದ್ದರು. ಆದರೆ ಕಾರಿಡಾರ್ ಮುಚ್ಚಿರುವುದರಿಂದ ವಾಪಸ್ ಮನೆಗೆ ತೆರಳಲು ಸೂಚಿಸಲಾಯಿತು" ಎಂದು ಹೇಳಿದ್ದಾರೆ.

# ಹಿಂದಿಯಲ್ಲಿ ಅಂಗನವಾಡಿ ಅಭ್ಯರ್ಥಿಗಳ ವಿಚಾರಣೆ: ಉಪ ವಿಭಾಗಾಧಿಕಾರಿ ವರ್ಗಾವಣೆಗೆ ಆಗ್ರಹ



ಮಲ್ಲಮ್ಮನುಡಿವಾರ್ತೆ ಬೀದರ. ಮೇ. 07 : ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಈ ಮೂಲಕ ತಮ್ಮಲ್ಲಿ ಮನವರಿಕೆ ಮಾಡಿಕೊಳ್ಳುವುದೇನೆಂದರೆ, ದಿನಾಂಕ: 06–05–2025 ರಂದು ಮಾನ್ಯ ಸಹಾಯಕ ಆಯುಕ್ತರು ಬಸವ ಕಲ್ಯಾಣ ರವರು ತಮ್ಮ ಕಛೇರಿಯಲ್ಲಿ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳಿಗೆ ಬಂದ ಅಕ್ಷೆಪಣೆಗಳ ವಿಚಾರಣೆ ನಡೆಸಲು ಸಭೆಯನ್ನು ಕರೆದಿದ್ದರು. ಅದರಂತೆ ಸದರಿ ಸಭೆಯಲ್ಲಿ ಅವರವರ ತಾಲೂಕುಗಳ ಗ್ರಾಮಗಳಿಂದ ಅನೇಕ ಅಭ್ಯರ್ಥಿಗಳು ಹಾಗೂ ಅಕ್ಷೆಪಣೆದಾರರೂ ಭಾಗವಹಿಸಿ ತಮ್ಮ ತಮ್ಮ ದೂರುಗಳನ್ನು ಹೆಳುತಿದ್ದರು ಆದರೆ ಸದರಿ ಜನರ ಭಾಷೆಯ ಜ್ಞಾನವಿಲ್ಲದ ಅಂದರೆ ಕನ್ನಡ ಭಾಷೇಯ ಕನಿಷ್ಠ ಜ್ಞಾನವು ಇಲ್ಲದ ಸಹಾಯಕ ಆಯುಕ್ತರು ಜನರ ಮಾತುಗಳು ಅರ್ಥವಾಗದೆ ಅವರ ದೂರಿಗೆ ಸಮರ್ಪಕವಾದ ಉತ್ತರವನ್ನು ನೀಡದೆ ತಮಗೆ ತಿಳಿದಂತೆ ಹಿಂದಿಯಲ್ಲಿ ಉತ್ತರಿಸಿರುತ್ತಾರೆ ಆದರೆ ಅವರ ಉತ್ತರದಿಂದ ಬಂದಂತಹ ಜನರಿಗೆಯಾವುದೇ ಪ್ರಯೋಜನವಾಗಿರುವುದಿಲ್ಲ ಅಲ್ಲದೆ ಅವರು ಕರೇದ ವಿಚಾರಣೆ ಸಭೆಯಿಂದ ಬಂದಂತಹ ಎಲ್ಲಾ ಜನರಿಗೆ ತೊಂದರೆಯಾಗಿದೆಯೆ ಹೊರತು ಅನುಕೂಲವಾಗಿರುವುದಿಲ್ಲ.ಅಲ್ಲದೆ ಸದರಿ ಹುದ್ದೆಯಲ್ಲಿರುವವರಿಗೆ ಕನ್ನಡ ಭಾಷೆಯ ಜ್ಞಾನವು ಅಗತ್ಯವಾಗಿರುತ್ತದೆ ಆದರೆ ಸದರಿ ಅಧಿಕಾರಿಗಳಿಗೆ ಕನ್ನಡದ ಕನಿಷ್ಠ ಜ್ಞಾನವು ಇರುವುದಿಲ್ಲ ಇದರಿಂದ ಅನೇಕ ಜನರಿಗೆ ತೊಂದರೆಯಾಗುತ್ತಿದೆ.

ಆದ್ದರಿಂದ ಸದರಿ ಅಧಿಕಾರಿಗಳನ್ನು ಕೂಡಲೆ ವರ್ಗಾವಣೆ ಮಾಡಿ ಕನ್ನಡ ಭಾಷೆ ಜ್ಞಾನ ಇರುವ ಅಧಿಕಾರಿಯನ್ನು ನೇಮಿಸಿ ಜನರಿಗೆ ತೊಂದ–ರೆಯಾಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಪ್ರಕಾಶ್ ಹಳ್ಳಿಖೇಡ ಸಂಸ್ಥಾಪಕ ರಾಜ್ಯಾಧ್ಯಕ್ಷರು ದಲಿತ ರಕ್ಷಣಾ ಹೋರಾಟ ಸಮಿತಿ ಮನವಿ ಮಾಡಿದೆ.

# ಬುರ್ಖಾ ಧರಿಸಿ ಕಳ್ಳತನ: ಇಬ್ಬರ ಸೆರೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.7: ಜಿಲ್ಲೆಯ ಆಳಂದ್ ಪಟ್ಟಣದ ಬಸ್ ನಿಲ್ದಾಣ ಸೇರಿ ಸಂತೆಯಲ್ಲಿ ಬುರ್ಖಾ ಧರಿಸಿಕೊಂಡು ಅಮಾಯಕ ಮಹಿಳೆಯರ ಹಣ, ಒಡವೆಗಳನ್ನು ದೋಚ್ಚುತ್ತಿದ್ದ ಇಬ್ಬರು ಕಳ್ಳಿಯರನ್ನು ಬಂಧಿಸುವಲ್ಲಿ ಆಳಂದ್ ಠಾಣೆಯ ಪೊಲೀಸರು ಯಶಸ್ವಿಯಾಗಿದ್ದಾರೆ.ಬಂಧಿತರನ್ನು ನಗರದ ಬಾಪುನಗರದ ನಿವಾಸಿ ವ್ಯಾಪಾರಿ ಸರಿತಾ (32) ಮತ್ತು ನಗರದ ಹೊರವಲಯದಲ್ಲಿನ ನಾಗನಳ್ಳಿ ಕ್ರಾಸ್ ನಿವಾಸಿ ಬಟ್ಟೆ ವ್ಯಾಪಾರಿ ಕರುಣಾನಿಧಿ (30) ಎಂದು ಗುರುತಿಸಲಾಗಿದೆ. ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕೆ ಒಳಪಡಿಸಿದ್ದು, ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ 1.18ಲಕ್ಷರೂ. ಮೌಲ್ಯದ ಮುದ್ದೆಮಾಲು ಸೇರಿ ನಗದು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿದು ಬಂದಿದೆ.

ಬಸ್ ಹತ್ತುವಾಗ ಇಳಿಯುವಾಗ ಅಮಾಯಕ ಮಹಿಳೆಯರನ್ನೇ ಟಾರ್ಗೆಟ್ ಮಾಡಿ ಅವರ ಒಡವೆ, ಹಣ ದೋಚ್ಚುತ್ತಿದ್ದ ಈ ಕಳ್ಳಿಯರು ಕೊನೆಗೂ ಪೊಲೀಸ್ ಅತಿಥಿಯಾಗಿದ್ದು, ಸೋಮವಾರ ಬಸ್ ನಿಲ್ದಾಣದಲ್ಲೇ ಕೃತ್ಯ ಎಸುಗುವಾಗ ಪೊಲೀಸರ ಕೈಗೆ ಸಿಕ್ಕಿಕೊಂಡಿದ್ದಾರೆ ಎನ್ನಲಾಗಿದೆ.

ಆರೋಪಿಗಳಿಂದ 7 ಗ್ರಾಂ ಚಿನ್ನದ ಒಡವೆ, 73,000 ರೂ.ಗಳ ಹಣ ಸೇರಿ ಒಟ್ಟು 1.18 ಲಕ್ಷ ರೂ.ಗಳ ಮೌಲ್ಯದ ಮುದ್ದೆಮಾಲು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಕಳ್ಳಿಯರ ಬಂಧನ ಕಾರ್ಯಾಚರಣೆಗೆ ಡಿವೈಎಸ್ಪಿ ಗೋಪಿ ಬಿ.ಆರ್. ಅವರ ಮಾರ್ಗದರ್ಶನದಲ್ಲಿ ಆಳಂದ್ ಠಾಣೆಯ ಪಿಐ ಶರಣಬಸಪ್ಪ ಕೋಡ್ಲಾ ಅವರ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದೆ.ಪಿಎಸ್‌ಐ ಭೀಮಾಶಂಕರ್ ಬಂಕ್ಲಿ, ತನಿಖಾ ವಿಭಾಗದ ಪಿಎಸ್‌ಐ ಸಂಜೀವರೆಡ್ಡಿ, ಸಿಬ್ಬಂದಿಗಳಾದ ಯುವರಾಜ್, ಮುಹಿಬೂಬ್ ಶೇಖ್, ಚಂದ್ರಶೇಖರ್, ಗಣಪತಿರಾವ್ ಘಂಟೆ, ಸಚೀನ್ ಜಾಕೀರ್, ವೆಂಕಟರಾವ್, ಸಿದ್ಧರಾಮ್, ಮೌಲಾಲಿ ಅವರ ತಂಡವು ಖಚಿತ ಮಾಹಿತಿ ಮೇರೆಗೆ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ. ಯಶಸ್ವಿ ಕಾರ್ಯಾಚರಣೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಅವರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

# ಪಾಪಿಗಳ ಸರ್ವನಾಶ ಶುರು: ಶಾಸಕ ಬೆಲ್ದಾಳೆ



ಬೀದರ್,ಮೇ.7:ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತದ ಸೇನೆ ಆಪರೇಷನ್ "ಸಿಂಧೂರ್" ಕಾರ್ಯಾಚರಣೆ ಮುಖಾಂತರ ಪಾಕಿಸ್ತಾನದೊಳಗೆ ನುಗ್ಗಿ ಭಯೋತ್ಪಾದಕರ 9 ಪ್ರಮುಖ ನೆಲೆಗಳನ್ನು ಧ್ವಂಸಗೊಳಿಸಿ ಶತ್ರು ರಾಷ್ಟ್ರ ಮಾತ್ರವಲ್ಲ, ಇಡೀ ವಿಶ್ವಕ್ಕೆ ತನ್ನ ಶಕ್ತಿ, ಸಾಹಸ, ಸಾಮರ್ಥ್ಯ ಹಾಗೂ ಪರಾಕ್ರಮ ತೋರಿಸಿಕೊಟ್ಟಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ ಹಾಗೂ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಬಣ್ಣಿಸಿದ್ದಾರೆ. ಕಳೆದ ಏಪ್ರಿಲ್ 22ರಂದು ಪಹಲ್ಗಾಮ್ ದಾಳಿಯಲ್ಲಿ ಅಮಾಯಕ 27 ಪ್ರವಾಸಿಗರನ್ನು ಕ್ರೂರವಾಗಿ ಹತ್ಯೆಗೈದ ಭಯೋತ್ಪಾದಕರ ವಿರುದ್ಧ ಕಠೋರ ಕ್ರಮ ಕೈಗೊಳ್ಳುವುದು ನಿಶ್ಚಿತ ಎಂದು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದರು. ನುಡಿದಂತೆ ನಡೆದು ತೋರಿಸಿದ್ದಾರೆ. ಭಾರತದ ಸೇನಾ ವಿಮಾನಗಳು ಪಾಕಿಸ್ತಾನದೊಳಗೆ ನುಗ್ಗಿ ಉಗ್ರರ ಬೇಟೆಯಾಡಿದೆ. ಉಗ್ರರನ್ನು ಬೇರು ಸಮೇತ ಕಿತ್ತೊಗೆಯಲು ಕೇಂದ್ರ ಸರ್ಕಾರ ಸಜ್ಜಾಗಿದೆ. ಭಯೋತ್ಪಾದಕರ ಕುರಿತು ನಮ್ಮದು ಜಿರೋ ಟಾಲರೆನ್ಸ್ ಇದೆ ಎಂದು ಮೋದಿಜಿ ಸ್ಪಷ್ಟವಾಗಿ ಹೇಳಿದ್ದಾರೆ. ಉಗ್ರರ ದಮನ, ಪಾಪಿಗಳ ಸರ್ವನಾಶ ಈಗ ನಿಶ್ಚಿತವಾಗಿದೆ. ಉಗ್ರರ ರಕ್ಷಕ ಪಾಕಿಸ್ತಾನಕ್ಕೂ ಸಹ ತಕ್ಕ ಪಾಠ ಸಿಗಲಿದೆ. ಕೇಂದ್ರ ಸರ್ಕಾರ, ಭಾರತೀಯ ಸೇನೆಗೆ ಸೆಲ್ಯೂಟ್ ಹೇಳುವೆ. ನಮ್ಮ ಸೇನೆ–ನಮ್ಮ ಹೆಮ್ಮೆ ಎನಿಸಿದೆ ಎಂದು ಅವರು ಹೇಳಿಕೆಯಲ್ಲಿ ಸಂತೋಷ ವ್ಯಕ್ತಪಡಿಸಿದ್ದಾರೆ.

ಭಾರತದ ಸ್ವಾತಂತ್ರ್ಯದ ಬಳಿಕ ಪಾಕಿಸ್ತಾನ ನಿರಂತರವಾಗಿ ಭಯೋತ್ಪಾದಕರ ಮೂಲಕ ದೇಶದಲ್ಲಿ ವಿಧ್ವಂಸಕ ಕೃತ್ಯಗಳು ನಡೆಸುತ್ತಿದೆ. ದೇಶದೊಳಗೆ ಅತಿಕ್ರಮ ಪ್ರವೇಶ ಮಾಡುತ್ತಿದೆ. ಈ ಹಿಂದೆ ಭಾರತದೊಂದಿಗೆ ನಾಲ್ಕು ಯುದ್ಧ ಮಾಡಿದೆ. ಈ ನಾಲ್ಕೂ ಯುದ್ಧದಲ್ಲಿ ಹೀನಾಯ ಸೋಲು ಕಂಡಿದೆ. ಆದರೂ ಪಾಠ ಕಲಿಯದೆ ಭಂಡತನ ಪ್ರದರ್ಶಿಸುತ್ತಿದೆ. ಆರ್ಥಿಕವಾಗಿ ದಿವಾಳಿಯಾಗಿ ಕಂಗಾಲಾದ ಪಾಪಿ ಪಾಕಿಸ್ತಾನಕ್ಕೆ ನಿರೀಕ್ಷೆಗೂ ಮೀರಿದ ರೀತಿಯಲ್ಲಿ ಭಾರತ ಈ ಬಾರಿ ಮಣ್ಣು ಮುಕ್ಕಿಸಲಿದೆ. ಪಾಕ್ ಆಕ್ರಮಿತ ಕಾಶ್ಮೀರ ಸಹ ಭಾರತದ ಸುಪರ್ದಿಗೆ ಬರುವ ದಿನಗಳು ಈಗ ಸನ್ನಿಹಿತವಾಗಿವೆ. ಮೋದಿ ಹೈ ತೊ ಸಬ್ ಮುಮಕಿನ್ ಹೈ ಎಂಬುದು ಮತ್ತೆ ಸಾಬೀತಾಗಲಿದೆ ಎಂದು ಅವರು ಹೆಮ್ಮೆ ವ್ಯಕ್ತಪಡಿಸಿದ್ದಾರೆ.

# ಛತ್ತಿಸ್‌ಗಢದ ಬಿಜಾಪುರ ಜಿಲ್ಲೆಯ ಅರಣ್ಯದಲ್ಲಿ 15 ನಕ್ಸಲರ ಹತ್ಯೆ



ಬಿಜಾಪುರ,ಮೇ7:ತೆಲಂಗಾಣದ ಗಡಿಯಲ್ಲಿರುವ ಛತ್ತಿಸ್‌ಗಢದ ಬಿಜಾಪುರ ಜಿಲ್ಲೆಯ ಅರಣ್ಯದಲ್ಲಿ ಇಂದು ಭದ್ರತಾ ಪಡೆಗಳು ನಡೆಸಿದ ಎನ್ ಕೌಂಟರ್ ನಲ್ಲಿ 15ಕ್ಕೂ ಹೆಚ್ಚು ನಕ್ಸಲರು ಸಾವನ್ನಪ್ಪಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅಂತರರಾಜ್ಯ ಗಡಿಯಲ್ಲಿರುವ ಕರ್ರೆಗುಟ್ಟಾ ಹಿಲ್ಸ್ ಅರಣ್ಯದಲ್ಲಿ ಇಂದು ಬೆಳಿಗ್ಗೆ ಗುಂಡಿನ ಚಕಮಕಿ ನಡೆದಿದೆ ಎಂದು ಅವರು ಹೇಳಿದರು. ಈವರೆಗೆ 15 ಕ್ಕೂ ಹೆಚ್ಚು ನಕ್ಸಲರು ಸಾವನ್ನಪ್ಪಿದ್ದಾರೆ ಮತ್ತು ಕಾರ್ಯಾಚರಣೆ ಮುಂದುವರೆದಿದೆ ಎಂದು ಅವರು ಹೇಳಿದರು. ಬಸ್ತಾರ್ ಪ್ರದೇಶದಲ್ಲಿ ನಡೆಯುತ್ತಿರುವ ಆಪರೇಷನ್ ಸಂಕಲ್ಪವು ಜಿಲ್ಲಾ ರಿಸರ್ವ್ ಗಾರ್ಡ್ (ಡಿಆರ್‌ಜಿ), ಬಸ್ತಾರ್ ಫೈಟರ್ಸ್, ವಿಶೇಷ ಕಾರ್ಯಪಡೆ (ಎಸ್ಟಿಎಫ್), ರಾಜ್ಯ ಪೊಲೀಸ್‌ನ ಎಲ್ಲಾ ಘಟಕಗಳು, ಕೇಂದ್ರ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ಮತ್ತು ಅದರ ಗಣ್ಯ ಘಟಕ ಕೋಬ್ರಾ ಸೇರಿದಂತೆ ವಿವಿಧ ಘಟಕಗಳಿಗೆ ಸೇರಿದ ಸುಮಾರು 24,000 ಭದ್ರತಾ ಸಿಬ್ಬಂದಿಯನ್ನು ಒಳಗೊಂಡಿದೆ. ಮಾವೋವಾದಿಗಳ ಪ್ರಬಲ ಮಿಲಿಟರಿ ರಚನೆಯಾದ ಬೆಟಾಲಿಯನ್ ಸಂಖ್ಯೆ 1 ರ ಹಿರಿಯ ಕಾರ್ಯಕರ್ತರು ಮತ್ತು ತೆಲಂಗಾಣ ರಾಜ್ಯ ಸಮಿತಿಯ ಉಪಸ್ಥಿತಿಯ ಬಗ್ಗೆ ಮಾಹಿತಿಯ ಆಧಾರದ ಮೇಲೆ ಏಪ್ರಿಲ್ 21 ರಂದು ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ.

### ಮಾಣಿಕ ನಗರ; ರಾಷ್ಟ್ರೀಯ ಸೇವಾ ಯೋಜನೆ ಕುರಿತು ವಿಶೇಷ ಉಪನ್ಯಾಸ

# ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಹೊಣೆ : ಕಾವಡಿ

(ರಾಜು ಪೂಜಾರಿ)

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಇಂದಿನ ನಾಗರಿಕ ಜಗತ್ತಿನಲ್ಲಿ ಪರಿಸರ ಸಂರಕ್ಷಣೆ ಮಾಡುವುದು ಪ್ರತಿಯೊಬ್ಬರ ಹೊಣೆಯಾಗಿದೆ ಎಂದು ಪರಿಸರವಾದಿ ಮತ್ತು ಪತ್ರಕರ್ತ ಶೈಲೇಂದ್ರ ಕಾವಡಿ ಹೇಳಿದರು.

ಮಾಣಿಕ ನಗರ ಗ್ರಾಮದ ಮಾಣಿಕ ವಿದ್ಯಾಲಯ ಆವರಣದಲ್ಲಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೀದರ್ ವಿಶ್ವವಿದ್ಯಾಲಯ ಬೀದರ್ ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜು ಹುಮನಾಬಾದ್ ವತಿಯಿಂದ ನಡೆದ 2024-25ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನೆ ಮತ್ತು ಪರಿಸರ ಸಂರಕ್ಷಣೆಯಲ್ಲಿ ಯುವಕರ ಪಾತ್ರ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.




ಗಣಿಗಾರಿಕೆ, ಜಲ-ವಾಯು ಮಾಲಿನ್ಯಗಳಿಂದ ಪರಿಸರ ಕಲುಷಿತವಾಗುತ್ತಿದೆ ಹಾಗೂ ಅರಣ್ಯ ನಾಶವಾಗುತ್ತಿದೆ. ಸಕಲ ಜೀವ ಸಂಕುಲಕ್ಕೆ ಅರ್ಥಪೂರ್ಣ ಬದುಕು ನೀಡಿರುವ ಭೂಮಿ ಸಂರಕ್ಷಣೆಯಲ್ಲಿ ವಿಫಲರಾಗಿದ್ದೇವೆ. ಭೂಮಿ ಪ್ರಾಮುಖ್ಯತೆ ಕುರಿತು ಎಲ್ಲರೂ ಗಂಭೀರವಾಗಿ ಚಿಂತನೆ ಮಾಡಬೇಕು ಎಂದರು.

ಆರ್ಥಿಕ ಬೆಳವಣಿಗೆ ಹಾಗೂ ಇತರೆ ಅಭಿವೃದ್ಧಿ ಕಾರ್ಯಗಳಿಗೆ ಭೂಮಿ ಮತ್ತು ಪರಿಸರ ಪೂರಕವಾಗಿವೆ. ಭೂಮಿಯಲ್ಲಿ ಹೇರಳ ಸಂಪನ್ಮೂಲವಿದೆ, ಅದನ್ನು ಮಿತವಾಗಿ ಹಾಗೂ ವೈಜ್ಞಾನಿಕವಾಗಿ ಬಳಸವುದು ಅನಿವಾರ್ಯವಾಗಿದೆ ಎಂದು ತಿಳಿಸಿದರು. ಸಕಲ ಜೀವ ಸಂಕುಲಕ್ಕೆ ಭೂಮಿ ಆಧಾರಾಗಿದೆ. ಸೌರಮಂಡಲದಲ್ಲಿ ವೈವಿಧ್ಯಮಯ ಜೀವರಾಶಿ ಹೊಂದಿದ ಏಕೈಕ ಗೃಹ ಭೂಮಿ. ಇದನ್ನು ಉಳಿಸಿ ಬೆಳೆಸುವುದು ಹಾಗೂ ನಮ್ಮ ಮುಂದಿನ ಪೀಳಿಗೆಗೆ ಆರೋಗ್ಯಕರ ಭೂಮಿ ಹಸ್ತಾಂತರಿಸುವುದು ಎಲ್ಲರ ಜವಾಬ್ದಾರಿಯಾಗಿದೆ. ತಾಜ್ಯ ನಿರ್ವಹಣೆಯಲ್ಲಿ ವೈಜ್ಞಾನಿಕ ಕ್ರಮ ಅನುಸರಿಸಬೇಕು.

ಪ್ಲಾಸ್ಟಿಕ ಬಳಕೆ ಕಡಿಮೆ ಮಾಡಬೇಕು ಎಂದು ಸಲಹೆ ನೀಡಿದರು. ರಾಷ್ಟ್ರೀಯ ಸೇವಾ ಯೋಜನೆಯ ನಿಮಿತ್ತ ವಿದ್ಯಾರ್ಥಿಗಳಿಂದ ಸ್ವಚ್ಛತೆ ಕಾರ್ಯಕ್ರಮ ನಡೆಯಿತು.

ಬಳಿಕ ನೃತ್ಯ, ಸಂಗೀತ ಸೇರಿದಂತ ವಿವಿಧ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮದ ಅಧಿಕಾರಿ ಡಾ. ಶಾಂತಕುಮಾರ ಬನಗುಂಡಿ, ಯೋಜನೆ ಘಟಕದ ಅಧಿಕಾರಿ ಶಿವಾಜಿ ರಾಠೋಡ, ಡಾ. ಶಿವಶರಣಪ್ಪ, ಶಿವಾನಂದ ಹಿರೇಮಠ, ನರಸಿಂಗ ಗಾಯಕ್ವಾಡ, ಪತ್ರಕರ್ತ ಗುಂಡು ಅತಿವಾಳ, ಪತ್ರಕರ್ತ ಶರಣು ಚಾಂಗಲೇರಾ ಇದ್ದರು. ಬಸವಪ್ರಸಾದ ಸ್ವಾಗತಿಸಿದರು. ಭಾಗ್ಯಶ್ರೀ ಭಂಡಿ ತಾಳಮಡಗಿ ನಿರೂಪಿಸಿದರು. ರಂಜೀತಾ ವಂದಿಸಿದರು.



ಪರಿಸರದಲ್ಲಿನ ಹೆಚ್ಚಿನ ಗಿಡ ಮರಗಳನ್ನು ನಾಶ ಮಾಡುತ್ತಿರುವ ಹಿನ್ನಲೆ ಪ್ರಕೃತಿಯಲ್ಲಿ ತಾಪಮಾನ ಹೆಚ್ಚಾಗುತ್ತಿದೆ. ಹೀಗಾಗಿ ಪ್ರಜ್ಞಾವಂತ ನಾಗರಿಕರು ಭವಿಷ್ಯದ ಉಳಿವಿಗಾಗಿ ಪರಿಸರ ರಕ್ಷಣೆಗೆ ಕೈಜೋಡಿಸುವ ಮೂಲಕ ಸಾರ್ವಜನಿಕ ವಲಯದಲ್ಲಿ ಜಾಗೃತಿ ಮೂಡಿಸುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು.

**-ಡಾ. ಶಾಂತಕುಮಾರ**
**ಎನ್‌ಎಸ್‌ಎಸ್ ಅಧಿಕಾರಿ, ಸರಕಾರಿ ಪದವಿ ಕಾಲೇಜು ಹುಮನಾಬಾದ್**



ವಿಶ್ವದಲ್ಲಿಯೇ ಭಾರತ ಸಂಸ್ಕೃತಿ ಪರಂಪರೆಗೆ ವಿಶೇಷ ಸ್ಥಾನಮಾನ ಎದೆ. ಈ ಭವ್ಯ ಭಾರತದಲ್ಲಿ ಹುಟ್ಟಿದ ನಾವು ನಮ್ಮ ಸಂಸ್ಕೃತಿ ಉಳಿಸಿ, ಬೆಳಸಬೇಕು. ಜತೆಗೆ ಮಾನವೀಯತೆ ಮೌಲ್ಯಗಳನ್ನು ಮೈಗೂಡಿಸಿಕೊಂಡು ಗುರು ಹಿರಿಯರನ್ನು ಗೌರವಿಸುವ ಮೂಲಕ ಉತ್ತಮ ನಾಗರಿಕರಾಗಿ ಜೀವನ ಸಾಗಿಸಬೇಕು.

**-ಸಜೀಶ ಲಂಬುನೋರ್**
**ಪತ್ರಕರ್ತ, ಹುಮನಾಬಾದ್**



ಸದೃಡ ಸಮಾಜದ ನಿರ್ಮಾಣಕ್ಕಾಗಿ ಯುವಕ, ಯುವತಿಯರು ಒಗ್ಗೂಡಿ ಕೆಲಸ ಮಾಡಬೇಕು. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸತತ ಪ್ರಯತ್ನ, ನಿರಂತರ ಅಧ್ಯಾಯನ ಮಾಡಬೇಕು. ಅಲ್ಲದೇ ಮನೆಗೊಂದು ಮರ ನೆಟ್ಟು ಪ್ರಕೃತಿ ಉಳಿವಿಗೆ ಶ್ರಮಿಸಬೇಕು.

**-ರಾಜು ಪೂಜಾರಿ**
**ಪತ್ರಕರ್ತ, ಹುಮನಾಬಾದ್**



ಬಸವಕಲ್ಯಾಣ :- ಕಲಬುರ್ಗಿಯ ಮತಕ್ಷೇತ್ರದ ಲೋಕಸಭಾ ಸದಸ್ಯರಾದ ಸನ್ಮಾನ್ಯ ಶ್ರೀ ರಾಧಾಕೃಷ್ಣ ದೊಡ್ಡಮನಿ ಅವರು ಹಾರಕೂಡ ಶ್ರೀಮಠಕ್ಕೆ ಆಗಮಿಸಿದಾಗ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಎಂಎಲ್ಸಿ ಜಗದೇವಯ್ಯ ಗುತ್ತೇದಾರ್, ಮಲ್ಲಿನಾಥ ಹಿರೇಮಠ ಹಾರಕೂಡ, ಶುಭಾಷ್ ಮುರುಡ, ಶಿವರಾಜ ಕರಹರಿ, ಅಪ್ಪಣ್ಣ ಜನವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ರತ್ನ ಸಂತೋಷಗೆ ವಿಶೇಷ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪ್ರಸಕ್ತ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ರತ್ನ ಸಂತೋಷಗೆ ತಾಲೂಕಿನ ಹಳ್ಳಿಖೇಡ (ಬಿ) ಪಟ್ಟಣದಲ್ಲಿ ಸುರೇಶ ಸೀಗಿ ಅಭಿಮಾನಿ ಬಳಗದಿಂದ ಹಾಗೂ ಅಖಿಲ ಕರ್ನಾಟಕ ಬ್ರಾಹ್ಮಣ ಸಮಾಜದ ವತಿಯಿಂದ ಸನ್ಮಾನಿಸಿ, ಗೌರವಿಸಲಾಯಿತು.



ಜೆಡಿಎಸ್ ಮುಖಂಡ ಸುರೇಶ ಸೀಗಿ ಮಾತನಾಡಿ, ರತ್ನ ಸಂತೋಷ ಬಹಳ ಬಡತನದಲ್ಲಿ ಇದ್ದರು ಕೂಡಾ ಸಮಸ್ಯೆಗಳಿಗೆ ಎದೆಗುಂದದೆ ಎಲ್ಲವನ್ನು ಮೆಟ್ಟಿನಿಂತು ಕಠಿಣ ಪರಿಶ್ರಮದೊಂದಿಗೆ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಹಿನ್ನಲೆ ಅವಳಿಗೆ ವಿಶೇಷ ಸನ್ಮಾನ ಮಾಡಲಾಗುತ್ತಿದೆ ಎಂದರು.

ಅಖಿಲ ಕರ್ನಾಟಕ ಬ್ರಾಹ್ಮಣ ಸಮಾಜದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ ಮಾತನಾಡಿ, ಶೈಕ್ಷಣಿಕ ಕ್ಷೇತ್ರದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ನಿರಂತರ ಅಭ್ಯಾಸ ಮಾಡುವ ಮೂಲಕ ತಮ್ಮ ಸಾಧನೆಯತ್ತ ಹೆಚ್ಚಿನ ಗಮನ ಹರಿಸಬೇಕು. ಪ್ರಸ್ತುತ ಸಾಲಿನಲ್ಲಿ ರತ್ನ ಸಂತೋಷ ಮಾಡಿರುವ ಸಾಧನೆ ಹೀಗೆ ಮುಂದು ವರಿಯಲಿ, ಅವಳು ಕಂಡ ಕನಸು ನನಸಾಗಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಮಿಲಿಂದ ಕುಲಕರ್ಣಿ, ಜಗನಾಥ ಪಾಟೀಲ್, ಗೌತಮ ಸಾಗರ್, ಶ್ರೀನಾಥ ದೇವಣಿ, ಮಲ್ಲೇಶ ಶಂಕರಶಟ್ಟಿ, ರಾಘವೇಂದ್ರ ಜಾಜಿ, ಬಸವರಾಜ ರುದ್ರವಾಡಿ, ಶಂಕರ ಅವಳಿ ಸೇರಿ ಅನೇಕರಿದ್ದರು.

# ಉಗ್ರರ ಮೇಲೆ ದಾಳಿ; ಸಂಭ್ರಮಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ : ಪಾಕಿಸ್ತಾನದ ಉಗ್ರರ ಮೇಲೆ ದಾಳಿ ನಡೆಸಿ ಪ್ರತಿಕಾರ ತೀರಿಸಿಕೊಂಡ ಹಿನ್ನಲೆ ಭಾರತ ಸರಕಾರದ ನಿರ್ಧಾರಕ್ಕೆ ಮತ್ತು ಸೈನಿಕರ ದಿಟ್ಟ ಹೋರಾಟಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ ಚಿಟಗುಪ್ಪ ಪಟ್ಟಣದಲ್ಲಿ ಆರ್ಯವೈಶ್ಯ ಯೂತ್ ಕ್ಲಬ್ ವತಿಯಿಂದ ಬುಧವಾರ ವಿಜಯೋತ್ಸವ ಸಂಭ್ರಮದಿಂದ ಆಚರಿಸಲಾಯಿತು. ಪಟ್ಟಣದ ಐತಿಹಾಸಿಕ ನಗರೇಶ್ವರ ದೇವಸ್ಥಾನದ ಆವರಣದಲ್ಲಿ ಬೈಕ್ ರ್ಯಾಲಿಗೆ ಚಾಲನೆ ನೀಡಿ ಪ್ರಮುಖ ಬೀದಿಗಳ ಮಾರ್ಗಗಳ ಮೂಲಕ ಪಟ್ಟಣದ ಬೇಸ್ ವರೆಗೆ ಮೇವಣಿಗೆ ನಡೆಸಿ ಭಾರತ ಮಾತೆಗೆ ಜೈ, ಜೈಕಾರ ಕೂಗಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ರಾಜಗೋಪಾಲ ಐನಾಪೂರ, ವೆಂಕಟೇಶ್ ಐನಾಪೂರ, ಸಾಯಿ ಮಂಕಲ್, ಸೀನು ಬುದ್ದಾ, ವೆಂಕಟ್ ಅತ್ನೂರ್, ಬಾಬು ಗಾದಾ, ಪ್ರಸಾದ್ ರಾಸೂರ್, ಸಂತೋಷ್ ಮಾದರ್ಗಾನ್, ಭದ್ರುಬಾವಗಿ, ರಾಘು ರಘೋಜಿ, ರಾಘು ಐನಾಪುರ, ನಿಖಿಲ್ ಗಾದಾ, ಅಭಿಷೇಕ್ ಗಾದ ಹಾಗೂ ಆರ್ಯ ವೈಶ್ಯ ಯೂತ್ ಕ್ಲಬ್ ಸದಸ್ಯರು ಸೇರಿ ಅನೇಕರಿದ್ದರು.

# ಶ್ರೀ ಬಸವೇಶ್ವರ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿನಿ ನಗರಕ್ಕೆ ಪ್ರಥಮ ಸ್ಥಾನ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: - ಮೆ 7 ನಗರದ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯ ಶ್ರೀ ಬಸವೇಶ್ವರ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಐಶ್ವರ್ಯ ದಿಲೀಪಕುಮಾರ ಶೇ. 98.88 ಅಂಕ ಪಡೆದು ಎಸ್ಸೆಸ್ಸೆಲ್ಸಿಯಲ್ಲಿ ನಗರಕ್ಕೆ ಪ್ರಥಮ ಸ್ಥಾನಗಳಿಸಿದ್ದಾಳೆ.

ಶಾಲೆಯ 21 ವಿದ್ಯಾರ್ಥಿಗಳು ಅಗ್ರ ಶ್ರೇಣಿಯಲ್ಲಿ ಮತ್ತು 51ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಪಾಸಾಗಿದ್ದಾರೆ.

ಸ್ಫೂರ್ತಿ ರೇವಣಸಿದ್ದಯ್ಯ ಶೇ 98.04 ಪಡೆದು ಶಾಲೆಗೆ ದ್ವಿತೀಯ ಹಾಗೂ ಅಂಕಿತಾ ಸದಾನಂದ ಮತ್ತು ನಿಕಿತಾ ಅಶೋಕ್ ತಲಾ ಶೇ. 97.6 ತೃತೀಯ ಸ್ಥಾನಗಳಿಸಿದ್ದಾರೆ.

ಭವಾನಿ ಸಂಜೀವ್ ಕುಮಾರ್ 96.32, ಪ್ರೀತಿ ರೇವಣಸಿದ್ದಯ್ಯ 96.32, ವಿಠಲ್ ರೆಡ್ಡಿ ಕಾಶಿನಾಥ್ ರೆಡ್ಡಿ 96.16, ಮಾಲಾಶ್ರೀ ಕೈಲಾಸ್ 95.04, ರಾಹುಲ್ ಸಂತೋಷ್ 94.04, ಭಾಗ್ಯವಂತಿ ನಂದಪ್ಪ 93.6, ಮಂಥನ್ ಕಿಶೋರ್ 89.92, ವಿನಯ್ ಶಿವಕುಮಾರ್ 89.92, ಸಾಕ್ಷಿ ಸಂತೋಷ್ 89.26, ವಿಶಾಲ್ ಸುರೇಕಾಂತ್ 89.28, ಆರ್ಯ ನವನಾಥ 88.08, ಶ್ರೇಯಸ್ ಸೂರ್ಯಕಾಂತ್ 86.88, ರೇವಣಸಿದ್ದಪ್ ರಾಜಕುಮಾರ್ 86.88, ನೇಹಾ ವಿಶ್ವನಾಥ್ 86.56, ಪ್ರತಿಶತ, ಆಕಾಶ ರೆಡ್ಡಿ ಭೀಮರೆಡ್ಡಿ 85.76 , ಶ್ರೀಹರ್ಷಿತ್ ಪವನ್ ಕುಮಾರ್ ಶೇ. 85.06, ಸಾಯಿ ರಾಜ್ ಜಯರಾಮ್ ಶೇ. 85.12 ಪಡೆದಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು, ಪದಾಧಿಕಾರಿಗಳು, ಆಡಳಿತಾಧಿಕಾರಿ, ಮುಖ್ಯ ಗುರುಗಳು ಹಾಗೂ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿ ವಿದ್ಯಾರ್ಥಿಗಳಿಗೆ ಅಭಿನಂದಿಸಿದ್ದಾರೆ.

# ನನ್ನ ಮತ ಮಾರಾಟಕ್ಕಿಲ್ಲ ಮತದಾರರ ಜಾಗೃತಿ ಆಂದೋಲನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.7:ನಗರದ ದರ್ಗಾ ರಸ್ತೆಯಲ್ಲಿರುವ ಗ್ಲೋಬಲ್ ಮಹಿಳಾ ಪದವಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ನನ್ನ ಮತ ಮಾರಾಟಕ್ಕಿಲ್ಲ-ಮತದಾರ ಜಾಗೃತಿ ಆಂದೋಲನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಸಂಸ್ಥೆಯ ಅಧ್ಯಕ್ಷರಾದ ಡಾ; ರೆಹನಾ ಬೇಗಂ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ, ಇವತ್ತು ಬಹುತೇಕ ಎಲ್ಲಾ ರಾಜಕಾರಣಿಗಳು ಹಾಗೂ ಎಲ್ಲ ರಾಜಕೀಯ ಪಕ್ಷಗಳು ಚುನಾವಣೆಯಲ್ಲಿ ಮಿತಿಮೀರಿ ಹಣ ಹಂಚುತ್ತಿವೆ, ಮತದಾರರನ್ನು ದಾರಿ ತಪ್ಪಿಸುತ್ತಿವೆ.




ಇದರಿಂದ ಮತದಾರರು ಜಾಗೃತರಾಗಬೇಕು. ನಮ್ಮ ಒಂದು ಮತಕ್ಕೆ ಬೆಲೆ ಕಟ್ಟಲಾಗದಷ್ಟು ಅಮೂಲ್ಯವಾದ ಮೌಲ್ಯವಿದ್ದು ನಮ್ಮ ಒಂದು ಮತ ನಮ್ಮ ದೇಶವನ್ನು ಸಮೃದ್ಧತೆಯಡೆಗೆ ಒಯ್ಯುವುದಲ್ಲದೆ ನಮ್ಮ ಜೀವನವನ್ನು ಸುಖಮಯವಾಗಿ ಮಾಡುವುದು. ಪ್ರತಿಯೊಬ್ಬ ಮತದಾರರು ಚುನಾವಣೆಯಲ್ಲಿ ಹಣ ಹಂಚಲು ಬಂದವರನ್ನು ಧಿಕ್ಕರಿಸಬೇಕು. ಚುನಾವಣೆಯಲ್ಲಿ ಹಣ ಹಂಚುತ್ತಿರುವುದೇ ದೇಶದಲ್ಲಿ ಹಾಗೂ ರಾಜ್ಯಗಳಲ್ಲಿ ಭ್ರಷ್ಟಾಚಾರ ಹೆಚ್ಚಳಕ್ಕೆ ಕಾರಣವಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ರಮೇಶ ಆರ್ ದುತ್ತರಗಿ ಮಾತನಾಡುತ್ತಾ ಇವತ್ತು ನಮ್ಮ ವಿದ್ಯಾರ್ಥಿಗಳು ಗಾಂಧಿ ಅಂಬೇಡ್ಕರ್ ಸುಭಾಷ್ ಚಂದ್ರ ಬೋಸ್ ಕಿತ್ತೂರಾಣಿ ಚೆನ್ನಮ್ಮ ಜಾನ್ಸಿ ರಾಣಿ ಲಕ್ಷ್ಮೀಬಾಯಿ ಮೌಲಾನ ಅಬ್ದುಲ್ ಕಲಾಂ ಆಜಾದ್ ರಂತಹ ಹೋರಾಟಗಾರರ ಜೀವನವನ್ನು ಅಧ್ಯಯನ ಮಾಡಬೇಕು. ಅಂತಹ ಮಹಾನ್ ವ್ಯಕ್ತಿಗಳ ವ್ಯಕ್ತಿತ್ವವನ್ನು ವಿದ್ಯಾರ್ಥಿಗಳು ಮೈಗೂಡಿಸಿಕೊಳ್ಳಬೇಕು. ಚುನಾವಣೆಗಳಲ್ಲಿ ಹಣ ಹಂಚಿ ಆಯ್ಕೆಯಾದ ಜನಪ್ರತಿನಿಧಿಗಳಿಂದ ಪಾರದರ್ಶಕವಾದ ಆಡಳಿತ ನಿರೀಕ್ಷಿಸುವುದು ಹೇಗೆ ಸಾಧ್ಯ? ಇವತ್ತು ನಮ್ಮ ದೇಶದ ಚುನಾವಣೆಗಳಲ್ಲಿ ಹಣವಂತರೆ ಹೆಚ್ಚಾಗಿ ಆಯ್ಕೆಯಾಗುತ್ತಿದ್ದಾರೆ. ಇವರು ಚುನಾವಣೆಯಲ್ಲಿ ಹಣ ಸುರಿದು ಆಯ್ಕೆಯಾದ ಮೇಲೆ ಹಣ ಮಾಡುವುದರಲ್ಲಿ ತೊಡಗುತ್ತಿದ್ದಾರೆ. ಇವತ್ತು ರಾಜಕಾರಣ ಎನ್ನುವುದು ಒಂದು ವ್ಯಾಪಾರವಾಗಿ ಮಾರ್ಪಟ್ಟಾಗುತ್ತಿದೆ. ಇದರಿಂದ ದೇಶದ ಭವಿಷ್ಯಕ್ಕೆ ಮುಂದೆ ಗಂಡಾಂತರವಿದ್ದು ಪ್ರತಿಯೊಬ್ಬರು ಇಂದು ಎಚ್ಚೆತ್ತುಕೊಳ್ಳಬೇಕಾಗಿದೆ. ಈ ದೇಶದ ಭವಿಷ್ಯ ಇಂದಿನ ಯುವಕರ ಕೈಯಲ್ಲಿದ್ದು ಇಂದಿನ ಯುವಕರು ಸಮಾಜದಲ್ಲಿ ಅತ್ಯಂತ ಜವಾಬ್ದಾರಿಯಿಂದ ನಡೆದುಕೊಳ್ಳಬೇಕಾಗಿದೆ. ಯುವಕರು ದುಶ್ಚಟಗಳಿಂದ ದೂರವಿರಬೇಕು. ನಾವು ಯಾವುದೇ ಕ್ಷೇತ್ರದಲ್ಲಿ ಎಷ್ಟೇ ಉನ್ನತ ಸ್ಥಾನಕ್ಕೆ ಏರಿದರೂ ನಾವು ಮೊದಲು ಮನುಷ್ಯತ್ವವನ್ನು ಮೈಗೂಡಿಸಿಕೊಳ್ಳಬೇಕು. ಇವತ್ತು ಸಮಾಜದಲ್ಲಿ ಒಳ್ಳೆಯದಕ್ಕೆ ಬೆಂಬಲಿಸುವುದು ಹಾಗೂ ಕೆಟ್ಟದ್ದನ್ನು ಖಂಡಿಸುವುದು ಪ್ರತಿಯೊಬ್ಬ ನಾಗರೀಕರ ಕರ್ತವ್ಯವಾಗಬೇಕು ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ; ಅಂಜುಮ ಅರಾ ಮಾತನಾಡುತ್ತಾ ವಿದ್ಯಾರ್ಥಿಗಳು ಪ್ರತಿಯೊಬ್ಬರು ತಪ್ಪದೆ ಮತದಾರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಬೇಕು. ಪ್ರತಿಯೊಬ್ಬರು ತಪ್ಪದೆ ಮತ ಚಲಾಯಿಸಬೇಕು ಹಾಗೆಯೆ ಚುನಾವಣೆಯಲ್ಲಿ ಹಣ ಹಂಚಲು ಬಂದವರನ್ನು ತಿರಸ್ಕರಿಸಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಗೌರ್ ಮೈನುದ್ದೀನ್, ಕೌಸರ್ ನಜೀಮಾ, ರಜಿಯಾ ಫಿರ್ದೋಸ್, ಸಾದಿಯಾ ಸಿರೇನಾ, ಅಜೀಜ್ ಉರ ರಹಮಾನ್, ರೇಷ್ಮಾ ಹಾಗೂ ಬೋಧಕೇತರ ಸಿಬ್ಬಂದಿಗಳಾದ ಅಬ್ರಾರ ಉಲ್ ಹಕ್, ಸಿದ್ದಪ್ಪ ಉಪಸ್ಥಿತರಿದ್ದರು. ಬಿಎಡ್ ಪ್ರಥಮ ವರ್ಷದ ವಿದ್ಯಾರ್ಥಿನಿ ಕುಮಾರಿ ಅನಿತಾ ವೆಂಕಟೇಶ್ ಪ್ರಾರ್ಥನೆ ಗೀತೆ ಹಾಡಿದರು. ಉಪನ್ಯಾಸಕರಾದ ಸರಳಾದೇವಿ ಮಡಿವಾಳ ಸರ್ವರನ್ನು ಸ್ವಾಗತಿಸಿ ಕಾರ್ಯಕ್ರಮವನ್ನು ನಿರೂಪಿಸಿದರು. ಬಿಎಡ್ ಪ್ರಥಮ ವರ್ಷದ ವಿದ್ಯಾರ್ಥಿನಿ ಕುಮಾರಿ ಅಶ್ವಿನಿ ಮಹೇಶ ವಂದನಾರ್ಪಣೆ ಮಾಡಿದರು. ಕೊನೆಯಲ್ಲಿ ವಿದ್ಯಾರ್ಥಿನಿಯರಿಗೆ ನನ್ನ ಮತ ಮಾರಾಟಕ್ಕಿಲ್ಲ. ನಾನು ಚುನಾವಣೆಯಲ್ಲಿ ತಪ್ಪದೇ ಮತ ಚಲಾಯಿಸುತ್ತೇನೆ ಹಾಗೂ ಕ್ರಿಮಿನಲ್ ಅಪರಾಧ ಹಿನ್ನೆಲೆ ಉಳ್ಳವರಿಗೆ ನಾನು ಮತ ಹಾಕುವುದಿಲ್ಲ ಎಂದು ಪ್ರತಿಜ್ಞಾವಿಧಿ ಬೋಧಿಸಲಾಯಿತು.

CHANGE OF NAME

I Rafeek Khan S/o Ahmad Khan R/o Ameerabad (Old Name) Tq:Humnabad Dist:Bidar.

I Have Changed my Name to Rafiq Khan S/o Ahmad Khan (New Name) Vide Affidavit Dated:06-05-2025 Sworm before Notary by Prabhakar B. Nagarale .

# ಅಂಬೇಡ್ಕರ್ ವಿಚಾರಧಾರೆಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಿ: ವಿಠ್ಠಲದಾಸ ಪ್ಯಾಗೆ



ಮಲ್ಲಮ್ಮ ನುಡಿ ವಾರ್ತೆ

ಔರಾದ್ : ಬುದ್ಧ ಬಸವ ಅಂಬೇಡ್ಕರ್ ಚಿಂತನೆಗಳು ಭಾರತ ದೇಶಕ್ಕೆ-ನಮ್ಮ ಮಾರ್ಗದರ್ಶಿ ತತ್ವಗಳಾಗಿವೆ ಎಂದು ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ವಿಠ್ಠಲದಾಸ ಪ್ಯಾಗೆ ಅಭಿಪ್ರಾಯಪಟ್ಟರು.

ಪಟ್ಟಣದ ಅಮರೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಬುದ್ಧ ಬಸವ ಅಂಬೇಡ್ಕರ್ ಜಯಂತಿ ನಿಮಿತ್ತ ಹಮ್ಮಿಕೊಂಡ ಸಮತೆಯ ಮಾರ್ಗದಲ್ಲಿ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.

ಸಮತೆ ಸಾಧ್ಯವಾದರೆ ಪ್ರಪಂಚದಲ್ಲಿ ಶಾಂತಿ ನೆಲೆಸಲು ಸಾಧ್ಯ ಎಂಬುದನ್ನು ಅರಿಯಬೇಕಿದೆ, ಈ ನಿಟ್ಟಿನಲ್ಲಿ ಬುದ್ಧ ಬಸವ ಅಂಬೇಡ್ಕರ್ ಚಿಂತನೆಗಳು ಪ್ರಸ್ತುತ ಎನಿಸುತ್ತವೆ. ಬುದ್ಧನ ಶಾಂತಿ ಸಂದೇಶ, ಬಸವಣ್ಣನವರ ಸಮಾನತೆ ಕಾಯಕ ಮತ್ತು ದಾಸೋಹ ಹಾಗೂ ಅಂಬೇಡ್ಕರ್ ಅವರ ಸಮ ಸಮಾಜದ ಪರಿಕಲ್ಪನೆ ಹಿಂದೆಂದಿಗಿಂತಲೂ ಇಂದು ಹೆಚ್ಚು ಅವಶ್ಯಕವಾಗಿವೆ.

ಈ ಮೂವರ ವೈಚಾರಿಕ ನಿಲುವುಗಳು ಭ್ರಮೆಯ ಲೋಕದಿಂದ ವಾಸ್ತವ ಲೋಕದ ಕಡೆಗೆ ಕರೆದೊಯ್ಯುತ್ತವೆ, ಹಾಗಾಗಿ ಈ ಮೂವರ ಸಂದೇಶಗಳನ್ನು ಅನುಸರಿಸಿಕೊಂಡು ಬದುಕು ಸಾಗಿಸಿದ್ದಲ್ಲಿ ಪ್ರಬುದ್ಧ ಭಾರತ ನಿರ್ಮಾಣ ಸಾಧ್ಯ ಎಂದರು.

ಕಸಾಪ ತಾಲೂಕು ಅಧ್ಯಕ್ಷ ಬಿ.ಎಂ ಅಮರವಾಡಿ ಅವರು ಮಾತನಾಡಿ ಬುದ್ಧ ಬಸವ ಅಂಬೇಡ್ಕರ್ ಅವರ ಚಿಂತನೆಗಳಿಂದ ಬದುಕು ಕಟ್ಟಿಕೊಳ್ಳಬೇಕಿದೆ, ಅವರು ಬೆಳಗಿದ ದೀಪ ಸೀಮಾತೀತ. ಬುದ್ಧ ಬಸವ ಅಂಬೇಡ್ಕರ್ ಚಿಂತನೆಗಳು ಅಳವಡಿಸಿಕೊಳ್ಳದ ಭಾರತ ಊನವಾಗುತ್ತದೆ ಎಂದರು.

ವಿಶೇಷ ಸನ್ಮಾನ ಸ್ವೀಕರಿಸಿದ ಅಡವೆಪ್ಪ ಪಟ್ನೆ ಜಾನಪದ ಗೀತೆಗಳ ಮೂಲಕ ಶರಣರ ವೈಚಾರಿಕ ವಿಚಾರಗಳನ್ನು ಪ್ರಸ್ತುತಪಡಿಸಿದರು. ಪ್ರಾಚಾರ್ಯ ಡಾ. ಗೌತಮ ಗಾಯಕವಾಡ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಸಂಧರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಅನೀಲಕುಮಾರ ಮೇಲ್ದೊಡ್ಡಿ, ಆರ್.ಆರ್.ಕೆ ಸಮಿತಿ ಸದಸ್ಯ ರವೀಂದ್ರ ಮೀಸೆ, ಕಸಾಪ ಗೌರವಾಧ್ಯಕ್ಷ ಡಾ.ವೈಜಿನಾಥ ಬುಟ್ಟೆ, ಡಾ.ಮನ್ಮಥ ಡೋಳೆ, ಗುರುನಾಥ ದೇಶಮುಖ, ವೀರೇಶ ಅಲ್ಮಾಜೆ, ಮಲ್ಲಿಕಾರ್ಜುನ ಟಂಕಸಾಲೆ, ಜಗನ್ನಾಥ ದೇಶಮುಖ, ಮಹಾದೇವ ಘೂಳೆ, ಖಂಡೋಬಾ ಕಂಗ್ಟೆ, ಸಂದೀಪ ಪಾಟೀಲ, ಅಮರಸ್ವಾಮಿ ಸ್ಥಾವರಮಠ, ಅಂಬಾದಾಸ ನೆಳಗೆ, ಧನರಾಜ ಮಾನೆ, ಗೋವಿಂದ ಪಾಟೀಲ, ಕೈಲಾಸಪತಿ ಕೇದಾರೆ, ಉತ್ತಮ ದಂಡೆ, ಉತ್ತಮ ಜಾಧವ, ಶ್ವೇತಾ ಆಲೂರ, ಶಿವರಾಮ ರಾಠೋಡ, ಕಪಿಲ ಡೋಣಗಾಂವೆ, ತುಳಸಿರಾಮ ಮಾನೆ, ಆರತಿ, ಪ್ರಿಯಾ ಮಿಲಿಂದ ಸೇರಿದಂತೆ ಇನ್ನಿತರರಿದ್ದರು.

**ತಾಲೂಕಿನ ಕೀರ್ತಿ ಹೆಚ್ಚಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ**

ಎಸ್ಸೆಸ್ಸೆಲ್ಸಿ ವಿಭಾಗದಲ್ಲಿ ಸಾಧನೆಗೈದ ಆದರ್ಶ, ಆದಿತ್ಯ, ನಿವೇದಿತಾ, ಕಾರ್ತಿಕ ಮತ್ತು ಐಶ್ವರ್ಯ, ಹಾಗೂ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದ ಆರತಿ, ಶಿಫಾ, ಶಿವಕರ್ಣಾ, ಕಲಾ ವಿಭಾಗದ ಸುಧಾರಾಣಿ, ಕೀರ್ತನಾ, ವಾಣಿಜ್ಯ ವಿಭಾಗದ ಅಂಬಿಕಾ ಹಾಗೂ ಶ್ವೇತಾ ವಿದ್ಯಾರ್ಥಿಗಳಿಗೆ ಅಭಿನಂದನಾ ಪತ್ರ ನೀಡಿ ಗೌರವಿಸಲಾಯಿತು. ಬಳಿಕ ತಾಲೂಕು ಕಸಾಪ ಪದಾಧಿಕಾರಿಗಳಿಗೆ ಹಾಗೂ ವಿವಿಧ ವಲಯ ಘಟಕಗಳ ಅಧ್ಯಕ್ಷರಿಗೆ ನೇಮಕ ಪತ್ರ ನೀಡಿ ಅಭಿನಂದಿಸಲಾಯಿತು.

# ಕಾರ್ಮಿಕರಿಗೆ ಸರಕಾರದಿಂದ ನಿವೇಶನ ಒದಗಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ಸರ್.ಎಂ.ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕ ಸಂಘ ತಾಲೂಕ ಸಮಿತಿ ಶಹಾಪೂರ ತಾಲೂಕಿನ್ಯಾದ್ಯಂತಹ ಅಧಿಕೃತವಾಗಿ ಸುಮಾರು 45 ಸಾವಿರಕ್ಕಿಂತ ಅಧಿಕ ನೊಂದಾಯಿತ ಕಾರ್ಮಿಕ ಕುಟುಂಬಗಳಿದ್ದು, ಇಂತಹ ಕಾರ್ಮಿಕರು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಕಾರ್ಮಿಕರಿಗೆ ಸೂಕ್ತ ವಾಸಿಸಲು ಯೋಗ್ಯ ಮನೆಗಳಿಲ್ಲದೇ ಗುಡಿಸಿಲಿನಲ್ಲಿ ವಾಸ ಮಾಡುತ್ತಿದ್ದಾರೆ. ಕಡಬಡತನದಲ್ಲಿ ಜೀವನ ಸಾಗಿಸುತ್ತಾ ತಮ್ಮ ಸಂಸಾರ ದುಡುತ್ತಿದ್ದಾರೆ. ಕಲ್ಯಾಣ ಕರ್ನಾಟಕ ಭಾಗ ಅತೀ ಹಿಂದುಳಿದ ಪ್ರದೇಶವಾಗಿದ್ದು.

ಇಲ್ಲಿನ ಜನ ದುಡಿಮೆ ಮಾಡಲು ದೊಡ್ಡ ನಗರಕ್ಕೆ ವಲಸೆ ಹೋಗುತ್ತಿದ್ದಾರೆ. ಕಾರ್ಮಿ ವಲಸೆ ಹೋಗುವುದನ್ನು ತಪ್ಪಿಸಲು ಅವರುಗಳಿಗೆ ಸೂಕ್ತ ರೀತಿಯಲ್ಲಿ ವಾಸಿಸಲು ನಿವೇಶ ಹಂಚಿಕೆ ಮಾಡುವಂತೆ ತಮ್ಮಲ್ಲಿ ಮನವಿ ಮಾಡಿಕೊಳ್ಳುತ್ತೇನೆ. ಒಂದು ವೇಳೆ ಸರಕಾರಿ ಜಮೀನು ಸಿಗದಿದ್ದರೆ



ಖಾಸಗಿ ಜಾಗವನ್ನು ಪಡೆದು ಕೂಲಿ ಕಾರ್ಮಿಕರಿಗೆ ನಿವೇಶನ ಮಂಜೂರಿ ಮಾಡಬೇಕೆಂದು ಸಂಬಂದಪಟ್ಟ ಇಲಾಖೆಗಳಿಗೆ ಮನವಿ ಮೂಲಕ ವಿನಂತಿಸಿದ್ದಾರೆ. ಈ ಬಗ್ಗೆ ಹಿಂದೆಯೂ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿಕೊಂಡರೂ ಸಹ ಇನ್ನೂವರೆಗೂ ಒಂದು ಮನೆ ಕೂಡ ಹಂಚಿಕೆಯಾಗಿರುವುದಿಲ್ಲ ಅವರು ಬೇಸರವ್ಯಕ್ತಪಡಿಸಿದರು.

ಕಾರಣ ನಮ್ಮ ಮನವಿಗೆ ಸ್ಪಂದಿಸಿ ಶೀಘ್ರವೇ ಬಡ ಕೂಲಿ ಕಾರ್ಮಿಕ ಕುಟುಂಬಗಳಿಗೆ ವಾಸಿಸಲು ನಿವೇಶನ ಹಂಚಿಕೆ ಮಾಡಬೇಕೆಂದು ಪತ್ರಿಕೆಗೆ ತಿಳಿಸಿದ್ದಾರೆ.

# ಪಾಕಿಸ್ತಾನಕ್ಕೆ ಇದು ಎಚ್ಚರದ ಗಂಟೆ: ಕೆಪಿಸಿಸಿ ಕಾರ್ಯದರ್ಶಿ ಜಾನಸನ್ ಘೋಡೆ

ಮಲ್ಲಮ್ಮ ನುಡಿ ವಾರ್ತೆ



ಬೀದರ. ಮೇ. 07 : ಭಯೋತ್ಪಾದಕರು ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಎಸಗಿದ ಹೇಡಿತನದ ಪೈಶಾಚಿಕ ಕೃತ್ಯಕ್ಕೆ ನಮ್ಮ ಹೆಮ್ಮೆಯ ಭಾರತೀಯ ಸೇನೆ ತಕ್ಕ ಪ್ರತ್ಯುತ್ತರ ನೀಡಿದೆ. ಭಯೋತ್ಪಾದನೆಯ ಮೂಲೋತ್ಪಾಟನೆಗೆ ಈ ದಿಟ್ಟ ಕ್ರಮ ಮುನ್ನುಡಿಯಾಗಲಿ. ಭಾರತೀಯ ಸೇನೆಯ ಪರಾಕ್ರಮ, ಶೌರ್ಯ, ನಿಖರತೆ ಶ್ಲಾಘನೀಯ. ಭಯೋತ್ಪಾದನೆಯ ವಿರುದ್ಧ, ದೇಶದ ಐಕ್ಯತೆ, ಸಮಗ್ರತೆ, ಸುರಕ್ಷತೆಗೆ ಸಂಬಂಧಿಸಿದಂತೆ ಭಾರತೀಯ ಸೇನೆ ಹಾಗೂ ಕೇಂದ್ರ ಸರ್ಕಾರದ ಎಲ್ಲ ಕ್ರಮಗಳನ್ನೂ ನಾವು ಸ್ವಾಗತಿಸುತ್ತೇವೆ ಎಂದು ಕೆಪಿಸಿಸಿ ಕಾರ್ಯದರ್ಶಿ ಕಾರ್ಮಿಕ ವಿಭಾಗ ಜಾನಸನ್ ಘೋಡೆ ತಿಳಿಸಿರುತ್ತಾರೆ.

# ಅತಿಥಿ ಶಿಕ್ಷಕರು ಹಾಗೂ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಮೇ.7:– ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಬೀದರದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ–ಕಾಲೇಜು, ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ–ಕಾಲೇಜು ಮತ್ತು ಮೌಲಾನಾ ಆಜಾದ ಮಾದರಿ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ 2025–26ನೇ ಶೈಕ್ಷಣಿಕ ಸಾಲಿಗೆ ಒಂದು ವರ್ಷಕ್ಕೆ ತಾತ್ಕಾಲಿಕವಾಗಿ ಅನ್ವಯಿಸುವಂತೆ ಅರ್ಹ ಅತಿಥಿ ಶಿಕ್ಷಕರು–ಉಪನ್ಯಾಸಕರನ್ನು ಅಯ್ಕೆ ಮಾಡಲು ಅರ್ಜಿ ಅಹ್ವಾನಿಸಲಾಗಿದೆ ಎಂದು ಬೀದರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಷಯವಾರು ಅತಿಥಿ ಶಿಕ್ಷಕರ ಖಾಲಿ ಹುದ್ದೆ ವಿವರ: ಕನ್ನಡ (16), ಇಂಗ್ಲೀಷ (17), ಹಿಂದಿ (3), ಉರ್ದು (5), ಗಣಿತ (15) ವಿಜ್ಞಾನ (12), ಸಮಾಜ ವಿಜ್ಞಾನ (16), ದೈಹಿಕ ಶಿಕ್ಷಣ (2) ಸೇರಿ ಒಟ್ಟು 86 ಹುದ್ದೆಗಳು.

ವಿಯಷವಾರು ಅತಿಥಿ ಉಪನ್ಯಾಸಕರ ಖಾಲಿ ಹುದ್ದೆ ವಿವರ: ಕನ್ನಡ (3), ಇಂಗ್ಲೀಷ್ (3), ಉರ್ದು (2), ಗಣಿತ (3), ಭೌತಶಾಸ್ತ್ರ (4), ರಸಾಯನ ಶಾಸ್ತ್ರ (3), ಜೀವಶಾಸ್ತ್ರ (3), ಇತಿಹಾಸಶಾಸ್ತ್ರ (1), ಅರ್ಥಶಾಸ್ತ್ರ (1), ವ್ಯಾ.ವಾಹರಶಾಸ್ತ್ರ (1), ಲೆಕ್ಕಶಾಸ್ತ್ರ (1) ಒಟ್ಟು ಹುದ್ದೆಗಳು 25.

ಆಸಕ್ತರು ಅರ್ಜಿಯನ್ನು https://dom.karnataka.gov.in ಅಥವಾ ಜಿಲ್ಲಾ ಕಛೇರಿ/ತಾಲ್ಲೂಕ ಮಾಹಿತಿ ಕೇಂದ್ರಗಳಿಂದ ಪಡೆದು ಎಲ್ಲಾ ಧೃಡೀಕೃತ ದಾಖಲೆಗಳೊಂದಿಗೆ ದಿನಾಂಕ:19–05–2025 ರೊಳಾಗಿ ಜಿಲ್ಲಾ ಕಛೇರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಬೀದರ ಸಲ್ಲಿಸಲು ಅವರು ತಿಳಿಸಿದ್ದಾರೆ.

# ಮೇ.10 ರಂದು ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತ್ಯುತ್ಸವ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಮೇ.7:– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಮೇ.10 ರಂದು ಬೆಳಿಗ್ಗೆ 11 ಗಂಟೆಗೆ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸಮುದಾಯ ಭವನ ಅಮಲಾಪೂರ ರಸ್ತೆ ಬೀದರದಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತ್ಯುತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬಈದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾಡಲಿದ್ದಾರೆ. ಅಧ್ಯಕ್ಷತೆ ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಶಕರಾದ ಶರಣು ಸಲಗರ, ಬೀದರ ದಕ್ಷಿಣ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕರಾದ ಡಾ.ಸಿದ್ಧಲಿಂಗಪ್ಪ ಎನ್.ಪಾಟೀಲ ಹಾಗೂ ವಿಧಾನ ಪರಿಷತ್ ಶಾಸಕರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ ಹಾಗೂ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬೀದರ ನಗರಸಭೆ ಅಧ್ಯಕ್ಷರಾದ ಮಹಮ್ಮದ್ ಗೌಸ್ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಅತಿಥಿ ಉಪನ್ಯಾಸವನ್ನು ಬೀದರ ಅಕ್ಕಮಹಾದೇವಿ ಮಹಾವಿದ್ಯಾಲಯದ ರಸಾಯನ ಶಾಸ್ತ್ರ ವಿಭಾಗದ ಹಿರಿಯ ಉಪನ್ಯಾಸಕರಾದ ಶಿವಶರಣಪ್ಪಾ ಹುಗ್ಗಿ ಪಾಟೀಲ ಅವರು ನೀಡಲಿದ್ದಾರೆ.

# ಮೇ.15 ರಂದು ಡಾಕ್ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬೀದರ : ಮೇ.7:ಬೀದರ ಅಂಚೆ ವಿಭಾಗದ ಡಾಕ್ಅದಾಲತ್‌ನ್ನು ಮೇ.15 ರಂದು ಬೆಳಿಗ್ಗೆ 10 ಗಂಟೆಗೆ ಅಂಚೆ ಅಧೀಕ್ಷಕರು ಬೀದರ ವಿಭಾಗ ಬೀದರ ಅವರ ಕಾರ್ಯಾಲಯದಲ್ಲಿ ನಡೆಸಲಾಗುವುದು ಎಂದು ಬೀದರ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂಚೆ ಇಲಾಖೆಗೆ ಸಂಬಂಧಿಸಿದ ಎಲ್ಲಾ ರೀತಿಯ ಸೇವೆಗಳ ಬಗ್ಗೆ ಅಹವಾಲುಗಳೇನಾದರು ಇದ್ದಲ್ಲಿ ಅವುಗಳನ್ನು

ಡಾಕ್ಅದಾಲತ್ತಿನಲ್ಲಿ ಆಲಿಸಲಾಗುವುದು. ಎಲ್ಲಾ ಅಂಚೆ ಗ್ರಾಹಕರು ತಮ್ಮ ಅಹವಾಲುಗಳನ್ನು ಅಂಚೆ ಮೂಲಕ ಅಥವಾ ಮೇಲ್ do-bidar.ka@indiapost.gov,.in ಗೆ ಮೇ.14 ರೊಳಗಾಗಿ ಕಳುಹಿಸಬೇಕೆಂದು ಅವರು ತಿಳಿಸಿದ್ದಾರೆ.

# ಆರನೇ ತರಗತಿ ಪ್ರವೇಶಕ್ಕೆ ಅರ್ಹತಾ ಪರೀಕ್ಷೆ ಮೇ.೯ಕ್ಕೆ

ಮಲ್ಲಮ್ಮ ನುಡಿ ವಾರ್ತೆಬೀದರ:ಮೇ .7: 2025–26ನೇ ಸಾಲಿಗೆ ಪ್ರತಿಷ್ಠಿತ ಶಾಲೆ ಯೋಜನೆಯಡಿ ಪರಿಶಿಷ್ಟಜಾತಿಯ ಪ್ರತಿಭಾವಂತ ವಿದ್ಯಾರ್ಥಿಗಳನ್ನು 6ನೇ ತರಗತಿ ಪ್ರವೇಶಕ್ಕೆ ಅರ್ಹತಾ ಪರೀಕ್ಷೆ ಮೇ.9 ರಂದು ಬೆಳಿಗ್ಗೆ 10 ಗಂಟೆಗೆ ಪ್ರವೇಶ ಪತ್ರದಲ್ಲಿ ತಿಳಿಸಿರುವ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ವೆಬ್‌ಸೈಟ್ https://swdservices.karnataka.gov.in/EducationPrestigious/home/register/hallticket ಮೂಲಕ ಪ್ರವೇಶ ಪತ್ರವನ್ನು ಡೌನ್ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾಗಬೇಕೆಂದು ಬೀದರ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿರೂರಿನಲ್ಲಿ ನಾಳೆ ಬನಶಂಕರಿದೇವಿ ಮೂರ್ತಿ ಪ್ರತಿಷ್ಠಾಪನೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಮೇ.7– ತಾಲೂಕಿನ ಶಿರೂರ ಪಟ್ಟಣದಲ್ಲಿ ಮೇ.9ರಂದು ಬನಶಂಕರಿದೇವಿ ನೂತನ ಮೂರ್ತಿಯ ಪ್ರತಿಷ್ಠಾಪನಾ ಕಾರ್ಯಕ್ರಮ ಜರುಗಲಿದೆ. ಶಿರೂರಿನ ದೇವಾಂಗ ಸಮಾಜ, ಬನಶಂಕರಿದೇವಿ ದೇವಸ್ಥಾನ ಜೀರ್ಣೋದ್ಧಾರ ಸಮಿತಿ ಹಾಗೂ ಸಿದ್ಧಲಿಂಗೇಶ್ವರ ನೇಕಾರ ಸಹಕಾರ ಸಂಘದ ಸಹಯೋಗದಲ್ಲಿ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನೇಕಾರ ಪೇಟೆಯ ಬನಶಂಕರಿ ದೇವಸ್ಥಾನದಲ್ಲಿ ನಡೆಯುವ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಹಂಪಿ ಹೇಮಕೂಟದ ಗಾಯತ್ರಿ ಪೀಠದ ಪೀಠಾಧ್ಯಕ್ಷ ದಯಾನಂದಪುರಿ ಸ್ವಾಮೀಜಿ ಹಾಗೂ ಧಾರವಾಡದ ಸರಸ್ವತಿ ಸ್ವಾಮೀಜಿ ವಹಿಸುವರು. ಗುಳೇದಗುಡ್ಡದ ಬಸವರಾಜ ಪಟ್ಟದಾರ್ಯ ಸ್ವಾಮೀಜಿ, ಗುರುಬಸವ ಪಟ್ಟದಾರ್ಯ ಸ್ವಾಮೀಜಿ, ಕಮತಗಿಯ ಹೊಳೆ ಹುಚ್ಚೇಶ್ವರ ಶ್ರೀಗಳು, ಅಭಿನವ ಕಾಡಸಿದ್ದೇಶ್ವರ ಶ್ರೀಗಳು, ನೀರಲಕೇರಿಯ ಘನಲಿಂಗ ಸ್ವಾಮೀಜಿ, ಧಾರವಾಡದ ಶಶಾಂಕ ಸ್ವಾಮೀಜಿ, ನೀಲಾನಗರದ ಕುಮಾರ ಮಹಾರಾಜರು ಸಾನಿಧ್ಯ ವಹಿಸಲಿದ್ದು, ಅಧ್ಯಕ್ಷತೆಯನ್ನು ದೇವಾಂಗ ಸಮಾಜದ ಅಧ್ಯಕ್ಷ ಕಾಶಪ್ಪಗೌಡ ಪ್ಯಾಟಿಗೌಡ್ರ ವಹಿಸುವರು. ಪ್ರೊ.ಶಿವಶಂಕರ ಮುತ್ತಗಿ 'ನೇಕಾರರ ಬದುಕಿನ ಆತಂಕಗಳು' ವಿಷಯದ ಕುರಿತು ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಸಂಸದ ಪಿ.ಸಿ.ಗದ್ದಿಗೌಡರ, ಶಾಸಕ ಎಚ್.ವಾಯ್.ಮೇಟಿ, ರಾಜ್ಯ ನೇಕಾರ ಸಮುದಾಯಗಳ ಒಕ್ಕೂಟದ ಗೌರವಾಧ್ಯಕ್ಷ ಎಂ.ಡಿ.ಲಕ್ಷ್ಮೀನಾರಾಯಣ, ಬಿಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಮುರುಗೇಶ ಕಡ್ಲಿಮಟ್ಟಿ, ಮಾಜಿ ಶಾಸಕರಾದ ಎಸ್.ಜಿ.ನಂಜಯ್ಯನಮಠ, ವೀರಣ್ಣ ಚರಂತಿಮಠ ಸೇರಿ ಅನೇಕ ಗಣ್ಯರು, ಸಮಾಜದ ಹಿರಿಯರು ಪಾಲ್ಗೊಳ್ಳಲಿದ್ದಾರೆ.

ಮಧ್ಯಾಹ್ನ 1 ಗಂಟೆ ಮಹಾಪ್ರಸಾದ ನಡೆಯಲಿದ್ದು, ಸಾಯಂಕಾಲ 7 ಗಂಟೆಗೆ ಕಲಬುರ್ಗಿಯ ಪಾಂಡುರಂಗ ಹುಚ್ಚಪರಣ್ಣನವರ ಕಲಾ ಬಳಗದಿಂದ ರಸಮಂಜರಿ ಕಾರ್ಯಕ್ರಮ ನಡೆಯಲಿದೆ ಎಂದು ದೇವಸ್ಥಾನ ಸಮಿತಿ ತಿಳಿಸಿದೆ.

# ಅವಧಿ ಪೂರ್ಣಗೊಳಿಸಿದ ಅಧಿಕಾರಿಗಳ ವರ್ಗಾಯಿಸಿ



ಬೀದರ. ಮೇ. 07 : ಜಿಲ್ಲೆಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿ ಅನ್ವಯ ಅವಧಿ ಪೂರೈಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಕೂಡಲೇ ಬೇ–ರೆಡೆ ವರ್ಗಾವಣೆ ಮಾಡಬೇಕು ಎಂದು ಕರ್ನಾಟಕ ದಲಿತ ಸೇನೆ ಜಿಲ್ಲಾ ಸಮಿತಿ ಒತ್ತಾಯಿಸಿದೆ. ಸೇನೆಯ ಜಿಲ್ಲಾ ಸಮಿತಿಯ ಪದಾಧಿಕಾರಿಗಳು ನಗರದಲ್ಲಿ ಸೋಮವಾರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಈ ಕುರಿತು ಮನವಿ ಪತ್ರ ಸಲ್ಲಿಸಿದರು.

ಜಿಲ್ಲೆಯ ವಿವಿಧ ಇಲಾಖೆಗಳಲ್ಲಿ ಅನೇಕ ಅಧಿಕಾರಿಗಳು ಹಾಗೂ ಸಿಬ್ಬಂದಿ ಸುಮಾರು ವರ್ಷಗಳಿಂದ ಬಿಡಾರ ಹೂಡಿದ್ದು, ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ ಎಂದು ದೂರಿದರು.

ಸರ್ಕಾರದ ನಿಯಮಾನುಸಾರ ಅವಧಿ ಪೂರ್ಣಗೊಳ್ಳುವ ಹಂತದಲ್ಲಿ ಇತರ ಇಲಾಖೆಗೆ ನಿಯೋಜನೆ ಪಡೆದು, ನಂತರ ಮತ್ತೆ ಮಾತೃ ಇಲಾಖೆಗೆ ಮರು ನಿಯೋಜನೆ ಪಡೆಯುತ್ತಿದ್ದಾರೆ ಎಂದು ಗಮನ ಸೆಳೆದರು.

ಸರ್ಕಾರದ ಮಾರ್ಗಸೂಚಿಯಲ್ಲಿನ ಕೆಲ ನ್ಯೂನ್ಯತೆಗಳ ಲಾಭ ಪಡೆದು, ಸರ್ಕಾರದ ಕಣ್ಣಿಗೆ ಮಣ್ಣೆರಚುತ್ತಿದ್ದಾರೆ ಎಂದು ಆರೋಪಿಸಿದರು.

ಹಲವು ವರ್ಷಗಳಿಂದ ಜಿಲ್ಲೆಯಲ್ಲೇ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ವರ್ಗಾವಣೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಮಿತಿಯ ಜಿಲ್ಲಾ ಘಟಕದ ಗೌರವಾಧ್ಯಕ್ಷ ಜಾನಸನ್ ಘೋಡೆ, ಅಧ್ಯಕ್ಷ ಧನರಾಜ ಕೊಳಾರ, ಉಪಾಧ್ಯಕ್ಷ ಸಂಜು ಲಕ್ಕಿದೊಡ್ಡಿ, ಕಾರ್ಯದರ್ಶಿ ಗುರುದಾಸ ಅಮದಲಪಡ, ಜಂಟಿ ಕಾರ್ಯದರ್ಶಿ ಗಜಾ ಸೂರ್ಯ, ವಿಲ್ಸನ್ ದೊಡ್ಡಮನಿ ಇದ್ದರು.

# ಸಂಭ್ರಮದ ಗ್ರಾಮದೇವತೆ ಉಡಿತುಂಬುವ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.7– ತಾಲೂಕಿನ ಮುರನಾಳ ಪುನರ್ವಸತಿ ಕೇಂದ್ರದಲ್ಲಿ ಮಂಗಳವಾರ ಗ್ರಾಮದೇವಿ ಉಡಿತುಂಬುವ ಕಾರ್ಯಕ್ರಮ ವೈಭವದಿಂದ ಜರುಗಿತು.

ಬೆಳಗಿನ ಜಾವ ಮುರನಾಳ ಮಠದ ಪೂಜ್ಯರಾದ ನಿತ್ಯಾನಂದಸ್ವಾಮಿ ಮಹಾಪುರುಷ ಅವರ ನೇತೃತ್ವದಲ್ಲಿ ಗ್ರಾಮದೇವಿಗೆ ಪಂಚಾಮೃತ ಅಭಿಷೇಕ, ದೇವಿಸ್ತುತಿ, ಏಲೆಪೂಜೆ, ಪುಷ್ಪಾಲಂಕಾರ, ಶ್ರೀಚಕ್ರಕ್ಕೆ ಕುಂಕುಮಾರ್ಚನೆ ಮಾಡಿ ನಂತರ ಮಹಾಮಂಗಳಾರುತಿ ನೆರವೇರಿಸಲಾಯಿತು.

ಸಂಜೆ ಗ್ರಾಮದ ಮಾರುತಿ ಹಾಗೂ ಈಶ್ವರ ದೇವಸ್ಥಾನದಿಂದ ಗ್ರಾಮದೇವತೆಯ ಘಳಿಗೆಯನ್ನು ಬಾಜಾ ಭಜಂತ್ರಿ, ಡೊಳ್ಳು ಮೇಳದೊಂದಿಗೆ ಹಾಗೂ ಇರಗಾರ್ಕಿ ಸೇವೆಯೊಂದಿಗೆ ಅದ್ದೂರಿಯಾಗಿ ಮೆರವಣಿಗೆ ಮೂಲಕ ಗ್ರಾಮದ ಪ್ರಮುಖ ರಸ್ತೆಗಳ ಮುಖಾಂತರ ಗ್ರಾಮದೇವಿ ದೇವಸ್ಥಾನ ತರಲಾಯಿತು.

ನಂತರ ಗ್ರಾಮದೇವಿಗೆ ಘಳಿಗೆಯನ್ನು ಸಮರ್ಪಿಸಿ ಗ್ರಾಮಸ್ಥರ ಪರವಾಗಿ ಮಳೇರಾಜೇಂದ್ರಸ್ವಾಮಿ ಮಠದ ಪೂಜ್ಯರಾದ ನವೀನ ಮಹಾಪುರುಷ, ಜಗನ್ನಾಥ ಸ್ವಾಮಿಗಳು, ನಿತ್ಯಾನಂದ ಸ್ವಾಮಿಗಳ ಸಾನಿಧ್ಯದಲ್ಲಿ ಗ್ರಾಮದ ಹಿರಿಯರು ಶ್ರೀದೇವಿಗೆ ಉಡಿ ತುಂಬಿದರು.

ಸಂಪೂರ್ಣ ಮಳೆಯಾಗಿ ಉತ್ತಮ ಬೆಳೆ ಬೆಳೆದು ನಾಡೆಲ್ಲ ಸಮೃದ್ಧಿಯಾಗಲಿ ಎಂದು ದೇವತೆಯಲ್ಲಿ ಪ್ರಾರ್ಥಿಸಲಾಯಿತು. ಗ್ರಾಮದ ಹಿರಿಯರು, ಮಹಿಳೆಯರು, ಸುತ್ತಮುತ್ತಲಿನ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಸುರಕ್ಷಿತ ಭಾರತಕ್ಕಾಗಿ, ರಕ್ಷಣಾ ಇಲಾಖೆ ಹಾಗೂ ಗೃಹ ಇಲಾಖೆಗೆ ಅನುದಾನ ದ್ವಿಗುಣಗೊಳಿಸಲು ಮನವಿ





ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.7: ಸುರಕ್ಷಿತ ಭಾರತಕ್ಕಾಗಿ ಭಾರತ ಸರ್ಕಾರವು ರಕ್ಷಣಾ ಇಲಾಖೆ ಹಾಗು ಗೃಹ ಇಲಾಖೆಗೆ ತನ್ನ ಒಟ್ಟು ಬಜೆಟ್‌ನಲ್ಲಿ ಅನುದಾನ ದ್ವಿಗುಣಗೊಳಿಸಬೇಕೆಂದು ಸಮಾಜ ಸೇವಕ ಗುರುನಾಥ ವಡ್ಡೆ ಅವರು ರಾಷ್ಟ್ರಪತಿ, ಪ್ರಧಾನಮಂತ್ರಿ, ರಕ್ಷಣಾ ಸಚಿವರು ಹಾಗೂ ಗ್ರಹ ಸಚಿವರಿಗೆ ತಹಸೀಲ್ದಾರರು ಕಮಲನಗರ ಇವರ ಮುಖಾಂತರ ಸಲ್ಲಿಸಿದ ಮನವಿಯಲ್ಲಿ ವಿನಂತಿಸಿದ್ದಾರೆ.

ಈ ಬಗ್ಗೆ ಜನಸೇವಾ ಆಶ್ರಮ, ಭವಾನಿ ಬೀಜಲಗಾಂವ ನಲ್ಲಿ ಸಾಕೆಂತಿಕ ಧರಣಿ ನಡೆಸಲಾಯಿತು ಸ್ಥಳಕ್ಕೆ ಬಂದ ಕಂದಾಯ ನಿರಕ್ಷರಾದ ಪ್ರವೀಣ ಅವರು ಮನವಿ ಸ್ವೀಕರಿಸಿದರು ಹಾಗೂ ಸದರಿ ಮನವಿ ತಕ್ಷಣ ಸರ್ಕಾರಕೆ ಸಲಿಸುವುದಾಗಿ ತಿಳಿಸಿದರು

ಇಂದು ದೇಶದ ಗಡಿ ಆಚೆಯಿಂದ ಉಗ್ರರು ಹಾಗೂ ನುಸುಳುಖೊರರು ದೇಶದಲ್ಲಿ ಬರುತ್ತಿರುವುದು ದೇಶದ ಸುರಕ್ಷತೆಗೆ ಅಪಾಯ ತಂದಿದೆ. ಇದೆ ಪ್ರಕಾರ ಜಾತಿ, ಧರ್ಮ, ಭಾಷೆ, ಪ್ರಾಂತವಾದದಿಂದ ದೇಶದ ಆಂತರಿಕ ಸುರಕ್ಷತೆ ದುರ್ಬಲಗೊಳ್ಳುತ್ತಿದೆ. ದೇಶದಲ್ಲಿ ಅಪರಾಧಗಳು ಹೆಚ್ಚುತ್ತಿವೆ. ಇದಕ್ಕೆ ಕಡಿವಾಣ ಹಾಕುವುದು ಅವಶಕವಾಗಿದೆ ಈ ಕಾರಣದಿಂದ ದೇಶದ ಗಡಿ ಸುರಕ್ಷತೆ ಹಾಗೂ ಆಂತರಿಕ ಸುರಕ್ಷತೆ ಬಗ್ಗೆ ಸರ್ಕಾರ ಆದ್ಯತೆ ನೀಡಬೇಕಿದೆ ಎಂದು ವಡ್ಡೆಯವರು ಮಾತನಾಡಿದ್ದರು. ಈ ಸಂಧರ್ಭದಲ್ಲಿ ಪ್ರೇಮಾ ಗಂದಗೆ, ಬಸವರಾಜ ಗಂದಗೆ, ಶಿವಾಜಿ ಪಾಟಿಲ್ ಡೊಣಗಾಂವ, ಅಂಕುಶ ಸದಾಪುಲೆ, ಬಾಲಾಜಿ ಸಾವರಗಾಂವ, ಜ್ಞಾನೋಬಾ ಡೊಂಬಾಳೆ, ವೀರೆಶದೇಶಮುಖ, ನಿಲಕಂಠಭವರಾಮುತಾಂದವರು ಇದ್ದರು. ವಡ್ಡೆ ಅವರು ಸಲ್ಲಿಸಿದ ಮನವಿಯಲ್ಲಿ ಸುರಕ್ಷಿತ ಭಾರತಕ್ಕಾಗಿ ಬಜೆಟ್ ದ್ವಿಗುಣಗೊಳಿಸುವುದು, ಸೇನೆಯಲ್ಲಿ ಕಡಿತಗೊಳಿಸಿದ 1.80 ಲಕ್ಷ ಹುದ್ದೆಗಳು ತಕ್ಷಣ ಭರತಿ ಮಾಡುವುದು ಅರೆ ಸೈನಿಕರ ಖಾಲಿ ಇದ್ದ ಸುಮಾರು 1.11 ಲಕ್ಷ ಹುದ್ದೆಗಳು ತಕ್ಷಣ ಭರ್ತಿ ಮಾಡುವುದು, ಸೇನೆ ಹಾಗೂ ಅರೆ ಸೈನಿಕರ ಸಂಖ್ಯೆ ಹೆಚ್ಚಿಸುವುದು, ಸೇನೆಯನ್ನು ಇನ್ನಷ್ಟು ಆಧುನಿಕ ಹಾಗೂ ಕುಶಲ್ ಮಾಡುವುದು, ಅತ್ಯಾಧುನಿಕ ಶಸ್ತ್ರಾಸ್ತ್ರಗಳ ನಿರ್ಮಾಣದಲ್ಲಿ ಆತ್ಮನಿರ್ಭರ ಆಗುವುದು, ದೇಶದ ಸಂಪೂರ್ಣ ಗಡಿ ಸುರಕ್ಷಿತ ಗೊಳಿಸುವುದು, ಗುಪ್ತಚರ ಸಂಸ್ಥೆಗಳನ್ನು ಬಲಿಷ್ಟಗೊಳಿಸುವುದು, ದೇಶದ ಪತ್ರಿ ಜಿಲ್ಲೆಯಲ್ಲಿ ಸಿ. ಆರ್. ಪಿ. ಎಫ್ ಬಟಾಲಿಯನ್ ಸ್ಥಾಪನೆ ಮಾಡುವುದು, ರಾಷ್ಟೀಯ ಪೋಲಿಸ್ ವ್ಯವಸ್ಥೆ ಜಾರಿಮಾಡುವುದು ಅದರಡ್ಡಿ ದೇಶದ ಪತ್ರಿ ಜಿಲ್ಲೆಯಲ್ಲಿ ಅಪರಾದ ನಿಯಂತ್ರಣ ಶಾಖೆ ಸ್ಥಾಪಿಸುವುದು ಹಾಗೂ ಸಿ.ಬಿ.ಐ ಸ್ವತಂತ್ರ ಯ, ಸಂವಿಧಾನಿಕ ಸ್ವಂಸ್ಥೆ ಮಾಡುವ ಬಗ್ಗೆ ವಿನಂತಿಸಿದಾರೆ.

# ಹಜ್ ಯಾತ್ರೆಗೆ ಕೈಗೊಂಡ ಮುಖಂಡರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಮೇ.7:ಮಂಗಳವಾರ ಸಂಜೆ ನಮಾಜ್ ನಂತರ ನೂರಾನಿ ಮಸ್ಜಿದ್ ನಲ್ಲಿ ಅಬಿದ ಅಲಿ ಜೆಇ ಇವರು ಹಜ್ ಯಾತ್ರೆ ಕೈಗೊಂಡ ಮುಖಂಡರಿಗೆ ಸನ್ಮಾನ ಕಾರ್ಯಕ್ರಮ ನೆರವೇರಿಸಲಾಯಿತ್ತು.

ಕಾರ್ಯಕ್ರಮದಲ್ಲಿ ಮೌಲಾಸಾಬ ಪ್ರಥಮ ದರ್ಜೆ ಗುತ್ತಿಗೆದಾರರು, ಯುನೂಸ್ ಮುಫ್ತಿ, ಯಾಸೀನ್, ಜಾಫರ್, ಅಕ್ಬರ್ , ಮುಸ್ಲಿಂ ಸಮುದಾಯದ ಹಿರಿಯ ಮುಖಂಡರು ಸೇರಿದಂತೆ ಉಪಸ್ಥಿತರಿದ್ದರು

# ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೇಂದ್ರ ಸಚಿವ ನಿತಿನ್ ಗಡ್ಕರಿ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ/ಬೆಂಗಳೂರು, ಮೇ 7:ಉಪಮುಖ್ಯಮಂತ್ರಿ ಹಾಗೂ ಪ್ರಮುಖ ಮತ್ತು ಮಧ್ಯಮ ನೀರಾವರಿ ಸಚಿವ ಡಿ.ಕೆ. ಶಿವಕುಮಾರ್ ಅವರು ಇಂದು ನವದೆಹಲಿಯ ಅಕ್ಬರ್ ರೋಡ್, ಜನಪಥ್ ನಿವಾಸದಲ್ಲಿ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವರಾದ ನಿತಿನ್ ಗಡ್ಕರಿ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದರು.

ಈ ಸಂದರ್ಭದಲ್ಲಿ ಬಿಬಿಎಂಪಿ ಆಡಳಿತಾಧಿಕಾರಿ ತುಷಾರ್ ಗಿರಿನಾಥ್, ಮುಖ್ಯ ಆಯುಕ್ತ ಮಹೇಶ್ವರರಾವ್, ಉಪಮುಖ್ಯಮಂತ್ರಿ ಕಾರ್ಯದರ್ಶಿ ರಾಜೇಂದ್ರ ಚೋಳನ್ ಮತ್ತಿತರರು ಉಪಸ್ಥಿತರಿದ್ದರು.

# ಗ್ರಾ ಪಂ ಉಪ ಚುನಾವಣೆ : ಮೇ 25ಕ್ಕೆ ಮತದಾನ, ಮೇ 28ಕ್ಕೆ ಮತ ಎಣಿಕೆ:ಡಾ.ಸುಶೀಲಾ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 07 : ಯಾದಗಿರಿ ಜಿಲ್ಲೆಯಲ್ಲಿ ವಿವಿಧ ಕಾರಣಗಳಿಂದ ಶಹಾಪುರ ತಾಲ್ಲೂಕಿನ 1–ಚಾಮನಾಳ ಗ್ರಾಮ ಪಂಚಾಯತಿಯ 5–ದರ್ಶನಾಪೂರ, ಶೋರಾಪುರ ತಾಲ್ಲೂಕಿನ 04–ಸೂಗುರು ಗ್ರಾಮ ಪಂಚಾಯತಿಯ 5–ಬೇವಿನಾಳ ಎಸ್.ಹೆಚ್ ಮತ್ತು ವಡಗೇರಾ ತಾಲ್ಲೂಕಿನಲ್ಲಿ 09–ನಾಯ್ಕಲ್ ಗ್ರಾಮ ಪಂಚಾಯತಿಯ 2–ನಾಯ್ಕಲ್ ಕ್ಷೇತ್ರಗಳಲ್ಲಿ ತೆರವಾಗಿರುವ ಕ್ಷೇತ್ರಗಳಿಗೆ ಉಪ–ಚುನಾವಣೆ ನಡೆಸಲು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ ಡಾ.ಸುಶೀಲಾ ಅವರು ಬುಧವಾರ ಅಧಿಸೂಚನೆ ಹೊರಡಿಸಿದ್ದಾರೆ. ಚುನಾವಣೆ ವೇಳಾಪಟ್ಟಿ ಪ್ರಕಾರ ನಾಮಪತ್ರ ಸಲ್ಲಿಸಲು 2025ರ ಮೇ 14 ಕೊನೆ ದಿನವಾಗಿದ್ದು, 2025ರ ಮೇ 15 ರಂದು ನಾಮಪತ್ರ ಪರಿಶೀಲಿಸಲಾಗುತ್ತದೆ. ಉಮೇದುವಾರಿಕೆ ಹಿಂಪಡೆಯಲು 2025ರ ಮೇ 17 ಕೊನೆ ದಿನವಾಗಿದೆ. ಮತದಾನದ ಅವಶ್ಯವಿದ್ದರೆ 2025ರ ಮೇ 25 ರಂದು ಬೆಳಿಗ್ಗೆ 7 ರಿಂದ ಸಂಜೆ 5 ಗಂಟೆ ವರೆಗೆ ನಡೆಸಲಾಗುವುದು. ಅವಶ್ಯವಿದ್ದರೆ ಮರು ಮತದಾನ 2025ರ ಮೇ 27 ರಂದು ಬೆಳಿಗ್ಗೆ 7 ರಿಂದ ಸಂಜೆ 5 ಗಂಟೆ ವರೆಗೆ ನಡೆಸಿ 2025ರ ಮೇ 28 ರಂದು ಬೆಳಿಗ್ಗೆ 8 ಗಂಟೆಯಿಂದ ಆಯಾ ತಾಲೂಕಾ ಕೇಂದ್ರಗಳಲ್ಲಿ ಮತ ಎಣಿಕೆ ನಡೆಸಲಾಗುವುದು. ಇನ್ನು ಉಪ ಚುನಾವಣೆ ನಡೆಯುವ ಈ ಗ್ರಾಮ ಪಂಚಾಯತಿಗಳ ಚುನಾವಣೆ ನಡೆಯುವ ಕ್ಷೇತ್ರದ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆಯು 2025ರ ಮೇ 8 ರಿಂದ 28ರ ವರೆಗೆ ಜಾರಿಯಲ್ಲಿರುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತಿಥಿ ಶಿಕ್ಷಕ, ಉಪನ್ಯಾಸಕರ ನೇಮಕ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 07:ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಕಂಪ್ಲಿಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಬಳ್ಳಾರಿ ನಗರದ ಅಲ್ಪಸಂಖ್ಯಾತರ ಮೌಲನಾ ಆಜಾದ್ ಮಾದರಿ ಮಾದರಿ ಪದವಿ ಪೂರ್ವ ಕಾಲೇಜಿನಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರುವ ಅತಿಥಿ ಶಿಕ್ಷಕ ಮತ್ತು ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಹ ವಿದ್ಯಾರ್ಹತೆವುಳ್ಳ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅತಿಥಿ ಶಿಕ್ಷಕರ ಹುದ್ದೆಗೆ ಬಿಎಸ್ಸಿ ಬಿಇಡಿ ಮತ್ತು ಅತಿಥಿ ಉಪನ್ಯಾಸಕರ ಹುದ್ದೆಗೆ ಎಂಎ ಬಿಇಡಿ ಅಥವಾ ಎಂಎಸ್ಸಿ ಬಿಇಡಿ ವಿದ್ಯಾರ್ಹತೆ ಹೊಂದಿದ ಅರ್ಹರು ಅರ್ಜಿ ಸಲ್ಲಿಸಬಹುದಾಗಿದೆ.

ಮಾಹಿತಿಗಾಗಿ ಕಂಪ್ಲಿಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಮೊ.7353346069 ಮತ್ತು ಬಳ್ಳಾರಿ ನಗರದ ಬೆಳಗಲ್ಲು ರಸ್ತೆಯ ಅಲ್ಪಸಂಖ್ಯಾತರ ಮೌಲನಾ ಆಜಾದ್ ಮಾದರಿ ಮಾದರಿ ಪದವಿ ಪೂರ್ವ ಕಾಲೇಜಿನ ಮೊ.8861623814 ಅಥವಾ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಮೌಲನಾ ಆಜಾದ್ ಭವನದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ(ದೂ.08392–200125)ಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯಿಂದ ಸಮಾಲೋಚನಾ ಸಭೆ :

# ಗ್ರಾಮೀಣ ತಲಾ ಆದಾಯ ವೃದ್ಧಿಯಾಗದ ಹೊರತು ಮಾನವ ಸೂಚ್ಯಂಕ ಅಭಿವೃದ್ಧಿ ಅಸಾಧ್ಯ:ಡಾ.ಎಸ್.ಟಿ.ಬಾಗಲಕೋಟೆ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಮೇ.7-ನಗರ ಪ್ರದೇಶಗಳು ಅಭಿವೃದ್ಧಿಯ ವೇಗ ಪಡೆದುಕೊಂಡಿವೆ. ಆದರೆ ಗ್ರಾಮೀಣ ಪ್ರದೇಶಗಳು ತೀರಾ ಹುಂದಿಳಿದ ಕಾರಣ ಮಾನವ ಸೂಚ್ಯಂಕದಲ್ಲಿ ಹಿಂದುಳಿದಿದ್ದೇವೆ. ಹೀಗಾಗಿ ಗ್ರಾಮೀಣ ಜನರ ತಲಾ ಆದಾಯ ಹೆಚ್ಚಿಸಲು ಹೆಚ್ಚಿನ ಆದ್ಯತೆ ನೀಡಬೇಕಿದೆ ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸದಸ್ಯಡಾ.ಎಸ್.ಟಿ.ಬಾಗಲಕೋಟೆ ಹೇಳಿದರು.

ಬುಧವಾರ ಇಲಿನ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಸಮಿತಿಯಿಂದ ಹಿಂದುಳಿದ ಪ್ರದೇಶದಲ್ಲಿ ಇದುವರೆಗಿನ ಅಭಿವೃದ್ಧಿ ಹೊಂದಿರುವ ಆಧಾರದ ಮೇಲೆ ಹೊಸದಾಗಿ ಸೂಚ್ಯಂಕ ನಿಗದಿಪಡಿಸುವ ನಿಟ್ಟಿನಲ್ಲಿ ವಿವಿಧ ಇಲಾಖೆ, ಸಂಘ-ಸಂಸ್ಥೆಗಳೊಂದಿಗೆ ನಡೆದ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,ಕೃಷಿಯೇ ಪ್ರಧಾನವಾಗಿರುವುದರಿಂದ ಗ್ರಾಮೀಣ ಭಾಗದಲ್ಲಿ ತಲಾ ಆದಾಯ ವೃದ್ಧಿಯಾಗದ ಹೊರತು ಮಾನವ ಸೂಚ್ಯಂಕ ಅಭಿವೃದ್ಧಿಯಲ್ಲ ಪ್ರಗತಿ ಅಸಾಧ್ಯ ಎಂದರು.

ಡಾ.ಡಿ.ಎಂ.ನಂಜುಡಪ್ಪ ಅವರ ವರದಿಯಂತೆ ಹಿಂದುಳಿದ ಪ್ರದೇಶದ ಅಭಿವೃದ್ಧಿಗೆ ಇದುವರೆಗೆ 34 ಸಾವಿರ ಕೋಟಿ ರೂ. ಖರ್ಚಾಗಿದೆ. ಕೆಲವು ತಾಲೂಕಿನಲ್ಲಿ ಹಿಂದುಳಿವಿಕೆ ಹೋಗಿದೆಯಾದರು ಪಾದೇಶಿಕ ಅಸಮಾನತೆ ಇನ್ನು ನೀಗಿಲ್ಲ. ಇಂದಿನ ದಿನಮಾನದಲ್ಲಿ ಖಾಸಗಿ ಕ್ಷೇತ್ರವು ತೀವ್ರಗತಿಯಲ್ಲಿ ಪ್ರಗತಿ ಕಾಣುತ್ತಿರುವುದರಿಂದ ಪ್ರದೇಶದ ಅಭಿವೃದ್ಧಿಗೆ ಅವರ ಸಹಕಾರ ಸಹ ಅಗತ್ಯವಿದೆ. ಸಿ.ಎಸ್.ಆರ್. ನೆರವು ಪಡೆಯುವುದು, ಪಿ.ಪಿ.ಪಿ. ಮಾದರಿಯಲ್ಲಿ ಯೋಜನೆ ಸಾಕಾರಗೊಳಿಸುವ ಅವಶ್ಯಕತೆ ಇದೆ ಎಂದರು.

ಡಾ.ಡಿ.ಎಂ.ನಂಜುಂಡಪ್ಪ ಅವರ 2002ರ ವರದಿಯಲ್ಲಿ ಅಂದಿನ 176 ತಾಲೂಕುಗಳನ್ನು ಹಿಂದುಳಿದ, ಅತಿ ಹಿಂದುಳಿದ, ಅತ್ಯಂತ ಹಿಂದುಳಿದ ಹಾಗೂ ಅಭಿವೃದ್ಧಿ ಹೊಂದಿದ ತಾಲೂಕುಗಳೆಂದು 4 ವರ್ಗದಲ್ಲಿ ವರ್ಗೀಕರಿಸಿ ಅದಕ್ಕನುಗುಣವಾಗಿ ಅನುದಾನ ಹಂಚಿಕೆಗೆ ಶಿಫಾರಸ್ಸು ಮಾಡಿದರು. ಅದರಂತೆ 2007-08 ರಿಮದ 2015-16ರ ವರೆಗೆ ಹಾಗೂ ತದನಂತರ ಒಟ್ಟಾರೆ 45 ಸಾವಿರ ಕೋಟಿ ರೂ. ಹಿಂದುಳಿದ ಪ್ರದೇಶಕ್ಕೆ ಹಂಚಿಕೆಯಾಗಿ 34 ಸಾವಿರ ಕೋಟಿ ರೂ. ಖರ್ಚಾದರು ದಕ್ಷಿಣ ಕರ್ನಾಟಕದ ಜಿಲ್ಲೆಗಳಿಗೆ ಹೋಲಿಸಿದರೆ ಉತ್ತರ ಕರ್ನಾಟಕ ಭಾಗದ ವಿಶೇಷವಾಗಿ ಯಾದಗಿರಿ ಸೇರಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳು ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿ ಕಂಡಿಲ್ಲ. ಕನಿಷ್ಠ ಮೂಲಸೌಕರ್ಯಗಳಿಂದ ಸಹ ವಂಚಿತ ಪ್ರದೇಶ ಇದಾಗಿದೆ ಎಂದರು.

ಬೆಂಗಳೂರು ನಗರದಿಂದಲೆ ರಾಜ್ಯದ ಬೊಕ್ಕಸಕ್ಕೆ ಶೇ.38 ಆದಾಯ ಬರುತ್ತಿದೆ. ರಾಜ್ಯಕ್ಕೆ ಹೋಲಿಸಿದರೆ ಯಾದಗಿರಿ ಜಿಲ್ಲೆಯಿಂದ ಶೇ.1, ರಾಯಚೂರು ಜಿಲ್ಲೆಯಿಂದ ಶೇ.1.77 ರಷ್ಟು ಆದಾಯ ಬರುತ್ತದೆ. ಇನ್ನು ರಾಜ್ಯದ ಸರಾಸರಿ ತಲಾ ಆದಾಯ 2.20 ಲಕ್ಷ ರೂ. ಗಳಿದ್ದರೆ ಯಾದಗಿರಿ ತಲಾ ಆದಾಯ 1.35 ಲಕ್ಷ ರೂ. ಆಗಿದೆ. 2ನೇ ಮತ್ತು 3ನೇ ಹಂತದ ನಗರಗಳು ಔದ್ಯೋಗಿಕವಾಗಿ ಬೆಳೆಸುವ ಮೂಲಕ ತಲಾ ಆದಾಯದಲ್ಲಿನ ಈ ಅಸಮಾನತೆಯನ್ನು ಹೋಗಲಾಡಿಸಬೇಕಿದೆ ಎಂದರು.

*ಮಧ್ಯಮಾವಧಿ ಮತ್ತು ದೀರ್ಘಾವಧಿ ಯೋಜನೆ ರೂಪಿಸಲು ಶಿಫಾರಸ್ಸು:ದಕ್ಷಿಣ ಕರ್ನಾಟಕದ ಭಾಗದಲ್ಲಿ 25-30 ಮಕ್ಕಳಿಗೆ ಓರ್ವ ಶಿಕ್ಷಕರಿದ್ದರೆ, ಯಾದಗಿರಿಯಲ್ಲಿ 55-76 ಮಕ್ಕಳಿಗೆ ಓರ್ವ ಶಿಕ್ಷಕರಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಶಿಕ್ಷಣ ಕ್ಷೇತ್ರ ಸುಧಾರಣೆ ಹೇಗೆ? ಎಂದು ಪ್ರಶ್ನಿಸಿದ ಅವರು, ಹತ್ತಿ, ಭತ್ತ, ತೊಗರಿ ಇಲ್ಲಿ ಬೆಳೆಯಲಾಗುತ್ತದೆ. ಆದಾಯ ಹೆಚ್ಚಿಸುವ ತರಕಾರಿ,ವಾಣಿಜ್ಯ ಬೆಳೆಗಳು ಬೆಳೆಯುವುದಿಲ್ಲ. ಕೃಷಿ ಉತ್ಪನ್ನಗಳ ಮಾರುಕಟ್ಟೆಗೆ ಬೇಕಾದ ಸಂಸ್ಕರಣಾ ಘಟಕ ಇಲ್ಲ. ವಿಶೇಷವಾಗಿ ದುಡಿಯುವ ಕೈಗೆ ಕೆಲಸ ನೀಡುವ ಕಾರ್ಖಾನೆ ಇಲ್ಲ. ಮಹಿಳೆಯರನ್ನು ಆರ್ಥಿಕ ಒಳಗೊಳ್ಳುವಿಕೆಗೆ ಪ್ರೋತ್ಸಾಹಿಸಬೇಕಿದೆ. ಯುವ ಸಮೂಹಕ್ಕೆ ಕೌಶಲ್ಯ ನೀಡಬೇಕಿದೆ ಎಂದ ಅವರು, ಈ ನಿಟ್ಟಿನಲ್ಲಿ ಎಲ್ಲಾ ಆಯಾಮದಿಂದ ಅಧ್ಯಯನ ಮಾಡಿ ಹಿಂದುಳಿವಿಕೆ ಹೋಗಲಾಡಿಸಲು ನೂತನ ತಾಲೂಕುಗಳನ್ನು ಗಣನೆಗೆ ತೆಗೆದುಕೊಂಡು ಮಧ್ಯಮಾವಧಿ ಮತ್ತು ಧೀರ್ಘಾವಧಿ ಯೋಜನೆಗಳನ್ನು ಜಾರಿಗೆ ತರಲು ಸರ್ಕಾರಕ್ಕೆ ಸಮಿತಿ ಶಿಫಾರಸ್ಸು ಮಾಡಲಿದೆ ಎಂದರು.

ಯಾದಗಿರಿ ಬಳಿ ಕೈಗಾರಿಕೆ ಎಸ್ಟೇಟ್ ಸ್ಥಾಪನೆಯಾಗಲಿ:ಜಿಲ್ಲೆಯಲ್ಲಿ ಕಡೆಚೂರು, ಮುಂಡರಗಿ ಎರಡು ಕೈಗಾರಿಕೆ ಪ್ರದೇಶ ಮತ್ತು ಶಹಾಪುರ-ಸುರಪುರ ಇಂಡಸ್ಟ್ರಿಯಲ್ ಎಸ್ಟೇಟ್ ಪ್ರದೇಶ ಹೊಂದಿದೆ. ಕಡೇಚೂರು ಪ್ರದೇಶ 30-40 ಕಿ.ಮೀ ದೂರ ಇರುವ ಕಾರಣ ಯಾದಗಿರಿ ನಗರಕ್ಕೆ ಸಮೀಪದಲ್ಲಿ ಒಂದು ಸೇರಿದಂತೆ ತಾಲೂಕಾ ಹಂತದಲ್ಲಿಯೂ ಕೈಗಾರಿಕೆ ಎಸ್ಟೇಟ್ ಪ್ರದೇಶ ಸ್ಥಾಪಿಸಬೇಕು. ಉದ್ದಿಮೆದಾರರಿಗೆ ವಾರ್ಷಿಕ ವಹಿವಾಟು ಅಧಾರದ ಮೇಲೆ ನೀಡಲಾಗುವ ಪ್ರೋತ್ಸಾಹಧನದಲ್ಲಿ ಹೆಚ್ಚಿನ ರಿಯಾಯಿತಿ ಕಲ್ಪಿಸಬೇಕು ಎಂದು ಜಿಲ್ಲಾ ಕೈಗಾರಿಕೆ ಕೇಂದ್ರದ ಜಂಟಿ ನಿರ್ದೇಶಕ ಸತೀಷಕುಮಾರ ಹೇಳಿದರು.

ಸಂಸ್ಕರಣಾ ಘಟಕ ಸ್ಥಾಪಿಸುವುದು ಅಗತ್ಯ:

ಜಂಟಿ ಕೃಷಿ ನಿರ್ದೇಶಕ ಡಾ.ರತೇಂದ್ರನಾಥ ಸುಗೂರು ಮಾತನಾಡಿ, ತೊಗರಿ, ಹತ್ತಿ, ಭತ್ತ ಜಿಲ್ಲೆಯಲ್ಲಿ ಬೆಳೆಯುವ ಪ್ರಮುಖ ಬೆಳೆಗಳಾಗಿವೆ. ಏಷ್ಯಾ ಖಂಡದಲ್ಲಿ ಉತ್ತಮ ಹತ್ತಿ, ತೊಗರಿ ಉತ್ಪಾದಿಸುವ ಗಿರಿ ಜಿಲ್ಲೆಗೆ ಥ್ರೆಡ್ ಇಂಡಸ್ಟ್ರಿ, ದಾಲ್ ಮಿಲ್ ಇಲ್ಲ. 20 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಶೇಂಗಾ ಬೆಳೆಯಲಾಗುತ್ತಿದೆ. ಈ ಕೃಷಿ ಉತ್ಪನ್ನಗಳನ್ನು ಸಂಸ್ಕರಿಸಿ ಮಾರಾಟ ಮಾಡಲು ಸಂಸ್ಕರಣಾ ಘಟಕ ಸ್ಥಾಪಿಸಿದಲ್ಲಿ ಮಾರುಕಟ್ಟೆಗೆ ಬಲ ಸಿಕ್ಕು ರೈತರ ಆದಾಯ ದ್ವಿಗುಣವಾಗಲಿದೆ ಎಂದರು.

ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳ ಬರಬೇಕಿದೆ:

ಜಿಲ್ಲೆಯಲ್ಲಿ 3,175 ಶಿಕ್ಷಕರ ಕೊರತೆ ಇರುವುದರಿಂದ ಎಸ್.ಎಸ್.ಎಲ್.ಸಿ. ಫಲಿತಾಂಶ ಸುಧಾರಣೆ ಆಗುತ್ತಿಲ್ಲ. 371ಜೆ ಕಾಯ್ದೆಯಡಿ ನೇಮಕಾತಿ, ಮುಂಬಡ್ತಿ ಪಡೆದ ನೌಕರರಿಗೆ ಪ್ರದೇಶದಲ್ಲಿ 10 ವರ್ಷ ಕಡ್ಡಾಯ ಸೇವೆ ಇದ್ದರು, ಅಲ್ಪಾವಧಿಯಲ್ಲಿ ಬೇರೆ ಜಿಲ್ಲೆಗೆ ವರ್ಗಾವಣೆ ಹೊಂದುತ್ತಿರುವುದು ಶೈಕ್ಷಣಿಕ ಕುಂಠಿತಕ್ಕೆ ಪ್ರಮುಖ ಕಾರಣ. ಪ್ರತಿಷ್ಠಿತ ಶಿಕ್ಷಣ ಸಂಸ್ಥೆ ಇಲ್ಲದ ಕಾರಣ ಎಸ್.ಎಸ್.ಎಲ್.ಸಿ. ಮುಗಿಸಿದ ನಂತರ ಇಲ್ಲಿನ ಮಕ್ಕಳು ಉನ್ನತ ಶಿಕ್ಷಣಕ್ಕೆ ಸೇರಲು ಬೇರೆ ಜಿಲ್ಲೆ ಕಡೆ ಮುಖ ಮಾಡುತ್ತಿದ್ದು, ಇದನ್ನು ತಪ್ಪಿಸಲು ಇಲ್ಲಿ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳನ್ನು ಜಿಲ್ಲೆಗೆ ಕರೆತರಬೇಕಿದೆ ಎಂದು ಡಿ.ಡಿ.ಪಿ.ಐ ಚೆನ್ನಬಸಪ್ಪ ಮುಧೋಳ ಹೇಳಿದರು.

ಹೈವೇ ಬಳಿ ಟೌನ್‌ಶಿಪ್ ಸ್ಥಾಪಿಸಿ:ಯಾದಗಿರಿ ಜಿಲ್ಲೆಯಲ್ಲಿ 65ಕಿ.ಮೀ ಸೂರತ್-ಚೆನ್ನೈ ಎಕ್ಸ್‌ಪ್ರೆಸ್ ಹೈವೆ ಹಾದು ಹೋಗುತ್ತಿದ್ದು, ರಸ್ತೆ ಬದಿಯಲ್ಲಿ ಹೊಸದಾಗಿ ಇಂಡಸ್ಟ್ರಿ ಟೌನ್‌ಶಿಪ್ ಸ್ಥಾಪಿಸಬೇಕು. ನಗರಕ್ಕೆ ರಿಂಗ್ ರೋಡ್ ಅವಶ್ಯಕತೆ ಇದೆ. ಕಡೇಚೂರು ಕೈಗಾರಿಕೆ ಪ್ರದೇಶವು ತಕ್ಕ ಮಟ್ಟಿಗೆ ಫಾರ್ಮ ಹಬ್ ಆಗಿದೆ. ಇಲ್ಲಿ 800 ಎಕರೆ ಜಮೀನು ಲಭ್ಯವಿದ್ದು, ಸೆಮಿ ಕಂಡಕ್ಟರ್ ಸ್ಥಾಪನೆಗೆ ಸೂಕ್ತವಾಗಿದೆ. ಕೃಷಿಗೆ ನೀರಿಲ್ಲ, ಗುಳೆ ತಪ್ಪಿಲ್ಲ. ನೀರಾವರಿ ಯೋಜನೆ ಸಾಕಾರದ ಜೊತೆಗೆ ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತ್ಯೇಕ ಕೈಗಾರಿಕೆ ನೀತಿ ಅವಶ್ಯಕ ಎಂದು ಯಾದಗಿರಿ ಚೆಂಬರ್ ಆಫ್ ಕಾಮರ್ಸ್ ಕಾರ್ಯದರ್ಶಿ ಚೆನ್ನಮಲ್ಲಿಕಾರ್ಜುನ ಅವರು ಅಭಿಪ್ರಾಯಪಟ್ಟರು.

ಕಾಟನ್ ಇಂಡಸ್ಟ್ರಿ ಸ್ಥಾಪಿಸಿ: ಯಾದಗಿರಿ ಏಷ್ಯಾ ಖಂಡದಲ್ಲಿ ಅತ್ಯಂತ ಗುಣಮಟ್ಟದ ಹತ್ತಿ ಬೆಳೆಯಲಾಗುತ್ತಿದ್ದು, ಇಂಡಸ್ಟ್ರಿ ಇಲ್ಲದ ಕಾರಣ ಬೇರೆಡೆ ಹೋಗಬೇಕಾದ ಅನಿವಾರ್ಯತೆ ಒದಗಿ ಬಂದಿದೆ. ಇಲ್ಲಿಯೆ ಕಾಟನ್ ಇಂಡಸ್ಟ್ರಿ ಸ್ಥಾಪಿಸಿದಲ್ಲಿ ರೈತರಿಗೆ ಅನುಕೂಲವಾಗಲಿದೆ. ತೊಗರಿ, ಭತ್ತ, ಹತ್ತಿ ಪ್ರಮುಖ ಬೆಳೆಯಾಗಿದ್ದು, ಬೆಳೆ ಕಟಾವಿನ ಸಂದರ್ಭದಲ್ಲಿ ಸಕಾಲದಲ್ಲಿ ಖರೀದಿ ಕೇಂದ್ರ ತೆರೆದು ಉತ್ಪನ್ನ ಖರೀದಿಸಿದಲ್ಲಿ ರೈತರಿಗೆ ನೆರವಾಗಲಿದೆ. ನಬಾರ್ಡ್ ಯೋಜನೆ ಕುರಿತು ರೈತರಿಗೆ ಅರಿವಿಲ್ಲ, ಜಾಗೃತಿ ಮೂಡಿಸಿ ಸಾಲ ಸೌಲಭ್ಯ ಕಲ್ಪಿಸಿ ಗೋಡೌನ್ ನಿರ್ಮಾಣ ಹೆಚ್ಚಿಸಬೇಕೆಂದರು.

ಸ್ಲೀಪಿಂಗ್ ಬುದ್ಧ ಪ್ರವಾಸಿತಾಣವಾಗಲಿ: ಜಿಲ್ಲಾ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ಸಂತೋಷ ಭರತನೂರ ಮಾತನಾಡಿ ಜಿಲ್ಲೆಯ ಶಹಾಪುರನಲ್ಲಿರುವ ಸ್ಲೀಪಿಂಗ್ ಬುದ್ಧ ನೋಡಲು ವಿದೇಶದಿಂದ ಪ್ರವಾಸಿಗರು ಆಗಮಿಸುತ್ತಿದ್ದು, ಇದನ್ನು ಪ್ರವಾಸಿ ತಾಣವನ್ನಾಗಿಸಿ ಅಭಿವೃದ್ಧಿ ಮಾಡಿದಲ್ಲಿ ಸ್ಥಳೀಯವಾಗಿ ಆರ್ಥಿಕ ವಹಿವಾಟು ಜೋರಾಗಲಿದೆ. ಬೋನಾಳ ಪಕ್ಷಿಧಾಮ, ನಾರಾಯಣಪುರ ಜಲಾಶಯ, ಜಿಲ್ಲೆಯ ಇತರೆ ಫಾಲ್ಸ್‌ನಲ್ಲಿ ಪ್ರವಾಸಿ ಮೂಲಸೌಕರ್ಯ ಹೆಚ್ಚಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲೆಯ 451 ಪ್ರಾಥಮಿಕ ಶಾಲೆಗಳ ಪೈಕಿ 94 ಶಾಲೆಗೆ ಶಿಕ್ಷಕರಿಲ್ಲ. 142 ಶಾಲೆಗೆ ಒಬ್ಬನೆ ಶಿಕ್ಷಕ. ಗಣಿತ, ವಿಜ್ಞಾನ, ಇಂಗ್ಲೀಷ್ ಶಿಕ್ಷಕರ ಕೊರತೆ ಹೆಚ್ಚಿದೆ. ಪ್ರಾಥಮಿಕ ಶಿಕ್ಷಣ ನೀಡಲು ಮೂಲಸೌಕರ್ಯ ಕೊರತೆ ಇರುವುದರಿಂದ ಹೇಗೆ ಮಕ್ಕಳನ್ನು ಶಿಕ್ಷಿತರನ್ನಾಗಿ ಮಾಡುವುದು. ಎಲ್ಲಾ ಮಕ್ಕಳ ಏಕಲವ್ಯವಾಗಲು ಸಾಧ್ಯ ಇಲ್ಲ. ಪ್ರತಿಭೆ ಇದ್ದು, ಮಕ್ಕಳು ಅವಕಾಶ ವಂಚಿತರಾಗಿದ್ದಾರೆ ಎಂದು ವೆಂಕಣ್ಣ ಡೊಳ್ಳೆಗೌಡರ್ ಅಭಿಪ್ರಾಯಪಟ್ಟರು. ಮುಂದೆ ಶಿಕ್ಷಕರ ನೇಮಕಾತಿ ಸಂದರ್ಭದಲ್ಲಿ ಕ.ಕ.ಪ್ರದೇಶದಲ್ಲಿನ ಎಲ್ಲಾ ಶಿಕ್ಷಕರ ಭರ್ತಿ ಮಾಡಿದ ನಂತರ ಉಳಿದ ಪ್ರದೇಶಕ್ಕೆ ಪರಿಗಣಿಸಲಿ ಎಂದು ನಿವೃತ್ತ ಉಪನ್ಯಾಸಕ ಸಿ.ಎಂ.ಪಟ್ಟೆದಾರ ಅವರು ಒತ್ತಾಯ ಮಾಡಿದರು.

ಇನ್ನು ಸಮಾಲೋಚಣೆ ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು, ಡಿ.ಎಚ್.ಓ., ತೋಟಗಾರಿಕೆ ಉಪನಿರ್ದೇಶಕರು, ಮೀನುಗಾರಿಕೆ ಉಪನಿರ್ದೇಶಕರು, ಕೆ.ಕೆ.ಆರ್.ಟಿ.ಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳು., ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರು, ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಸೇರಿದಂತೆ ಅನೇಕರು ಯಾದಗಿರಿ ಜಿಲ್ಲೆಯ ಅಭಿವೃದ್ಧಿ ಕುರಿತು ಸಲಹೆಗಳನ್ನು ನೀಡಿದರು.

ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅವರು ಪ್ರಸ್ತಾವಿಕವಾಗಿ ಮಾತನಾಡಿ ಜಿಲ್ಲೆಯ ಭೌಗೋಳಿಕ ಇತಿಹಾಸದ ಜೊತೆಗೆ ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ಎಸ್.ಡಿ.ಪಿ. ಯೋಜನೆಯಡಿ ಕೈಗೊಂಡ ಕೆಲಸ ಕಾರ್ಯಗಳ ಬಗ್ಗೆ ವಿವರಿಸಿದರು.

ಸಭೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸದಸ್ಯೆ ಸಂಗೀತಾ ಕೆ.ಎನ್., ಜಿಲ್ಲಾ ಪಂಚಾಯತ್ ಸಿ.ಇ.ಓ ಲವೀಶ್ ಓರಡಿಯಾ, ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಸೇರಿದಂತೆ ಜಿಲ್ಲೆಯ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

# ರಾಜ್ಯ ಮಹಿಳಾ ಆಯೋಗ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 07-ಕರ್ನಾಟಕರಾಜ್ಯಮಹಿಳಾಆಯೋಗ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಇದೇ 2025ರ ಮೇ 11 ರಂದು ಯಾದಗಿರಿ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಬೆಂಗಳೂರು ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಅವರು ತಿಳಿಸಿದ್ದಾರೆ. 2025ರ ಮೇ 11ರ ಭಾನುವಾರ ರಂದು ಅಂದು ಬೆಳಿಗ್ಗೆ 10 ಗಂಟೆಗೆ ಯಾದಗಿರಿಯಿಂದ ನಿರ್ಗಮಿಸಿ, ಬೆಳಿಗ್ಗೆ 11 ಗಂಟೆಗೆ ಸುರಪುರ ತಾಲ್ಲೂಕು ಜಾಲಿಬೆಂಚಿ ಗ್ರಾಮ ಭೇಟಿ ನೀಡಲಿದ್ದಾರೆ, ಗ್ರಾಮದ ಶ್ರೀ ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಮೂರ್ತಿ ಪ್ರತಿಷ್ಠಾಪನೆ ಉದ್ಘಾಟನೆ ಮತ್ತು ಉಚಿತ ಸಾಮೂಹಿಕ ವಿವಾಹ ಮಹೋತ್ಸವದಲ್ಲಿ ಭಾಗವಹಿಸುವರು. ನಂತರ ಸಂಜೆ 4 ಗಂಟೆಗೆ ಜಾಲಿಬೆಂಚಿ ಗ್ರಾಮದಿಂದ ನಿರ್ಗಮಿಸಿ, ಸಂಜೆ 5 ಗಂಟೆಗೆ ಯಾದಗಿರಿ ತಲುಪುವರು. ತದನಂತರ ಸಂಜೆ 6.10 ಗಂಟೆಗೆ ಬೆಂಗಳೂರು ಪ್ರಯಾಣ ಬೆಳೆಸುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತುರ್ತು ಪರಿಸ್ಥಿತಿ ಎದುರಿಸಲು ಕ್ರಮ: ರಾಯಚೂರ

# ಜಿಲ್ಲೆಯಲ್ಲಿ ನಾಗರಿಕಾ ರಕ್ಷಣೆ ಸಿದ್ಧತಾ ಕಾರ್ಯಾಚರಣೆ ಆರಂಭ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಮೇ07-ತುರ್ತು ಪರಿಸ್ಥಿತಿಯ ಪ್ರತಿಕೂಲ ಸಂದರ್ಭದಲ್ಲಿ ನಾಗರಿಕ ರಕ್ಷಣೆ, ಹಾನಿ ಕಡಿಮೆಗೊಳಿಸುವುದು, ಸಶಸ್ತ್ರ ಪಡೆಗಳ ಕಾರ್ಯದಕ್ಷತೆ ಬಲಗೊಳಿಸುವುದು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಮುಂಜಾಗ್ರತಾ ಕ್ರಮವಾಗಿ ರಾಯಚೂರ ಜಿಲ್ಲೆಯಲ್ಲಿ ಸಹ ನಾಗರಿಕ ರಕ್ಷಣಾ ಸಿದ್ಧತೆ ಕಾರ್ಯಾಚರಣೆ ಆರಂಭವಾಗಿದೆ.

ಈ ಹಿನ್ನೆಲೆಯಲ್ಲಿ ಮೇ 7ರಂದು ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾ ಭವನದಲ್ಲಿ ಸಚಿವರು, ಸಂಸದರು, ಶಾಸಕರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಉನ್ನತ ಅಧಿಕಾರಿಗಳ ಸಮ್ಮುಖದಲ್ಲಿ ತುರ್ತು ಸಭೆ ನಡೆಯಿತು.

ನಾಗರಿಕ ರಕ್ಷಣೆ, ನಾಗರಿಕ ರಕ್ಷಣಾ ಯೋಜನೆ, ಸೇನಾ ದಾಳಿ ಸಂದರ್ಭದಲ್ಲಿ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳು, ನಾಗರಿಕ ರಕ್ಷಣಾ ಕಾಯಿದೆ-1968, ಭಾರತ ರಕ್ಷಣಾ ಕಾಯಿದೆ 1962, 1971, ಜಿನೀವಾ ಕನ್ವೆನ್ಷನ್ ಕಾಯಿದೆ-2010, ನಾಗರಿಕ ರಕ್ಷಣೆ ಮತ್ತು ತರಬೇತಿ ಸೇರಿದಂತೆ ನಾನಾ ವಿಷಯಗಳ ಬಗ್ಗೆ ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಯಿತು.

ತುರ್ತು ಪರಿಸ್ಥಿತಿಯ ಪ್ರತಿಕೂಲ ಸಂದರ್ಭದಲ್ಲಿ ಅಗ್ನಿಶಾಮಕ ಸೇವೆ, ರಕ್ಷಣಾ ಸೇವೆ, ತುರ್ತು ಸೇವೆ, ಕಲ್ಯಾಣ ಸೇವೆ, ಶವ ವಿಲೇವಾರಿ ಕ್ರಮಗಳು, ಸರ್ಕಾರಿ ಸಿಬ್ಬಂದಿ, ವಾರ್ಡನ್ ಮತ್ತು ಸ್ವಯಂ ಸೇವಕರನ್ನು ನೋಂದಾಯಿಸಿ ತರಬೇತಿ ನೀಡುವುದು, ಸಿವಿಲ್ ಡಿಫೆನ್ಸ್ ಕಂಟ್ರೋಲ್ ರೂಮ್‌ಗಳನ್ನು ಹಾಗೂ ಸಿವಿಲ್ ಡಿಫೆನ್ಸ್ ಸೈರನಗಳನ್ನು ಕಾರ್ಯಗತಗೊಳಿಸುವುದು ಮತ್ತು ಅಗತ್ಯ ಉಪಕರಣಗಳು ಮತ್ತು ಸರಬರಾಜಿನೊಂದಿಗೆ ನಾಗರಿಕ ರಕ್ಷಣಾ ಮತ್ತು ಸ್ಥಳೀಯ ತುರ್ತು ಸೇವೆಗಳನ್ನು ಸಜ್ಜುಗೊಳಿಸುವುದು, ವಸತಿಗಾಗಿ ಸುರಕ್ಷಿತ ಕಟ್ಟಡ ಮತ್ತು ಸೇನಾರಹಿತ ವಲಯವನ್ನು ಗುರುತಿಸುವುದು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಿತು.

ಮಾಕ್ ಡ್ರಿಲ್ ರೂಪುರೇಷಗಳ ಬಗ್ಗೆ ಸಹ ಸಭೆಯಲ್ಲಿ ಚರ್ಚೆ ನಡೆಯಿತು. ವಾಯುದಾಳಿಯ ಸಂದರ್ಭದಲ್ಲಿ ಸೈರನಗಳ ಸಕ್ರಿಯಗೊಳಿಸುವಿಕೆ, ತೆಗೆದುಕೊಳ್ಳಬೇಕಾದ ಕ್ರಮಗಳು, ಯಾವುದೇ ಕಟ್ಟಡದಲ್ಲಿ ಬೆಂಕಿಕಾಣಿಸಿಕೊಂಡಲ್ಲಿ ಪಾರಾಗುವ ಕ್ರಮಗಳು, ಹಾನಿಗೊಳಗಾದ ಕಟ್ಟಡದಿಂದ ಸ್ಥಳಾಂತರ ಕ್ರಮ, ತಾತ್ಕಾಲಿಕ ಆಸ್ಪತ್ರೆಯ ಸ್ಥಾಪನೆ, ಆಕ್ರಮಿತ ಪ್ರದೇಶದಿಂದ ನಾಗರಿಕನ್ನು ಸೇನಾರಹಿತ ವಲಯಗಳಿಗೆ ಸ್ಥಳಾಂತರಿಸುವುದು, ಕಂಟ್ರೋಲ್ ರೂಮ್ ಗೆ ವರದಿ ನೀಡುವುದು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಮಾಕ್ ಡ್ರಿಲ್ ಸಂದರ್ಭದಲ್ಲಿ ಸರಿಯಾಗಿ ಅಭ್ಯಾಸ ನಡೆಸಬೇಕು ಎಂದು ಸಭೆಯಲ್ಲಿ ನಿರ್ಣಯಿಸಲಾಯಿತು.

ಸಾರ್ವಜನಿಕರಲ್ಲಿ ಮನವಿ: ಈ ವೇಳೆ ರಾಯಚೂರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ಮಾತನಾಡಿ, ತುರ್ತು ಪರಿಸ್ಥಿತಿಯ ಬಗ್ಗೆ ನಾಗರಿಕರು ಯಾವುದೇ ಆತಂಕಕ್ಕೆ ಒಳಗಾಗಬಾರದು ಎಂದು ಸಭೆಯ ಮೂಲಕ ಜಿಲ್ಲೆಯ ಜನರಲ್ಲಿ ಮನವಿ ಮಾಡಿದರು. ಆಯಾ ವಿಧಾನಸಭಾ ಕ್ಷೇತ್ರಗಳ ಎಲ್ಲ ಶಾಸಕರು ತಮ್ಮ ತಮ್ಮ ಕ್ಷೇತ್ರಗಳಲ್ಲಿದ್ದು ಈ ಬಗ್ಗೆ ವಿಶೇಷ ನಿಗಾವಹಿಸಬೇಕು. ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿರಬೇಕು ಎಂದು ತಿಳಿಸಿದರು. ನಾಗರಿಕ ರಕ್ಷಣಾ ಕಾರ್ಯಚರಣೆಗೆ ಸಂಬಂಧಿಸಿದಂತೆ ಸರ್ವ ಪಕ್ಷಗಳ ಮತ್ತು ಎಲ್ಲ ಸಂಘಟನೆಗಳ ಸಭೆ ಕರೆದು ಚರ್ಚಿಸಲು ಕ್ರಮ ವಹಿಸಬೇಕು ಎಂದು ಸಚಿವರು ಎಲ್ಲ ತಹಸೀಲ್ದಾರಗಳಿಗೆ ಸೂಚನೆ ನೀಡಿದರು.

ರಾಯಚೂರಿನ ವೈಟಿಪಿಎಸ್, ಆರ್‌ಟಿಪಿಎಸ್‌ಗಳು, ರಸಾಯನಿಕ ಫ್ಯಾಕ್ಟರಿಗಳನ್ನು ಗುರಿಯಾಗಿಸುವ ತಂತ್ರಗಾರಿಕೆಯ ಬಗ್ಗೆ ಮುನ್ನೆಚ್ಚರಿಕೆ ವಹಿಸಬೇಕು. ವಿಶೇಷವಾಗಿ ಭದ್ರತಾ ಪಡೆಗಳು ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳು ತಾವಿರುವ ಸ್ಥಳದಲ್ಲಿ ಜಾಗೃತರಾಗಿರಬೇಕು. ಅವಶ್ಯಕ ಸಂದರ್ಭದಲ್ಲಿ ಸಹಾಯವಾಗಲು ಅಗ್ನಿಶಾಮಕ ವಾಹನಗಳ ಖರೀದಿಗೆ ಕ್ರಮ ವಹಿಸಬೇಕು. ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿ ಸುಸಜ್ಜಿತ ವೈದ್ಯಕೀಯ ಸೇವೆ ಇರುವಂತೆ ನೋಡಿಕೊಳ್ಳಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಖ್ಯವಾಗಿ ವಿವಿಧ ಭದ್ರಾತಾ ಪಡೆಗಳು ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಸೂಕ್ತ ತರಬೇತಿಯೊಂದಿಗೆ ಕಾರ್ಯಾಚರಣೆಯಲ್ಲಿ ಸಕ್ರಿಯವಾಗಬೇಕು. ಆರೋಗ್ಯ, ಅಗ್ನಿಶಾಮಕ ಮತ್ತು ಇನ್ನೀತರ ಇಲಾಖೆಗಳೊಂದಿಗೆ ಸಮನ್ವಯದಿಂದ ಕಾರ್ಯ ನಡೆಸಿ ಸಾಕಷ್ಟು ಪೂರ್ವ ಸಿದ್ಧತೆ ಮಾಡಿಕೊಂಡಲ್ಲಿ ಯಾವುದೇ ಬಗೆಯ ತುರ್ತು ಪರಿಸ್ಥಿತಿಯ ಪ್ರತಿಕೂಲ ಸಂದರ್ಭವನ್ನು ಸಮರ್ಥವಾಗಿ ಎದುರಿಸಬಹುದಾಗಿದೆ ಎಂದು ಸಚಿವರಾದ ಎನ್.ಎಸ್.ಬೋಸರಾಜು ಅವರು ಮತ್ತು ಸಂಸದರಾದ ಜಿ.ಕುಮಾರ ನಾಯಕ ಅವರು ಅಧಿಕಾರಿಗಳಿಗೆ ಸಲಹೆ ಮಾಡಿದರು.

ಮಾಕ್ ಡ್ರಿಲ್ ಮತ್ತು ಇನ್ನೀತರ ವಿಷಯಗಳ ಬಗ್ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಅವರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಶಾಸಕರಾದ ಬಸನಗೌಡ ದದ್ದಲ್, ಬಸವರಾಜ ತುರವಿಹಾಳ, ಹಂಪನಗೌಡ ಬಾದರ್ಲಿ, ಎ ವಸಂತಕುಮಾರ, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಗಜಾನನ ಬಾಲೆ ಮತ್ತು ಇನ್ನೀತರರು ಇದ್ದರು.

# ತಪ್ಪಿತಸ್ಥರನ್ನು ಗರಿಷ್ಠ ಪ್ರಮಾಣದ ಶಿಕ್ಷೆಗೆ ಗುರಿ ಮಾಡುವಂತೆ ಬಿಜೆಪಿ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಭಾರತೀಯ ಜನತಾ ಪಕ್ಷದ ಯಲಬುರ್ಗಾ ಮಂಡಲ ಅಧ್ಯಕ್ಷ ಮಾರುತಿ ಗಾವರಾಳ ಮಾತನಾಡುತ್ತ ಬಾಬಾ ಸಾಹೇಬರಿಗೆ ಮಾಡಿರುವ ದೇಶದ 140 ಕೋಟಿ ಜನರಿಗೆ ಮಾಡಿರುವಂತಹ ಅಪಮಾನವಾಗಿದ್ದು. ಇಂತಹ ಕೃತ್ಯ ಎಸುಗಿದವರಿಗೆ ಕೊಡುವ ಶಿಕ್ಷೆ ಮುಂದಿನ ಪೀಳಿಗೆಗೆ ಮಾದರಿಯಾಗಬೇಕು ಎಂದು ಸರ್ಕಾರ ಹಾಗೂ ಪೊಲೀಸ್ ಇಲಾಖೆಯನ್ನು ಆಗ್ರಪಡಿಸುವುದಾಗಿ ತಿಳಿಸಿದರು. ಜಾತಿ ಭೇದ ಭಾವಗಳಿಲ್ಲದ ಗ್ರಾಮೀಣ ಪ್ರದೇಶಗಳಲ್ಲೂ ಸಹ ಇಂತಹ ಕೃತ್ಯ ಜರುಗುತ್ತಿರುವುದು ಮುಂದಿನ ದಿನಗಳಲ್ಲಿ ಸಮಾಜ ಯಾವ ದಿಕ್ಕಿನತ್ತ ಸಾಗುತ್ತಿದೆ ಎಂದು ಆಶ್ಚರ್ಯ ವ್ಯಕ್ತವಾಗುತ್ತಿದೆ ಆದ್ದರಿಂದ ಈಗಲೇ ಇಂತಹ ಘಟನೆಗಳನ್ನು ಹತೋಟಿಗೆ ತಂದು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಭಾರತೀಯ ಜನತಾ ಪಕ್ಷ ಯಲಬುರ್ಗಾ ಮಂಡಲ ವಕ್ತಾರ ವೀರಣ್ಣ ಹುಬ್ಬಳ್ಳಿ ಮಾತನಾಡಿ ಬಸವಣ್ಣನವರ ಕಾಲದಿಂದಲೂ ಸಹ ಮಹನೀಯರಿಗೆ ಅಪಮಾನ ಎಸಗಿರುವ ಜನರನ್ನು ಉಲ್ಲೇಖಗಳಲ್ಲಿ ಕಾಣಬಹುದಾಗಿದೆ. ಇಂತಹ ಘಟನೆಗಳಿಂದ ಪ್ರತಿಯೊಬ್ಬರು ತಲೆತಗ್ಗಿಸುವಂತಹ ಪರಿಸ್ಥಿತಿ ನಿರ್ಮಾಣವಾಗಿದ್ದು ಬಾಬಾ ಸಾಹೇಬರ ಭಾವಚಿತ್ರಕ್ಕೆ ಮಾಡಿರುವ ಅಪಮಾನ ಹೆತ್ತ ತಾಯಿಗೆ ಮಾಡಿದ ಅಪಮಾನಕ್ಕೆ ಸಮಾನಾಗಿದ್ದು ಇಂತಹ ಪ್ರಕರಣದಲ್ಲಿ ಯಾವುದೇ ರಾಜಕೀಯ ಮುಖಂಡರು ಸಮರ್ಥನೆಗೆ ನಿಲ್ಲಬಾರದು. ಅಂತಹ ಪ್ರಸಂಗ ಜರುಗಿದರೆ ಅವರ ವಿರುದ್ಧ ಪ್ರತಿಭಟನೆಗೆ ಭಾರತೀಯ ಜನತಾ ಪಕ್ಷ ಸದಾ ಸಿದ್ಧವಾಗಿರುತ್ತದೆ ಎಂದು ಹೇಳಿದರು. ಭಾರತೀಯ ಜನತಾ ಪಕ್ಷ ಯಲಬುರ್ಗಾ ಮಂಡಲದ ಎಸ್ ಸಿ ಮೋರ್ಚಾ ಅಧ್ಯಕ್ಷ ಸಿದ್ದು ಮಣ್ಣಿನವರ ಮಾತನಾಡುತ್ತಾ ಜಿಲ್ಲೆಯ ಇತಿಹಾಸದಲ್ಲೇ ಇದೊಂದು ಅಮಾನವೀಯ ಕೃತ್ಯವಾಗಿದೆ. ಈ ಕೃತ್ಯವಸಗಿದವರು ಭಾರತ ದೇಶದಲ್ಲಿ ಇರುವುದಕ್ಕೆ ನಾಲಾಯಕರಾಗಿದ್ದು ಭವಿಷ್ಯದಲ್ಲಿ ಇಂತಹ ಘಟನೆಗಳು ಸಂಭವಿಸದೆ ಇರಲು ಮಹನೀಯರ ಭಾವಚಿತ್ರ ಇರುವ ಸ್ಥಳ ಹಾಗೂ ವೃತ್ತಗಳಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮೆರಾ ಅಳವಡಿಸುವುದರೊಂದಿಗೆ ಸೂಕ್ತ ರಕ್ಷಣೆ ಒದಗಿಸಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಶಿವಕುಮಾರ್ ನಾಗಲಾಪುರ ಮಠ, ಶರಣಪ್ಪ ಬಣ್ಣದ ಬಾವಿ, ಅಯ್ಯನಗೌಡ ಕೆಂಚಮ್ಮನವರ್, ಸಿದ್ದು ಉಳ್ಳಾಗಡ್ಡಿ, ಬಸವನಗೌಡ ತೊಂಡಿಹಾಳ, ಬಸವರಾಜ ಹಾಳಕೇರಿ, ಮಹೇಶ ಕಲ್ಮಠ, ಜಗದೀಶ್ ಸೋಂಡಿ, ಜಗನ್ನಾಥ ಭೋವಿ, ಮಂಜುನಾಥ ಹೂಗಾರ, ಬಾಲರಾಜ ಗಾಳಿ, ಮಹೇಶ್ ಹೂಗಾರ, ಶಿವರಾಜ ಎಲ್ಲಪ್ಪಗೌಡ, ಪ್ರಕಾಶ್ ಹಿರೇಮನಿ, ಸಾಧಿಕ್, ಮಂಜು ಮಾಲಾಗಿತ್ತಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು .

ಹಣಕಾಸು ಸಂಸ್ಥೆಗಳು, ಗಿರಿವಿದಾರರು, ಲೇವಾದೇವಿಗಾರರು

# ಪರವಾನಿಗೆ ಮೂರು ವರ್ಷಗಳಿಗೊಮ್ಮೆ ನವೀಕರಿಸಿಕೊಳ್ಳಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 07 : ಯಾದಗಿರಿ ಜಿಲ್ಲೆಯ ಯಾದಗಿರಿ ಉಪ ವಿಭಾಗದಲ್ಲಿ ನೊಂದಣಿಯಾಗಿ ಹೊಸದಾಗಿ ಮತ್ತು ನವೀಕರಣಗೊಳ್ಳಬೇಕಾಗಿರುವ ಹಣಕಾಸು ಸಂಸ್ಥೆಗಳು ಮತ್ತು ಗಿರಿವಿದಾರರು ಹಾಗೂ ಲೇವಾದೇವಿಗಾರರ ಇನ್ನೂ ಮುಂದೆ ಪರವಾನಿಗೆಯನ್ನು ಮೂರು ವರ್ಷಗಳಿಗೊಮ್ಮೆ ನವೀಕರಿಸಿಕೊಳ್ಳಬೇಕು ಎಂದು ಯಾದಗಿರಿ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯಲ್ಲಿ ಯಾದಗಿರಿ ನಗರ, ಗುರುಮಠಕಲ್, ಶಹಾಪೂರ, ವಡಗೇರಾ, ಸುರಪುರ, ಹುಣಸಗಿ, ತಾಲ್ಲೂಕುಗಳಲ್ಲಿ, ಹಣಕಾಸು ಸಂಸ್ಥೆಗಳು ಮತ್ತು ಗಿರವಿದಾರರು ಹಾಗೂ ಲೇವಾದೇವಿಗಾರರ ಕರ್ನಾಟಕ ಲೇವಾದೇವಿ ಅಧಿನಿಯಮ 1961ರ ರಡಿ ನೀಡಲಾಗಿರುವ ಹೊಸದಾಗಿ ಮತ್ತು ನವೀಕರಣಗೊಳ್ಳಬೇಕಾಗಿರುವ ಹಣಕಾಸು ಸಂಸ್ಥೆಗಳು ಮತ್ತು ಗಿರಿವಿದಾರರು ಹಾಗೂ ಲೇವಾದೇವಿಗಾರರ ಇನ್ನೂ ಮುಂದೆ ಪರವಾನಿಗೆಯನ್ನು ಮೂರು ವರ್ಷಗಳಿಗೊಮ್ಮೆ ನವೀಕರವಾಡಿಕೊಳ್ಳಬೇಕು, ಸಹಕಾರ ಸಂಘಗಳ ನಿಬಂಧಕರು ಕರ್ನಾಟಕ ರಾಜ್ಯ ಬೆಂಗಳೂರು ಅವರ ಸುತ್ತೋಲೆ ಸಂಖ್ಯೆ 289ರ ಪ್ರಕಾರ ಆದೇಶ ಹೊರಡಿಸಿದ್ದಾರೆ.

ಯಾದಗಿರಿ ಜಿಲ್ಲೆಯಲ್ಲಿ ಬರುವ ಸಂಸ್ಥೆಗಳು ಮತ್ತು ಗಿರವಿದಾರರು ಹಾಗೂ ಲೇವಾದೇವಿಗಾರರ ಕರ್ನಾಟಕ ಲೇವಾದೇವಿ ಅಧಿನಿಯಮ 1961ರ ರಡಿ ನೀಡಲಾಗಿರುವ ಹೊಸದಾಗಿ ಮತ್ತು ನವೀಕರಣಗೊಳ್ಳಬೇಕಾಗಿರುವ ಹಣಕಾಸು ಸಂಸ್ಥೆಗಳು ಮತ್ತು ಗಿರವಿದಾರರು ಹಾಗೂ ಲೇವಾದೇವಿಗಾರರ ಇನ್ನೂ ಮುಂದೆ ಪರವಾನಿಗೆಯನ್ನು ಮೂರು ವರ್ಷಗಳಿಗೊಮ್ಮೆ ನವೀಕರವಾಡಿಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರಸಭೆ ಸ್ಥಾಯಿ ಸಮಿತಿ ನೂತನ ಅಧ್ಯಕ್ಷ ಬಸಯ್ಯ ಹಿರೇಮಠಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರಸಭೆ ಸ್ಥಾಯಿ ಸಮಿತಿ ನೂತನ ಅಧ್ಯಕ್ಷರಾಗಿ ಬಸಯ್ಯ ಹಿರೇಮಠ ಆಯ್ಕೆಯಾದರು. ಮಂಗಳವಾರ ಸಂಜೆ ನಗರಸಭೆ ಸ್ಥಾಯಿ ಸಮಿತಿ ನೂತನ ಅಧ್ಯಕ್ಷರಾದ ಬಸಯ್ಯ ಹಿರೇಮಠ ಅವರಿಗೆ ಜಂಗಮ ಸಮಾಜ ವತಿಯಿಂದ ಕೊಪ್ಪಳದ ಹೊಸಪೇಟೆ ರಸ್ತೆಯಲ್ಲಿರುವ ಶ್ರೀ ರೇಣುಕಾಚಾರ್ಯರ ಮಂದಿರದಲ್ಲಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಜಂಗಮ ಸಮಾಜ ಗೌರವಧ್ಯಕ್ಷರಾದ ಕೊಟ್ರಬಸಯ್ಯ ಹಿರೇಮಠ, ನಿರ್ದೇಶಕರಾದ ವಿಜಯಕುಮಾರ್ ವಸ್ತ್ರದ, ಶಿವಕುಮಾರ್ ಹಿರೇಮಠ, ಪಂಪಯ್ಯ ಹಿರೇಮಠ, ಮುಖಂಡರಾದ ಸದಾಶಿವಯ್ಯ ಹಿರೇಮಠ, ಮಹಾಂತಯ್ಯ ಶಾಸ್ತ್ರಿ, ದಯಾನಂದ, ಕುಮಾರ್ ಸಮರ್ಥ ಹಿರೇಮಠ ಸೇರಿದಂತೆ ಇನ್ನೂ ಅನೇಕ ಸಮಾಜದ ಮುಖಂಡರು ಇದ್ದರು.


# ಮೇ 12 ರಂದು ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 07-ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ 2025-26ನೇ ಸಾಲಿಗೆ 5 ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ 6 ನೇ ತರಗತಿಗೆ ಪ್ರತಿಷ್ಠಿತ ಖಾಸಗಿ ಶಾಲೆಗಳ ಪ್ರವೇಶಾತಿಗೆ ಮೇ 09 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ರವರೆಗೆ ನಗರದ ಅಂಚೆ ಕಚೇರಿ ಪಕ್ಕದ ಸರ್ಕಾರಿ ಬಾಲಕೀಯರ ಜೂನಿಯರ್ ಕಾಲೇಜಿನಲ್ಲಿ ಅರ್ಹತಾ ಪ್ರವೇಶ ಪರೀಕ್ಷೆ ನಡೆಸಲಾಗುತ್ತದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಆಯಾ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಪ್ರವೇಶ ಪತ್ರ ಪಡೆದು, ಮೇ 09 ರಂದು ಬೆಳಿಗ್ಗೆ 10 ಗಂಟೆಗೆ ಪರೀಕ್ಷಾ ಕೇಂದ್ರದಲ್ಲಿ ಹಾಜರಿರಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ದೂ.08392-242453,ಮೊ.9986302091ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಬಳ್ಳಾರಿ,ಮೇ 07-ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಮೇ 12 ರಂದು ಸಂಜೆ 06.30 ಗಂಟೆಗೆ



ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ,ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ,ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಭಾರತೀಯ ಬೌದ್ಧ ಮಹಾಸಭಾ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷರಾದ ಕಮಲರತ್ನ ಬಂತೇಜಿ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಸಂಸ್ಕೃತಿ ಚಿಂತಕರಾದ ಡಾ.ವೆಂಕಟಗಿರಿ ದಳವಾಯಿ ಅವರು ಜಯಂತಿ ಕಾರ್ಯಕ್ರಮದ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಬಳ್ಳಾರಿಯ ಜಡೇಶ್ ಎಮ್ಮಿಗನೂರು ಅವರು ಬುದ್ಧ-ಬಸವಣ್ಣ-ಅಂಬೇಡ್ಕರ್ ಅವರ ಕುರಿತ ಗೀತೆಗಳು ಪ್ರಸ್ತುತಪಡಿಸುವರು.

ಮೆರವಣಿಗೆ:

ಜಯಂತಿ ಅಂಗವಾಗಿ ಅಂ-ದು ಸಂಜೆ 04.30 ಗಂಟೆಗೆ ನಗರದ ಮುನ್ಸಿಪಲ್ ಕಾಲೇಜು ಮೈದಾನದಿಂದ ಮೆರವಣಿಗೆ ನಡೆಯಲಿದೆ. ಮೆರವಣಿಗೆಯು ಮುನ್ಸಿಪಲ್ ಕಾಲೇಜು ಮೈದಾನದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ-ಬೆಂಗಳೂರು ರಸ್ತೆ-ಹಳೆ

# ವಿಶ್ವವಿದ್ಯಾನಕ್ಕೆ ಸೇರಿದ 250 ಎಕರೆ ಜಮೀನು ಲಪಟಾಯಿಸಲು ಹೊಂಚು

ಮಲ್ಲಮ್ಮ ನುಡಿ ವಾರ್ತೆ

ಕಲ್ಬುರ್ಗಿ..ದಲಿತ ಸಂಘರ್ಷ ಸಮಿತಿ ವತಿಯಿಂದ ವಿಶ್ವವಿದ್ಯಾಲಯಕ್ಕೆ ಉನ್ನತ ಶಿಕ್ಷಣ ಗುಣಮಟ್ಟ ಹೆಚ್ಚಿಸುವುದು ಹಾಗೂ ಮೂಲ ಸೌಕರ್ಯಗಳಿಂದ ಬಳಲುತ್ತಿರುವ, ಬೋಧಕ ಸಿಬ್ಬಂದಿಯ ಕೊರತೆ-ಯ ಬಗ್ಗೆ ಗಮನ ಹರಿಸದೇ ವಿಶ್ವವಿದ್ಯಾಲಯಕ್ಕೆ ಸೇರಿದ 250 ಎಕರೆ ಜಮೀನು ಲಪಟಾಯಿಸಲು ಹೊಂಚು ಹಾಕುತ್ತಿರುವ ಸರಕಾರದ ಕ್ರಮವನ್ನು ದಲಿತ ಸಂಘರ್ಷ ಸಮಿತಿ ಉಗ್ರವಾಗಿ ಖಂಡಿಸುತ್ತದೆ.

ಸ್ಪೋರ್ಟ ಸಿಟಿ ಹಾಗೂ ಸ್ಪೋರ್ಟ ಹಬ್ ಮತ್ತು ಇತರೆ ಸರಕಾರದ ಕಟ್ಟಡಗಳಿಗೆ ಸುಮಾರು 70 ಎಕರೆ ಜಮೀನು ಕೊಡಲು ವಿಶ್ವವಿದ್ಯಾಲಯ ಆಡಳಿತ ಮಂಡಳಿಗೆ ಸರಕಾರದ ಹಿರಿಯ ಅಧಿಕಾರಿಗಳು ಒತ್ತಡ ಹಾಕುತ್ತಿದ್ದಾರೆ.

ಜಿಲ್ಲೆಯ ಕೆಲವು ಪ್ರಭಾವಿ ವ್ಯಕ್ತಿಗಳು, ಜನಪ್ರತಿನಿಧಿಗಳು ಮತ್ತು ಸಿಂಡಿಕೇಟ್ ಸದಸ್ಯರು ಕೂಡಾ ವಿಶ್ವವಿದ್ಯಾಲಯ ಜಮೀನು ಎನ್.ಓ.ಸಿಗೆ ಒತ್ತಾಯ ಮಾಡುತ್ತಿರುವುದು ತೀರಾ ನಾಚಿಗೇಡಿ ಭಿಷಯವಾಗಿದೆ. ವಿಶ್ವವಿದ್ಯಾಲಯದ ಶಿಕ್ಷಣದ ಗುಣಮಟ್ಟ ಮತ್ತು ಅಭಿವೃದ್ಧಿ ಪರವಾಗಿರಬೇಕು ಹೊರತಾಗಿ ವಿಶ್ವವಿದ್ಯಾಲಯದ ಆಸ್ತಿಗೆ ಕನ್ನ ಹಾಕುವ ಕೆಲಸ ಸಿಂಡಿ-ಕೇಟ್ ಸದಸ್ಯರು ಮಾಡಬಾರದು.

ವಿಶ್ವವಿದ್ಯಾಲಯ 800 ಎಕರೆ ಜಮೀನಿನಲ್ಲಿ ಈಗಾಗಲೇ 50 ಎಕರೆ ಇಎಸ್ಐ ಆಸ್ಪತ್ರೆಗೆ ಪಂಡಿತ ದೀನ ದಯಾಳ ಉಪಾಧ್ಯಾಯ ವಸತಿ ನಿಲಯ ಹಾಗೂ ಜಿ ಟಿ ಟಿ ಸಿಯ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರಕ್ಕೆ 20 ಎಕರೆ ಇವುಗಳಿಗೆ ಜಮೀನು ನೀಡಲಾಗುತ್ತಿದೆ

ಅಂತರಾಷ್ಟ್ರೀಯ ಕ್ರೀಕೇಟ್ ಮೈದಾನಕ್ಕೆ 70 ಎಕರೆ, ಸ್ಪೋರ್ಟ ಸಿಟಿ, ಮತ್ತು ಸ್ಪೋರ್ಟ ಹ" 50 ಎಕರೆ. ಕಲ್ಯಾಣ ಕರ್ನಾಟಕ ಮಾನವ ಅಭಿವೃದ್ಧಿ ಮಂಡಳಿ ಕೃಷಿ, ಸಾಂಸ್ಕೃತಿಕ ಸಂಘ ಹಾಗೂ ಇಂಜಿನೀಯರ್ ಕಾಲೇಜಿಗೆ 20 ಎಕರೆ, ಅಗ್ನಿ ಶಾಮಕ ಠಾಣೆ ಹಾಗೂ ವಿಜ್ಞಾನೇಶ್ವರ ಕಾನೂನಿನ ಕಾಲೇಜಿಗೆ ತಲಾ 15 ಎಕರೆ, ಗಾಂಧಿ ಭವನಕ್ಕೆ 10 ಎಕರೆ, ಪೊಲೀಸ್ ಠಾಣೆ, ತಾಯಿ ಮತ್ತು ಮಕ್ಕಳ ಆಸ್ಪತ್ರೆ, ವಚನ ಮಂಟಪ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯಗೆ ತಲಾ




5 ಎಕರೆ, ಜಿಲ್ಲಾ ಪಂಚಾಯತಿ ನಿರ್ಮಾಣಕ್ಕೆ, ಸ್ಯಾಟ್ ಲೈಟ್, ಬಸನಿಲ್ದಾಣಕ್ಕೆ, ಜಿಲ್ಲಾ'ಪಂಚಾಯತಿ ಕಛೇರಿ ನಿರ್ಮಾಣಕ್ಕೆ ಮತ್ತು ಹಿಂದೂಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ಹೀಗೆ ಎಲ್ಲಾ ಇಲಾಖೆಗೆ 250 ಎಕರೆಗೂ ಹೆಚ್ಚಿನ ಜಮೀನು ಕೊಡುವಂತೆ ಒತ್ತಡ ಹೇರುತ್ತಲಿದ್ದಾರೆ. ಸರಕಾರ ಇಂಥಹ ಒತ್ತಡಕ್ಕೆ ಮಣಿಯದೇ ವಿಶ್ವವಿದ್ಯಾಲಯ ಆಡಳಿತ ಮಂಡಳಿ ಮತ್ತು ಸಿಂಡಿ-ಕೇಟ್ ಸದಸ್ಯರು ಒಂದಿಂಚು ಜಾಗ ಸಹಿತ ಕೊಡಬಾರದು.

ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ದಲಿತ, ಹಿಂದೂಳಿದ ಮತ್ತು ಬಡವರ, ರೈತರ ಮಕ್ಕಳಾಗಿದ್ದಾರೆ. ದಲಿತ, ಹಿಂದೂಳಿದ. ಬಡರೈತರ ಮಕ್ಕಳು ಶರಣಬಸವೇಶ್ವರ ವಿಶ್ವವಿದ್ಯಾಲಯ ಮತ್ತು ಖಾಜಾ ಬಂದೇನವಾಜ ವಿಶ್ವವಿದ್ಯಾಲಯದಲ್ಲಿ ಲಕ್ಷಾನೂಗಟ್ಟಲೇ ಹಣ ಸುರಿದು ಓದಲಿಕ್ಕೆ ಆಗುವುದಿಲ್ಲ. ದಲಿತ, ಹಿಂದೂಳಿದ,ರೈತರ ಮಕ್ಕಳ ಉನ್ನತ ಶಿಕ್ಷಣ ಪಡೆಯಲು ವಂಚಿತರನ್ನಾಗಿ ಮಾಡಲು ಸಂಚು ರೂಪಿಸುವ ಹಾಗೆ ಕಾಣುತಿದೆ.ಸರಕಾರಕ್ಕೆ ವಿಶ್ವವಿದ್ಯಾಲಯಗಳ ಸಂಖ್ಯೆ ಹೆಚ್ಚಿಸುವುದರಲ್ಲಿ ಉತ್ಸಾಹವಿದೆಯೇ ಹೊರತು.ಇರುವ ವಿಶ್ವವಿದ್ಯಾಲಯಗಳು ಗುಣಮಟ್ಟ ಸುಧಾರಣೆಯ ಬಗ್ಗೆ ಹೆಚ್ಚಿನ ಆಸಕ್ತಿ ಇಲ್ಲ. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಖಾಯಂ ಸಿಬ್ಬಂದಿಯ ಕೊರತೆ ಎದುರಿಸುತ್ತಿದೆ.ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರು ಮತ್ತು ಅತಿಥಿ ಉಪನ್ಯಾಸಕರನ್ನು ನೆಚ್ಚಿ-ಕೊಂಡು ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ. ಕೆಲವು ವಿಶ್ವವಿದ್ಯಾಲಯಗಳಲ್ಲಿ ಕೆಲವು ವಿಭಾಗಗಳಲ್ಲಿ ಮುಖ್ಯಸ್ಥರೆ ಇಲ್ಲ. ಅತಿಥಿ ಉಪನ್ಯಾಸಕರಿಗೆ ವೇತನ ಹಾಗೂ ಸಂಶೋಧನಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲು ಆಗುತ್ತಿಲ್ಲ.

ವಿಶ್ವವಿದ್ಯಾಲಯಗಳಲ್ಲಿ ಸಂವಾದ ಮತ್ತು ಸಾಂಸ್ಕೃತಿಕವಾದ ವಿಚಾರ ಧಾರೆಗಳನ್ನು ರೂಪಿಸುವ ವಿಶ್ವವಿದ್ಯಾಲಯಗಳ ಪರಂಪರೆ ಇಂದು ಕಳೆದುಕೊಂಡಿವೆ. ಈಗ ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳು ಒಂದಿಲ್ಲೊಂದು ವಿವಾಧಗಳಿಂದ ಮತ್ತು ಭ್ರಷ್ಟಾಚಾರದ ಸುದ್ದಿಯಲ್ಲಿವೆ.

ಕಲಬುರಗಿಯಲ್ಲಿರುವ ಕೇಂದ್ರಿಯ ವಿಶ್ವವಿದ್ಯಾಲಯನ್ನೊಳಗೊಂಡು ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ, ಜಾತ್ಯಾತೀತ, ಸಾಮರಸ್ಯ, ಜ್ಞಾನದಾಹದ ಕೇಂದ್ರವಾಗಬೇಕಿದ್ದ ವಿಶ್ವವಿದ್ಯಾಲಯಗಳಲ್ಲಿ ಕೋಮುವಾದದ ವಿಷಬೀಜ ಬಿತ್ತುವ ವಿದ್ಯಾರ್ಥಿಗಳನ್ನು ಕೋಮುಗಲಭೆಗಳಿಗೆ ಪ್ರಚೋದಿಸುವ ಕೆಲಸ ನಡೆಯುತ್ತಿದೆ.

ಗುಲಬರ್ಗಾ ವಿಶ್ವವಿದ್ಯಾಲಯದ ಜಮೀನು ಸರಕಾರ ಬೇರೆ-ಬೇರೆ ಇಲಾಖೆಗಳಿಗೆ ವರ್ಗಾಯಿಸಬಾರದು. ಒಂದುವೇಳೆ ಜಮೀನು ನೀಡಿದರೆ ದೊಡ್ಡ ಪ್ರಮಾಣದ ಚಳುವಳಿ ರೂಪಿಸಬೇಕಾಗುತ್ತದೆ.ಒಂದುವೇಳೆ ಸರಕಾರವು ಹಾಗೂ ಗುಲ್ಬರ್ಗಾ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯು ವಿಶ್ವವಿದ್ಯಾಲಯದ ಭೂಮಿ ಕಬಳಿಸುವ ಕೆಲಸ ಕೈಬಿಡದೇ ಹೋದ ಪಕ್ಷದಲ್ಲಿ ಹಂತ-ಹಂತವಾದ ಉಗ್ರಹೋರಾಟವನ್ನು ಕೈಗೊಳ್ಳಲಾಗುವದು ಎಂದು ದಲಿತ ಸಂಘರ್ಷ ಸಮಿತಿ ತಮ್ಮ ಗಮನಕ್ಕೆ ತರಲಾಗಿದೆ. ಮರಿಯಪ್ಪನಹಳ್ಳಿಯವರು ತಿಳಿಸಿದರು. ಇದೇ ಸಂದರ್ಭದಲ್ಲಿ ಎಮ್.ಎಮ್.ಮೇತ್ರ ಜಿಲ್ಲಾ ಸಂಚಾಲಕರು ಕಲಬುರಗಿ ಜಯವಮಾರ ನೂಲಕರ್ ಸಂ. ಸಂಚಾಲಕರು ಕಲಬುರಗಿ ಸಂತೋಷ ತೆಗನೂರ ಸಂ. ಸಂಚಾಲಕರು ಕಲಬುರಗಿ, ಮರಿಯಪ್ಪ ಹಳ್ಳಿ ರಾಜ್ಯ ಸಂಘಟನಾ ಸಂಚಾಲಕರು ಬೆಂಗಳೂರು, ರಮೇಶ ಕವಡೆ ಜಿಲ್ಲಾ ಸಂಘಟನಾ ಸಂಚಾಲಕರು ಕಲಬುರಗಿ ಇದ್ದರು.

## ಇಂದು ಪ್ರತಿಷ್ಠಿತ ಖಾಸಗಿ ಶಾಲೆಗಳ ದಾಖಲಾತಿಗೆ ಪ್ರವೇಶ ಪರೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 07-ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ 2025-26ನೇ ಸಾಲಿಗೆ 5 ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ 6 ನೇ ತರಗತಿಗೆ ಪ್ರತಿಷ್ಠಿತ ಖಾಸಗಿ ಶಾಲೆಗಳ ಪ್ರವೇಶಾತಿಗೆ ಮೇ 09 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ರವರೆಗೆ ನಗರದ ಅಂಚೆ ಕಚೇರಿ ಪಕ್ಕದ ಸರ್ಕಾರಿ ಬಾಲಕೀಯರ ಜೂನಿಯರ್ ಕಾಲೇಜಿನಲ್ಲಿ ಅರ್ಹತಾ ಪ್ರವೇಶ ಪರೀಕ್ಷೆ ನಡೆಸಲಾಗುತ್ತದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಆಯಾ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಪ್ರವೇಶ ಪತ್ರ ಪಡೆದು, ಮೇ 09 ರಂದು ಬೆಳಿಗ್ಗೆ 10 ಗಂಟೆಗೆ ಪರೀಕ್ಷಾ ಕೇಂದ್ರದಲ್ಲಿ ಹಾಜರಿರಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ದೂ.08392-242453,ಮೊ.9986302091 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಂಪ್ಲಿ: ಸರ್ಕಾರಿ ಪಾಲಿಟೆಕ್ನಿಕ್ ಡಿಪ್ಲೋಮಾ ಪ್ರಥಮ ವರ್ಷ

## ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 07:ಕಂಪ್ಲಿ ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ನಲ್ಲಿ 2025-26ನೇ ಸಾಲಿಗೆ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸ್ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಸರ್ಕಾರಿ ಪಾಲಿಟೆಕ್ನಿಕ್ ನ ಪ್ರಾಚಾರ್ಯ ಠಾಕ್ರಾ ನಾಯ್ಕ ಅವರು ತಿಳಿಸಿದ್ದಾರೆ. ಕಂಪ್ಯೂಟರ್ ಸೈನ್ಸ್, ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ಸ್, ಮೆಕ್ಯಾನಿಕಲ್ ಮತ್ತು ಸಿವಿಲ್ ಕೋರ್ಸ್‌ಗಳು ಲಭ್ಯವಿದ್ದು, ಮೆರಿಟ್ ಆಧಾರದ ಮೇಲೆ ಆಫ್ ಲೈನ್ ಮೂಲಕ ಸೀಟು ಹಂಚಿಕೆ ಮಾಡಲಾಗುತ್ತದೆ.

ಪ್ರವೇಶ ಪ್ರಕ್ರಿಯೆಯು ಮೇ 11 ರಿಂದ 27 ರ ವರೆಗೆ ನಡೆಯಲಿದೆ. ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.ಹೆಚ್ಚಿನ ಮಾಹಿತಿಗಾಗಿ ಕಂಪ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರ ಕಚೇರಿ ಅಥವಾ ದೂ.08394-250455, ಮೊ.9845181482,9686412428, 9482994340,9606350770, 9731979865,9739147452 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಪಿಎಫ್‌ಓ: ಮೇ 13 ರಂದು ಪಿಂಚಣಿ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 07-ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಮೇ 13 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವೆಂಕಟ ಸುಬ್ಬಯ್ಯ ಅವರು ತಿಳಿಸಿದ್ದಾರೆ.

ಬಳ್ಳಾರಿ,ವಿಜಯನಗರ,ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇ-ರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ-ಮೇಲ್ ಮೂಲಕ ಪಿ.ಪಿ.ಒ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಮೇ 09 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392-268943 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೃತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 07-ಸಿರುಗುಪ್ಪ ಪೊಲೀಸ್ ಠಾಣೆ ವ್ಯಾಪ್ತಿಯ ಬಂಡ್ರಾಳ್ ಗ್ರಾಮದ ಜಮೀನಿನೊಂದರ ಕೃಷಿ ಹೊಂಡದಲ್ಲಿ ಸಾಗರ್ ಎನ್ನುವ 25 ವರ್ಷದ ವ್ಯಕ್ತಿಯು ಸ್ನಾನ ಮಾಡಲು ಹೋಗಿ ಆಕಸ್ಮಿಕವಾಗಿ ಕಾಲು ಜಾರಿ ನೀರಿಗೆ ಬಿದ್ದು, ಈಜು ಬಾರದೇ ಏ.27 ರಂದು ಮೃತಪಟ್ಟಿದ್ದು, ಮೃತ ದೇಹವನ್ನು ಬಿಮ್ಸ್ ನ ಶೀಥಲೀಕೃತ ಶವಗಾರ ಕೋಣೆಯಲ್ಲಿರಿಸಲಾಗಿದೆ. ಮೃತನ ವಾರಸುದಾರರ ಬಗ್ಗೆ ತಿಳಿದಿರುವುದಿಲ್ಲ. ಪತೆ-ಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು: ಎತ್ತರ 5.4 ಅಡಿ, ದುಂಡು ಮುಖ, ಸಾಧಾರಣ ತೆಳ್ಳನೇಯ ಮೈಕಟ್ಟು, ಗೋಧಿ ಮೈಬಣ್ಣ ಹೊಂದಿದ್ದು, ಬಲ ಕಣ್ಣು ಮೆಳ್ಳಗಣ್ಣು ಇದ್ದು, ಬಲಗೈ ಭುಜದ ಬಳಿ ಒಂದು ಚಿಕ್ಕ ಕಪ್ಪು ಮಚ್ಚೆ ಇರುತ್ತದೆ. ಬಲಗೈ ಪಾದದ ಮೇಲೆ ಹಳೆ ಗಾಯದ ಗುರುತು ಇರುತ್ತದೆ.

ಬಲಗೈ ಮೇಲೆ ಹಳದಿ ಬಣ್ಣದ ಸಂಗೊಳ್ಳಿ ರಾಯಣ್ಣ ಹೆಸರು ಇರುವ ರಬ್ಬರ್ ಬ್ಯಾಂಡ್, ಸ್ಟೀಲ್ ಕಡುಗ ಧರಿಸಿರುತ್ತಾನೆ. ಸಿಮೆಂಟ್ ಬಣ್ಣದ ಪ್ಯಾಂಟ್ ಮತ್ತು ಕೆಂಪು ಬಣ್ಣದ ಒಳಉಡುಪು ಧರಿಸಿರುತ್ತಾನೆ. ವ್ಯಕ್ತಿಯು ಕನ್ನಡ, ಹಿಂದಿ ಭಾಷೆ ಮಾತನಾಡುತ್ತಾನೆ.

ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಇದ್ದಲ್ಲಿ ಸಿರುಗುಪ್ಪ ಪೊಲೀಸ್ ಠಾಣೆಯ ಪಿಎಸ್‌ಐ ದೂ.08396-220333, ಮೊ.9480803053, ಸಿಪಿಐ ದೂ.08396-220003, ಮೊ.9480803032, ಬಳ್ಳಾರಿ ಗ್ರಾಮೀಣ ಉಪವಿಭಾಗ ಡಿಎಸ್‌ಪಿ ದೂ.08392-276000,ಮೊ.9480803021 ಅಥವಾ ಬಳ್ಳಾರಿ ಎಸ್‌ಪಿ ಕಚೇರಿ ದೂ.08392-258400 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಮಗ್ರಿ ಕಳವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.6-ನಗರದ ಕಾಟನ್ ಮಾರ್ಕೆಟ್‌ನಲ್ಲಿರುವ ಸ್ಯಾನಿಟರಿ ಗೋದಾಮ ಅಂಗಡಿಯ ಸೆಟರ್ ಮೇಲಕ್ಕೆ ಎತ್ತಿ ಗೋದಾಮಿನಲ್ಲಿ ವ್ಯಾಪಾರಕ್ಕಾಗಿ ಸಂಗ್ರಹಿಸಿ ಇಟ್ಟ 324476 ರೂ.ಮೌಲ್ಯದ ಸ್ಯಾನಿಟರಿ ಸಾಮಾನುಗಳನ್ನು ಕಳವು ಮಾಡಿಕೊಂಡು ಹೋಗಿರುವ ಘಟನೆ ನಡೆದಿದೆ. ಕಮಲಕಿಶೋರ ಮನಿಯಾರ ಎಂಬುವವರಿಗೆ ಸೇರಿದ ಸ್ಯಾನಿಟರಿ ಗೋದಾಮ ಅಂಗಡಿಯೇ ಕಳವಾಗಿದ್ದು, ಅವರು ಈ ಸಂಬಂಧ ಚೌಕ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

## ರೈಲ್ವೆ ಗೇಟ್ 63 ಕಾಮಗಾರಿ ವಿಳಂಬವಾದರೆ ಪ್ರತಿಭಟನೆ : ಬಸವರಾಜ ಬನ್ನಿಕೊಪ್ಪ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದ ಸ್ವಾಮಿ ವಿವೇಕಾನಂದ ಶಾಲೆ ಹತ್ತಿರ ಇರುವ ರೈಲ್ವೆ ಗೇಟ್ ಎಲ್ ಸಿ-63ರ ಕೆಳಸೇತುವೆ ಕಾಮಗಾರಿ ಅನಗತ್ಯವಾಗಿ ವಿಳಂಬ ಮಾಡಿದರೆ ಅನಿರ್ದಿಷ್ಟಾವಧಿ ಧರಣಿ ಕೈಗೊಳ್ಳುವುದು ಅನಿವಾರ್ಯವಾಗುತ್ತದೆ ಎಂದು ರೈಲ್ವೆಗೇಟ್ ನಂ. 63 ಹೋರಾಟ ಸಮಿತಿ ಅಧ್ಯಕ್ಷ ಬಸವರಾಜ್ ಬನ್ನಿಕೊಪ್ಪ ಹೇಳಿದರು.

ಅವರು ಬುಧವಾರದಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ, ಉದ್ದೇಶಿಸಿ ಮಾತನಾಡಿ 2017 ರಿಂದ 2025 ರವರೆಗೆ ಅಂದರೆ ಸುಮಾರು 8 ವರ್ಷಗಳಿಂದ ಪ್ರಾರಂಭವಾದ ಸಾರ್ವಜನಿಕರಿಗೆ ಅತ್ಯವಶ್ಯಕವಾದ ಕಾಮಗಾರಿ ವಿವಿಧ ಹಂತಗಳಿಂದ ಸುಧೀರ್ಘವಾಗಿ ನಡೆದು ಬಂದಿದೆ,ಆದರೆ ಕಾಮಗಾರಿ ಇವತ್ತಿನವರೆಗೂ ಪೂರ್ಣಗೊಂಡಿರುವುದಿಲ್ಲ, ಪರಿಹಾರದ ಮೊತ್ತ ಹಣ ಸಂಬಂಧಿಸಿದವರಿಗೆ ವಿತರಣೆಯಾಗಿಲ್ಲ, ಕೆಳಸೇತುವೆಯ ಎರಡೂ ಬದಿಗೆ ರಸ್ತೆಗಳು ನಿರ್ಮಾಣವಾಗದೆ ಆರ್ ಸಿ ಸಿ ಬಾಕ್ಸ್ ಗಳಿಗೆ ಎರಡು ಬದಿಗೆ ತಡೆಗೋಡೆ ನಿರ್ಮಿಸಿ ಬಂದ್ ಮಾಡಲಾಗಿರುತ್ತದೆ. ಇಷ್ಟೆಲ್ಲ ದೊಡ್ಡ ಪ್ರಮಾಣದ ಕಾಮಗಾರಿ ಕೈಗೊಂಡು ಪೂರ್ಣಗೊಳ್ಳದಿದ್ದರೂ,ಸಂಬಂಧಿಸಿದ ಜನಪ್ರತಿನಿಧಿಗಳು,ಅಧಿಕಾರಿಗಳು, ಇಲಾಖೆಯವರೂ ಇತ್ತ ಕಡೆ ಗಮನಹರಿಸದೆ ಇರುವುದರಿಂದ ಈ ಭಾಗದ ಜನಸಾಮಾನ್ಯರಿಗೆ, ಹಾಸ್ಟೆಲ್ ವಿದ್ಯಾರ್ಥಿಗಳಿಗೆ,ಶಾಲಾ ವಿದ್ಯಾರ್ಥಿಗಳಿಗೆ, ಅಂಬುಲೆನ್ಸ್ ವಾಹನ,ಆಟೋಗಳು ಮುಖ್ಯವಾಗಿ ಆಸ್ಪತ್ರೆಗೆ,ಶವಸಂಸ್ಕಾರದ ವಾಹನಕ್ಕೆ ಸರಿಯಾಗಿ ರಸ್ತೆ ಇಲ್ಲದಿರುವುದರಿಂದ ಗಣೇಶನಗರ, ಮಹಲಕ್ಷ್ಮೀ ಬಡಾವಣೆ, ಚನ್ನಬಸವನಗರ, ಭಾಗ್ಯನಗರದ ನಿವಾಸಿಗಳು, ವಯೋವೃದ್ಧರಿಗೆ ಕೊಪ್ಪಳ ನಗರಕ್ಕೆ ಬಂದು ಹೋಗಲು ತುಂಬಾ ಕಷ್ಟಪಡುತ್ತಿದ್ದೇವೆ,ಒಂದು ವೇಳೆ ಸಂಬಂಧಿಸಿದವರು ಕಾಮಗಾರಿಯನ್ನು ಅನಗತ್ಯವಾಗಿ ವಿಳಂಬ ಮಾಡಿದರೆ, ಪ್ರತಿಭಟನೆಗೆ ಪ್ರಚೋದಿಸಿದಂತಾಗಿ ಅನಿರ್ಧಿಷ್ಟವಾಗಿ ಧರಣಿಯನ್ನು ಕೈಗೊಳ್ಳುವ ಅನಿವಾರ್ಯತೆ ಉಂಟಾಗುತ್ತದೆ. ಆದುದರಿಂದ ಈ ಭಾಗದ ಜನರು ಕೈಗೊಳ್ಳುವ ಧರಣಿ,ಪ್ರತಿಭಟನೆಗೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳು, ಜನಪ್ರತಿನಿಧಿಗಳು, ಶಾಸಕರು, ಸಂಸದರು, ಸಚಿವರೇ ನೇರ ಹೊಣೆಗಾರರಾಗುತ್ತಾರೆ ಎಂದರು.


ಸುದ್ದಿಗೋಷ್ಠಿಯಲ್ಲಿ ಹೋರಾಟ ಸಮಿತಿಯ ಉಪಾಧ್ಯಕ್ಷ ಸಕ್ರಪ್ಪ ಹೊಸಬಾವಿ, ಸೋಮನಗೌಡ ಪಾಟೀಲ್, ರೋಷನಲಿ ಮಂಗಳೂರು, ದುರ್ಗೇಶಪ್ಪ ಹುರಿಗೆಜ್ಜೆ, ಶಿವಕುಮಾರ್ ಕೊಟ್ಟೂರುಮಠ,ಚಂದ್ರಶೇಖರ್ ವಸ್ತ್ರದ,ಪ್ರದೀಪ್ ಸಿಂಗಟಾಲೂರು ಉಪಸ್ಥಿತರಿದ್ದರು.

## ಪತ್ರಕರ್ತರ ಹಬ್ಬ ಯಶಸ್ವಿಗೊಳಿಸಿ ಮಲ್ಲಿಕಾರ್ಜುನ ಬಂಗ್ಲೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಇದೇ ತಿಂಗಳು 24 ರಂದು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಿರುವ ರಾಜ್ಯಮಟ್ಟದ ಪತ್ರಕರ್ತರ ಹಬ್ಬವಾದ ಕಾರ್ಯನಿರತ ಪತ್ರಕರ್ತರ ಧ್ವನಿ ಮೂರನೇ ರಾಜ್ಯಮಟ್ಟದ ಸಮ್ಮೇಳನ ಸಮಾರಂಭವನ್ನು ಯಶಸ್ವಿಗೊಳಿಸಿ ಎಂದು ಸಂಸ್ಥಾಪಕ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಬಂಗ್ಲೆ ಕರೆ ನೀಡಿದರು.

ಜಿಲ್ಲೆಯ ಕುಕನೂರು ತಾಲೂಕಿನ ಭಾನಾಪುರ ಗ್ರಾಮದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಬಂಗ್ಲೆ ಮಾತನಾಡುತ್ತಾ ದಿನನಿತ್ಯ ಹಲವಾರು ರೀತಿಯ ಸುದ್ದಿಗಳ ಬೆನ್ನು ಹತ್ತಿ ಸಾರ್ವಜನಿಕರಿಗೆ ಸಮಾಜದಲ್ಲಿ ನಡೆಯುತ್ತಿರುವ ಆಗುಹೋಗುಗಳ ಬಗ್ಗೆ ನಿಖರ ಮಾಹಿತಿ ನೀಡುವಲ್ಲಿ ಸದಾ ತಲ್ಲಿನರಾಗಿರುವ ಪತ್ರಕರ್ತರಿಗೆ ಒಂದು ದಿನದ ಮಟ್ಟಿಗೆ ಆದರೂ ಸಂಭ್ರಮದ ವಾತಾವರಣ ನಿರ್ಮಿಸುವ ಉದ್ದೇಶದಿಂದ ರಾಜ್ಯಮಟ್ಟದ ಹಬ್ಬವನ್ನು ಆಯೋಜಿಸಿದ್ದು. ಈ ಕಾರ್ಯನಿರತ ಪತ್ರಕರ್ತರ ಧ್ವನಿ



ರಾಜ್ಯ ಮಟ್ಟದ ಮೂರನೆಯ ಸಮ್ಮೇಳನವನ್ನು ಬೆಂಗಳೂರು ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ 24-5-2025ರ ಶನಿವಾರ ಆಯೋಜನೆ ಮಾಡಲಾಗಿದ್ದು ಈ ಅರ್ಥಪೂರ್ಣ ಕಾರ್ಯಕ್ರಮದಲ್ಲಿ ಆನಂದ ಗುರೂಜಿಗಳು, ನಿವೃತ್ತ ನ್ಯಾಯಾಧೀಶ ಸಂತೋಷ ಹೆಗಡೆ ಸೇರಿದಂತೆ ವಿವಿಧ ಮಠಾಧೀಶರು, ಸಾಹಿತಿಗಳು, ಚಿಂತಕರು, ಹಿರಿಯ ಬರಹಗಾರರು, ರಾಜಕೀಯ ಮುಖಂಡರು, ಚಲನಚಿತ್ರನಟರು ಸೇರಿದಂತೆ ಅನೇಕ ಕಲಾತಂಡಗಳು ಭಾಗವಹಿಸಲಿದ್ದು ಇಂತಹ ಅಪರೂಪದ ಕಾರ್ಯಕ್ರಮದಲ್ಲಿ ರಾಜ್ಯದ ಎಲ್ಲಾ ಪತ್ರಕರ್ತ ಮಿತ್ರರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಈ ವೇಳೆಯಲ್ಲಿ ಕಾರ್ಯನಿರತ ಪತ್ರಕರ್ತರ ಧ್ವನಿ ಕುಕನೂರು ಘಟಕದ ಗೌರವಾಧ್ಯಕ್ಷ ಮಹೇಶ ಕಲ್ಮಠ ಮಾತನಾಡುತ್ತಾ ರಾಜ್ಯದ ಸಮಸ್ತ ಪತ್ರಕರ್ತರ ಒಳತಿಗಾಗಿ ಮಲ್ಲಿಕಾರ್ಜುನರವರು ಹಗಲಿರುಳು ಶ್ರಮಿಸುತ್ತಿದ್ದು ಇವರಿಂದ ಮಾತ್ರ ವರದಿಗಾರರ ಶ್ರೆಯೋಭಿವೃದ್ಧಿ ಸಾಧ್ಯ ಆದ್ದರಿಂದ ಎಲ್ಲರೂ ಅವರ ಕೈ ಬಲಪಡಿಸಲು ಮುಂದಾಗೋಣ ಎಂದು ತಿಳಿಸಿದರು.

ಈ ವೇಳೆಯಲ್ಲಿ ಕೊಪ್ಪಳ ಕಾರ್ಯನಿರತ ಪತ್ರಕರ್ತ ಧ್ವನಿ ಸಂಘಟನೆಯ ಜಿಲ್ಲಾಧ್ಯಕ್ಷ ಗಿರೀಶ ಹಿರೇಮಠ, ಮುತ್ತು ದೊಡ್ಮನಿ, ಎಸ್ ಹೆಚ್ ಮುಧೋಳ್, ಸುನಿಲಕುಮಾರ ಮಠದ, ವೀರಯ್ಯ ವಿ ಹಿರೇಮಠ, ಚಂದ್ರು ಭಾನಾಪುರ, ಎಂ.ಡಿ ಅಲಿ, ಅಬ್ದುಲ್ ವಾಹಿದ್, ವೀರಯ್ಯ ಕುರ್ತುಕೋಟಿ , ಮಲ್ಲಯ್ಯ ಗದಗಿನ, ಕೋಟೇಶ್ವರ ಮುಂದಲಮನಿ, ಮುತ್ತಯ್ಯ ತೋಟದಾರ್ಯಮಠ, ಹುಸೇನ್ಸಾಬ್ ಮೋತೆಖಾನ್, ಎಂ.ಡಿ ಗೌಸ್ ಹಾಗೂ ಇನ್ನಿತರ ಪತ್ರಕರ್ತರು ಪಾಲ್ಗೊಂಡಿದ್ದರು.

## ನ್ಯಾಷನಲ್ ಎಮರ್ಜೆನ್ಸಿ ಮ್ಯಾನೇಮೆಂಟ್ ಕೇರ್ ಅವಾರ್ಡ್ ಶಾಂತರಾಜ್ ಹಾಗು ರಮೇಶ್ ಪ್ರಶಸ್ತಿ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲೆಯ ಜಿಲ್ಲಾ ಆಸ್ಪತ್ರೆ ಲೊಕೇಶನ್ 108 ಆಂಬುಲೆನ್ಸ್ ಸಿಬ್ಬಂದಿಗಳಾದ ಡ್ರೈವರ (ಪೈಲೇಟ್) ರಮೇಶ್ ಮತ್ತೆ ಎಮರ್ಜೆನ್ಸಿ ಮೆಡಿಕಲ್ ಟೆಕೆನಿಷಿಯನ್ ಶಾಂತರಾಜ್ ಅವರು ನಾಲವಾರ ರೈಲ್ವೆ ಸ್ಟೇಷನ್ ನಲ್ಲಿ ಎಲೆಕ್ಟ್ರಿಕಲ್ ಬರ್ನ್ ಕೇಸ್ ಅಟೆಂಡ್ ಮಾಡಿ ಒಂದು ಜೀವ ಉಳಿಸಿದ್ದಾರೆ, ಆ ಕೇಸ್ ಗೆ ಈ ಎಂ ಆರ್ ಐ ಗ್ರೀನ್ ಹೆಲ್ತ್ ಸರ್ವಿಸ್ ಅವರು ಇವರನ್ನು ನ್ಯಾಷನಲ್ ಎಮರ್ಜೆನ್ಸಿ ಮ್ಯಾನೇಮೆಂಟ್ ಕೇರ್ ಆಯ್ಕೆ ಮಾಡಿದ್ದಾರೆ.



ಅವರು ಎಂಥ ಉತ್ತಮ ಕಾರ್ಯಗಳಿಗೆ ಯಾವಾಗಲೂ 24*7 ನಮ್ಮ ಜೀವನವನ್ನೇ ಮುಡುಪಾಗಿದ್ದು ಪ್ರಾಣವನ್ನು ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಅದೇ ರೀತಿಯಾಗಿ ಎಲ್ಲ ನಮ್ಮ ಸಿಬ್ಬಂದಿಯವರು ಇದೇ ರೀತಿಯಿಂದ ಕೆಲಸ ಮಾಡಿ ಜನರಿಗೆ ಉತ್ತಮ ಸೇವೆಗೆ ಅವರನ್ನು ಹೈದ್ರಾಬಾದ್ ಹೆಡ್ ಆಫೀಸ್ ಗೆ ಕರೆಸಿ ಅವರಿಗೆ ಸನ್ಮಾನಿಸಿ, ನ್ಯಾಷನಲ್ ಎಮರ್ಜೆನ್ಸಿ ಮ್ಯಾನೇಮೆಂಟ್ ಕೇರ್ ಅವಾರ್ಡ್ ನೀಡಿದ್ದಾರೆ, ಈ ಪ್ರಶಸ್ತಿ ಪಡೆದ ಇಬ್ಬರು ಸಿಬ್ಬಂದಿಗೆ ಹಣಮಂತಪ್ಪ ಸರ್. ಆರ್ ಎಂ ನಾಸಿರ್ ಹುಸೇನ್ ಸರ್ ಮತ್ತೆ ಜಿಲ್ಲಾ ವ್ಯವಸ್ಥಾಪಕರಾದ ರಾಘವೇಂದ್ರ ಇವರು ಅಭಿನಂದನೆ ಕೋರಿ ಪ್ರೋತ್ಸಾಹಿಸಿದ್ದಾರೆ,

## ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ





ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.7–ಜಿಲ್ಲೆಯ ವ್ಯಾಪ್ತಿಯಲ್ಲಿಬರುವ5ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಎಸ್.ಎಸ್.ಎಲ್.ಸಿ ಫಲಿತಾಂಶ ಶೇ.94.82 ರಷ್ಟಾಗಿದ್ದು, ವಿದ್ಯಾರ್ಥಿಗಳು ಉತ್ತಮ ಅಂಕ ಪಡೆಯುವ ಮೂಲಕ ಉತ್ತಮ ಸಾಧನೆ ಮಾಡಿದ್ದಾರೆ.

ಜಮಖಂಡಿ ವಸತಿ ಶಾಲೆಯ ವಿದ್ಯಾರ್ಥಿ ಶ್ರೇಯಾ ರಮೇಶ ರಕರಡ್ಡಿ 625ಕ್ಕೆ 603 (ಶೇ.96.48) ಅಂಕ ಪಡೆಯುವ ಮೂಲಕ ಪ್ರಥಮ ಸ್ಥಾನ ಪಡೆದರೆ, ತೇರದಾಳ ವಸತಿ ಶಾಲೆಯ ವಿದ್ಯಾರ್ಥಿ ರಾಕೇಶ ಹೊನ್ನಪ್ಪ ಜಿಡ್ಡಿಮನಿ 625ಕ್ಕೆ 601 (ಶೇ.96.16) ಅಂಕ ಪಡೆದು ದ್ವಿತೀಯ, ಜಮಖಂಡಿ ವಸತಿ ಶಾಲೆಯ ಅಶೋಕ ನಿತ್ಯಾನಂದ ವಾಲಿಕಾರ 625ಕ್ಕೆ599 (ಶೇ.95.84) ಅಂಕ ಪಡೆದು ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ. ಗುಡೂರ ಅಲ್ಪಸಂಖ್ಯಾತರ ಮೊರಾರ್ಜಿ ವಸತಿ ಶಾಲೆಯ ಫಲಿತಾಂಶ ಶೇ.100 ರಷ್ಟು ಆಗಿದೆ. ಉತ್ತಮ ಫಲಿತಾಂಶ ಪಡೆದುಕೊಂಡ ವಿದ್ಯಾರ್ಥಿಗಳಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಶಿವಾನಂದ ಪಟ್ಟಣಶೆಟ್ಟಿ ಅಭಿನಂದನೆ ಸಲ್ಲಿಸಿದ್ದಾರೆ.

## ಅಚನೂರ ಪ್ರೌಢಶಾಲೆಗೆ ನೇತ್ರಾ ಪ್ರಥಮ





ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.7–ತಾಲೂಕಿನ ಅಚನೂರ ಸರಕಾರಿ ಪ್ರೌಢಶಾಲೆಯ ಎಸ್.ಎಸ್.ಎಲ್.ಸಿ ಫಲಿತಾಂಶ ಶೇ.83.33 ರಷ್ಟಾಗಿದ್ದು, ಶಾಲೆಯ ವಿದ್ಯಾರ್ಥಿನಿ ನೇತ್ರಾ ಪೂಜಾರಿ ಶೇ.95.04 ಅಂಕ ಗಳಿಸಿ ಶಾಲೆಗೆ ಪ್ರಥಮಳಾಗಿದ್ದಾಳೆ. ರೇಷ್ಮಾ ಕಳಸಪ್ಪನವರ ಶೇ.89.92 ಅಂಕ ಪಡೆದು ದ್ವಿತೀಯ ಹಾಗೂ ಲಕ್ಷ್ಮೀ ಪಾಟೀಲ ಶೇ.89.28 ಅಂಕ ಗಳಿಸಿ ತೃತೀಯ ಸ್ಥಾನ ಪಡೆದಿದ್ದಾರೆ.

ಶಾಲೆಯ 48 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಅವರಲ್ಲಿ 5 ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ಪ್ರಥಮ ದರ್ಜೆ, 23 ವಿದ್ಯಾರ್ಥಿಗಳು ಪ್ರಥಮ ದರ್ಜೆ, 11 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಹಾಗೂ ಓರ್ವ ವಿದ್ಯಾರ್ಥಿ ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ ಎಂದು ಶಾಲೆಯ ಮುಖ್ಯಶಿಕ್ಷಕ ಜಿ.ಎಸ್.ಪಾಟೀಲ ತಿಳಿಸಿದ್ದಾರೆ.

## 15 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು: ಸೊಸೆ ವಿರುದ್ಧ ಮಾವ ದೂರು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.7–ಬೇರೆ ಚಾವಿ ಬಳಸಿ ಮನೆಯ ಅಲಮಾರಾದಲ್ಲಿದ್ದ 15 ಲಕ್ಷ ರೂಪಾಯಿ ಬೆಲೆ ಬಾಳುವ ಬೆಳ್ಳಿ, ಬಂಗಾರ ಮತ್ತು ದುಬಾರಿ ವಸ್ತುಗಳನ್ನು ಸಣ್ಣ ಸೊಸೆ ಕಳ್ಳತನ ಮಾಡಿದ್ದಾಳೆ ಎಂದು ಮಾವ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.




ನಗರದ ಅಹಮದಿ ಮಂಜಿಲ್ ನಿವಾಸಿ ಸೈಯದ್ ಮಂಜೂರ್ ಉಲ್ ಹಸನ್ ಎಂಬುವವರೆ ಈ ಬಗ್ಗೆ ರೋಜಾ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ಸಣ್ಣ ಸೊಸೆಯಾದ ಸಪೂರಾ ಬೇಗಂ, ಅವರ ತಂದೆ ಅಬ್ದುಲ್ ಖಾದರ್ ಫತೇಖಾನಿ ಮತ್ತು ಅವರ ಅತ್ತೆ ಮುನೀರಾ ಬೇಗಂ ಅವರು ಮನೆಗೆ ಬಂದು ಸಂಸಾರದ ಬಗ್ಗೆ ಮಾತನಾಡುವ ನೆಪದಲ್ಲಿ ಬೇರೆ ಯಾವುದೋ ಚಾವಿ ಬಳಸಿ ಅಲಮಾರದಲ್ಲಿದ್ದ 15 ಲಕ್ಷ ರೂಪಾಯಿ ಬೆಲೆ ಬಾಳುವ ಬೆಳ್ಳಿ ಮತ್ತು ಬಂಗಾರದ ಆಭರಣ ಮತ್ತಗು ದುಬಾರಿ ವಸ್ತುಗಳನ್ನು ಕಳ್ಳತನ ಮಾಡಿಕೊಂಡು ಹೋಗಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ಈ ಸಂಬಂಧ ರೋಜಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಮೇ.12 ರಂದು ಭಗವಾನ ಬುದ್ಧರ ಜಯಂತಿಯನ್ನು ವಿಜೃಂಭಣೆಯಿಂದ ಆಚರಣೆ : ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ



ಕಲಬುರಗಿ:ಸರ್ಕಾರದ ಆದೇಶದಂತೆ ಪ್ರಥಮವಾಗಿ ಭಗವಾನ ಬುದ್ಧರ ಜಯಂತಿಯನ್ನು ಆಚರಣೆಯನ್ನು ವಿಜೃಂಭಣೆಯಿಂದ ಆಚರಿಸಲಾಗುವುದು ಅಪರ ಜಿಲ್ಲಾಧಿಕಾರಿಗಳಾದ ರಾಯಪ್ಪ ಹುಣಸಗಿಯವರು ಸಂಬಂದಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದರು.

ಅವರು ಮಂಗಳವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಗವಾನ ಬುದ್ಧರ ಜಯಂತಿಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಾಂತಿಯ ಸಂಕೇತವಾದ ಭಗವಾನ ಬುದ್ಧರ ತತ್ವ ಮತ್ತು ಸಂದೇಶಗಳು ಸಮಾಜದಲ್ಲಿನ ಪ್ರತಿಯೊಬ್ಬ ವ್ಯಕ್ತಿಗಳಿಗೆ ತಲುಪಲಿ ಎಂಬ ಉದ್ದೇಶದಿಂದ ಸರ್ಕಾರವು ಭಗವಾನ ಬುದ್ದರ ಜಯಂತಿಯನ್ನು ಆಚರಣೆಯನ್ನು ಮಾಡುತ್ತಿದ್ದು ಎಂದು ಅವರು ಹೇಳಿದರು.

12ರಂದು ರಂದು ಬೆಳಿಗ್ಗೆ 09 ಗಂಟೆಗೆ ಜಗತ್ ವೃತ್ತದಲ್ಲಿರುವ ಡಾ.ಬಿ.ಆರ್ ಅಂಬೇಡ್ಕರವರ ಪ್ರತಿಮೆ ಎದುರಗಡೆ ಇರುವ ಭಗವಾನ ಬುದ್ದರ ಜಾಗದಲ್ಲಿ ಭಗವಾನ ಬುದ್ಧರ ಜಯಂತಿಯನ್ನು ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಯವರು ಹೇಳಿದರು.

ಇಂತಹ ಮಹಾನ್ ವ್ಯಕ್ತಿಗಳ ಜಯಂತಿಯನ್ನು ಆಚರಣೆಯನ್ನು ಮಾಡಲು ಎಲ್ಲರು ಪರಸ್ಪರ ಸಹಾಯ ಮತ್ತು ಸಹಕಾರವನ್ನು ನೀಡುವುದರ ಮುಖಾಂತರ ಜಯಂತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಎಂದರು.

ಸಮಾಜದ ಮುಖಂಡರು ಭಗವಾನ ಮಹಾವೀರರ ಜಯಂತಿಯನ್ನು ಬೌದ್ಧ ಧರ್ಮದ ಪದ್ಧತಿಯಂತೆ ಬುದ್ಧರ ಭಾವಚಿತ್ರದ ಎದುರು ಮೂರು ಮೇಣದ ಬತ್ತಿಗಳನ್ನು ಬೆಳಗಿಸುವುದು, ಮೂರು ಉದಿನ ಕಡ್ಡಿಗಳನ್ನು ಹೊತ್ತಿಸುವುದು. ಇತ–ರೆ ಐದು ನಮೂನೆಯ ಸಿಹಿ ಹಣ್ಣುಗಳನ್ನಿಡುವುದು ಎರಡು ಕೈಗಳನ್ನು ಮುಗಿದು ವಂದಿಸುವುದು. ಪಂಚಶೀಲಗಳನ್ನು ಸಾಮೂಹಿಕವಾಗಿ ಪಠಣವನ್ನು ಮಾಡುವುದು. ಭಂತೇಜಿಗಳ ನೇತೃತ್ವದಲ್ಲಿ ಬೌದ್ಧ ಧರ್ಮದ ಪದ್ದತಿಯನ್ನು ಅನುಸರಿಸಿ ಜಯಂತಿಯನ್ನು ಆಚರಣೆಯನ್ನು ಮಾಡಲು ಮತ್ತು ಕಡ್ಡಾಯವಾಗಿ ಸಂಬಂದಪಟ್ಟ ಇಲಾಖೆಗಳಿಗೆ ಕಡ್ಡಾಯವಾಗಿ ನಿರ್ದೇಶನವನ್ನು ನೀಡಬೇಕೆಂದು ಸಮಾಜದ ಮುಖಂಡರು ಅಪಾರ ಜಿಲ್ಲಾಧಿಕಾರಿಯವರಿಗೆ ಮನವಿಪತ್ರವನ್ನು ನೀಡಿದರು.

ಸಮಾಜ ಮುಖಂಡರಾದ ಮಾತನಾಡಿ, ಎಲ್ಲ ಸರಕಾರಿ ಅರೆಸರಕಾರಿ ಕಚೇರಿಗಳಲ್ಲಿ ಬೆಳಿಗ್ಗೆ 9 ಗಂಟೆಗೆ ಆಚರಿಸಬೇಕು ಭೌದ ಧರ್ಮದ ಪದ್ಧತಿಯ ಪ್ರಕಾರ ಮತ್ತು ಸರಕಾರಿ ಶಾಲಾ ಕಾಲೇಜುಗಳಲ್ಲಿ ಹಾಗೂ ಅನುದಾನ ಶಾಲಾ ಕಾಲೇಜುಗಳಲ್ಲಿ, ಗ್ರಾಮ ಪಂಚಾಯತ ತಾಲ್ಲೂಕ ಮತ್ತು ಜಿಲ್ಲಾಪಂಚಾಯತಗಳಲ್ಲಿ ಕಡ್ಡಾಯವಾಗಿ ಜಯಂತಿಯನ್ನು ಆಚರಿಸಲು ತಿಳಿಸಿದರು.

ಮಹಾನಗರಪಾಲಿಕೆಯ ಆಯುಕ್ತರಾದ ಅವಿನಾಶ ಶಿಂಧೆ ಮಾತನಾಡಿ, ಪ್ರತಿಯೊಬ್ಬರ ಸಹಾಯ ಮತ್ತು ಸಹಕಾರದಿಂದ ಜಯಂತಿ ಕಾರ್ಯಕ್ರಮನ್ನು ಯಶಸ್ವಗೊಳಿಸಬೇಕು. ಬೇಸಿಗೆಯಿರುವ ಕಾರಣದಿಂದ ಪೆಂಡಾಲ್ ವ್ಯವಸ್ಥೆ, ವೇದಿಕೆಯನ್ನು ಸಜ್ಜುಗೊಳಿಸುವುದು ಬ್ಯಾನರ್ ವ್ಯವಸ್ಥೆ ಮಾಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಕುಡಿಯುವ ನೀರು ಹಾಗೂ ಜಾಗದ ಸ್ವಚ್ಛತೆ ಮಾಡಬೇಕೆಂದು ಮಹಾನಗರ ಪಾಲಿಕಯ ಆಯುಕ್ತ ಅವಿನಾಶ್ ಸಿಂಧೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಮಾಜದ ಮುಖಂಡರುಗಳು ತಮ್ಮ ತಮ್ಮ ಸಲಹೆ ಸೂಚನೆಗಳನ್ನು ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ ಮಾತನಾಡಿ, ನಾಡಗೀತೆ ಸಂಗೀತ ಕಾರ್ಯಕ್ರಮ ಹಾಗೂ ಆಮಂತ್ರಣ ಪತ್ರಿಕೆಗಳನ್ನು ಮುದ್ರಿಸಲಾಗುವುದು ಎಂದರು.

ಪೂರ್ವಭಾವಿಯ ಸಭೆಯ ಅಧ್ಯಕ್ಷರಾದ ಶೆಳ್ಳಗಿ ದೇವಿಂದ್ರ, ಹಣಮಂತ ಬೋಧನಕರ್, ಪ್ರಧಾನ ಕಾರ್ಯದರ್ಶಿ, ಉಪಾಧ್ಯಕ್ಷ ಷಣಖ ವಾಘಮೋರೆ, ಬೌದ್ಧ ಉಪಾಸಕರು ಲಕ್ಷ್ಮೀಕಾಂತ, ಕಾಂಗ್ರೆಸ್ ಎಸ್‌ಸಿ.ಎಸ್.ಟಿ ನೌಕರರ ಸಂಘದ ಅಧ್ಯಕ್ಷ ಮಹೇಶ ಹುಬಳಿ, ಸೇರಿದಂತೆ ಮುಖಂಡ ಅಶ್ವಿನ್ ಸಂಕಾ, ಸಮಾಜ ಸೇವಕ ಸುನಿಲ್ ಮಾನಪಾಡೆ, ಹಣಮಂತ ಯಾಳಸಂಗಿ, ಪಶುಪಾಲನ ಇಲಾಖೆಯ ಉಪನಿರ್ದೇಶಕ ಸುನೀಲ್‌ಕುಮಾರ, ಕೃಷಿ ಇಲಾಖೆಯ ವಿದ್ಯಾಲಕ್ಷ್ಮೀ, ಎ.ಬಿ ಹೊಸಮನಿ, ಅಶ್ವಿನಿ ಬಿ ಸಂಕಾ, ಸಮಾಜದ ಮುಖಂಡರುಗಳು ಉಪಸ್ಥಿತರಿದ್ದರು.

## ಕಾಮಗಾರಿಯ ಪ್ರಯುಕ್ತ ವಿದ್ಯುತ್ ಪೂರೈಯಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮೇ.07–ವಿದ್ಯುತ್ ವಿತರಣಾ ಕೇಂದ್ರದಲ್ಲಿ 33/11 ಕೆ.ವ್ಹಿ. ಜಂಬಗಾ ಉಪ–ಕೇಂದ್ರದ ಬ್ಯಾಂಕ್ –1 ಮತ್ತು ಎಫ್–5 ಸುಲ್ತಾನಪೂರ ಐಪಿ ಫೀಡರಗಳ ರೆಟ್ರೋಫಿಟಿಂಗ್ ಹಾಗೂ ಉಪಕೇಂದ್ರದ ನಿರ್ವಹಣೆ ಕೆಲಸ ಪ್ರಯುಕ್ತ ಮಾರ್ಗಗಳ ಮೇ. 8 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ 3 ಗಂಟೆಯವರೆಗೆ ಸದರಿ ಫೀಡರ್‌ಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ವಿದ್ಯುತ್ ಸರಬರಾಜುನಲ್ಲಿ ವ್ಯತ್ಯಯ ಉಂಟಾಗುವ ಕಾರಣ ಎಲ್ಲಾ ಗ್ರಾಹಕರು ಸಹಕರಿಸಬೇಕಾಗಿ ಕಾ ಮತ್ತು ಪಾ. ಗ್ರಾಮೀಣ ವಿಭಾಗ–0 ಗು.ವಿ.ಸ.ಕಂ.ನಿ. ಕಲಬುರಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯುತ್ ವಿತರಣಾ ಕೇಂದ್ರದ ಹೆಸರು 33/11 ಕೆ.ವಿ. ಜಂಬಗಳ 110/11 ಕೆ.ವಿ ಫೀಡರಿನ ಹೆಸರುಗಳು ಎಫ್–1 ಚಿಂಚನಸೂರು, ಎನ್.ಜೆ.ವೈ. ಎಫ್.–2, ಬನ್ನೂರ ಎನ್.ಜೆ.ವೈ. ಎಫ್.–3 ಕಲ್ಲಹಂಗರಾ ಐಪಿ. ಎಫ್–5 ಸಂಗೋಳಗಿ ಐಎಪಿ ಎಫ್–6 ಸುಲ್ತಾನಪೂರ ಐಪಿ ಎಫ್–6 ಜಂಬಗಾ ಎನ್.ಜೆ.ವೈ. ಎಫ್.–7 ಅಷ್ಟಗಾ ಐಪಿ ಮತ್ತು ಎಫ್–8 ಭೀಮಳ್ಳಿ ಐಪಿ ಫೀಡರ್, ಗ್ರಾಮಗಳ ಹೆಸರುಗಳು ಇಂತಿವೆ ಕಲ್ಲಹಂಗರಾ, ಚಿಂಚನಸೂರ, ಕೆರಿ ಅಂಬಲಗಾ, ಕುಮಸಿ, ವಾಡಿ, ಸಂಗಳೋಗಿ, ಸುಲ್ತಾನಪೂರ, ಜಂಬಗಾ, ಅಷ್ಟಗಾ, ಭೀಮಳ್ಳಿ ಮತ್ತು ಕಟ್ಟರಗಾ ಹಾಗೂ, ಸುತ್ತಮುತ್ತಲ್ಲಿನ ಗ್ರಾಮಗಳು ಇರುತ್ತವೆ.

## ಕುಡಿವ ನೀರು, ವಿದ್ಯುತ್ ಸಮಸ್ಯೆಗಳಿಗೆ ಶೀಘ್ರ ಸ್ಪಂದಿಸಿ : ಎನ್.ಎಸ್.ಬೋಸರಾಜು ಸಲಹೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 07–ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್.ಎಸ್.ಬೋಸರಾಜು ಅವರು ಶಾಸಕರಾದ ಹಂಪಯ್ಯ ನಾಯಕ ಅವರೊಂದಿಗೆ ಇತ್ತೀಚೇಗೆ ಮಾನ್ವಿಯ ಪ್ರವಾಸಿ ಮಂದಿರದಲ್ಲಿ ಪ್ರಗತಿ ಪರಿಶೀಲನ ಸಭೆ ನಡೆಸಿದರು.

ಇದೆ ವೇಳೆ ಮಾತನಾಡಿದ ಸಚಿವರು, ಮಾನ್ವಿ ಹಾಗೂ ಸಿರವಾರ ತಾಲೂಕಿನಲ್ಲಿ ಕುಡಿಯುವ ನೀರು ಹಾಗೂ ವಿದ್ಯುತ್ ಸಮಸ್ಯೆಗಳಾದರೆ ಅಧಿಕಾರಿಗಳು ಸ್ಪಂದಿಸಿ ಸಮಸ್ಯೆಗಳನ್ನ ಇತ್ಯರ್ಥಗೊಳಿಸಬೇಕು. ಕುಡಿಯುವ ನೀರಿನ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಿದರೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ಕಾನೂನಾತ್ಮಕವಾಗಿ ಸರ್ಕಾರದ ವತಿಯಿಂದ ಪಡೆದಿರುವ ನಿವೇಶನಗಳಿಗೆ ಶೀಘ್ರ ಹಕ್ಕು ಪತ್ರ ಹಸ್ತಾಂತರಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸರ್ಕಾರದಿಂದ ಹಂಚಿಕೆಯಾದ ನಿವೇಶನಗಳಿಗೆ ಹಕ್ಕುಪತ್ರ ಹಂಚಿಕೆ, ಕುಡಿಯುವ ನೀರು, ಚರಂಡಿ, ರಸ್ತೆ ವಿದ್ಯುತ್ ಸೇರಿದಂತೆ ವಿವಿಧ ಎಜೆನ್ಸಿಗಳಿಂದ ನಡೆಯುತ್ತಿರುವ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾಮಗಾರಿ ಕೆಲಸಗಳನ್ನು ತ್ವರಿತ ಗತಿಯಲ್ಲಿ ಗುಣಮಟ್ಟದೊಂದಿಗೆ ಮುಗಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಾನ್ವಿ ತಹಶೀಲ್ದಾರರಾದ ಭೀಮರಾಯ್, ಸಿರವಾರ ತಹಶೀಲ್ದಾರರಾದ ರವಿ ಅಂಗಡಿ, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್ ದೊಡ್ಡಮನಿ, ತಾಲೂಕ ಪಂಚಾಯ್ತಿ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಹಿರೇಮಠ, ಹಿರಿಯ ಮುಖಂಡರಾದ ಬಿಕೆ ಅಮರೇಶಪ್ಪ, ಗಫೂರ ಸಾಬ್, ಖಾಲೀದ್ ಗುರು, ಪುರಸಭೆ ಅಧ್ಯಕ್ಷರು ವೀರೇಶ, ಉಪಾಧ್ಯಕ್ಷರು, ಪುರಸಭೆ ಸದಸ್ಯರುಗಳು ಸೇರಿದಂತೆ ತಾಲೂಕ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಬ್ಯೂಟಿ ಪಾರ್ಲರ್ ನಿರ್ವಹಣೆ ತರಬೇತಿ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.03––ಕಲಬುರಗಿ ಎಸ್.ಬಿ.ಐ. ಗ್ರಾಮೀಣ ಸ್ವ–ಯಂ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಉಚಿತವಾಗಿ ಇದೇ ಮೇ 15 ರಿಂದ 18 ರವರೆಗೆ ಉಚಿತವಾಗಿ ಬ್ಯೂಟಿ ಪಾರ್ಲರ್ ನಿರ್ವಹಣೆ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಇದಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಎಸ್.ಬಿ.ಐ. ಆರ್‌ಸೆಟ್ ನಿರ್ದೇಶಕರು ತಿಳಿಸಿದ್ದಾರೆ. ಈ ತರಬೇತಿ ಸಂದರ್ಭದಲ್ಲಿ ಉಚಿತ ಊಟ ಹಾಗೂ ವಸತಿ ಸೌಲಭ್ಯ ನೀಡಲಾಗುತ್ತದೆ. ವಯೋಮಿತಿ 18 ರಿಂದ 45 ವರ್ಷದೊಳಗಿನ ಬಿ.ಪಿ.ಎಲ್., ಅಂತ್ಯೋದಯ ರೇಷನ್, ಎಮ್‌ಜಿಎನ್‌ಆರ್‌ಇಜಿಎ ಕಾರ್ಡ್ ಹೊಂದಿದ ಕುಟುಂಬದ ನಿರುದ್ಯೋಗಿ ಅಭ್ಯರ್ಥಿಗಳು ಸಂಸ್ಥೆಯಿಂದ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿ ಅವಶ್ಯಕ ದಾಖಲಾತಿಗಳೊಂದಿಗೆ 2025ರ ಮೇ 14 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ತರಬೇತಿ ಸಂಸ್ಥೆಯಲ್ಲಿ ಇದೇ ಮೇ 14 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3.30 ಗಂಟೆಯವರೆಗೆ ನಡೆಯುವ ಸಂದರ್ಶನಕ್ಕೆ ಹಾಜರಾಗಬೇಕು.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ತರಬೇತಿ ಸಂಸ್ಥೆಯನ್ನು ಹಾಗೂ ಮೊಬೈಲ್ ಸಂಖ್ಯೆ 9448994585, 9886781239 ಹಾಗೂ 9900135705.

## ಸರಕಾರಿ ನೌಕರರು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕು– ಬಸವರಾಜ ರಾಯರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಸರಕಾರಿನೌಕರರು ಸರ್ಕಾರದ ನಿಜವಾದ ಕಸ್ಟೋಡಿಯನಗಳಾಗಿದ್ದು ತಾವು ಪರಿಣಾಮಕಾರಿಯಾಗಿ ಕೆಲಸ ಮಾಡಿದಾಗ ಮಾತ್ರ ಸಮಾಜದ ಅಭಿವೃದ್ಧಿಯ ಜೊತೆಗೆ ಸರ್ಕಾರ–ಕ್ಕೆ ಒಳ್ಳೆಯ ಹೆಸರು ಬರುತ್ತದೆ ಎಂದು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರೆಡ್ಡಿ ಹೇಳಿದರು.

ಅವರು ಬುಧವಾರ ಕೊಪ್ಪಳ ಜಿಲ್ಲಾಡಳಿತ. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಕೊಪ್ಪಳ ಇವರ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ದೇಶ ಹಾಗೂ ಜನರ ಸುಧಾರಣೆಗಾಗಿ ಜನಪ್ರತಿನಿಧಿಗಳು ಹಾಗೂ ಸರಕಾರಿ ನೌಕರರು ಉತ್ತಮ ರೀತಿಯಲ್ಲಿ ಕೆಲಸ ಮಾಡಬೇಕಿದೆ. ಜನ ಸೇವೆ ದೇವರ ಸೇವೆ ಇದ್ದಂತೆ. ನಮ್ಮ ದೇಶಗಳಲ್ಲಿ ಬಹಳಷ್ಟು ಜನಸಂಖ್ಯೆ ಜೊತೆಗೆ ಬಡತನವು ಇರುವುದರಿಂದ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ನಾವು ಮಾಡಬೇಕಿದೆ. ಆಡಳಿತದಲ್ಲಿ ಪ್ರಾಮಾಣಿಕತೆಯು ಬರಬೇಕಿದೆ ಎಂದರು.

ಗ್ರಾಮೀಣ ಪ್ರದೇಶಗಳಲ್ಲಿ ಹಿಂದುಳಿದ ಮಕ್ಕಳಿಗೆ ಶಿಕ್ಷಕರು ಪರೀಣಾಮಕಾರಿಯಾಗಿ ಕಲಿಸಬೇಕು. ಶಿಕ್ಷಕರಿಗೆ ಸಮಸ್ಯೆಯಾಗದಂತೆ ಅವರ ವರ್ಗಾವಣೆ ಪ್ರಕ್ರಿಯೆಗೆ ಕೌನ್ಸಿಲಿಂಗ ತರಲಾಗಿದೆ. ಅಬಕಾರಿ. ಸಬ್ ರಿಜಿಸ್ಟಾರ್. ಗಣಿ ಮತ್ತು ಭೂ ವಿಜ್ಞಾನ ಸೇರಿದಂತೆ ಇತರೆ ಇಲಾಖೆಗಳಲ್ಲಿಯೂ ಕೌನ್ಸಿಲಿಂಗ ಮೂಲಕ ಸರಕಾರಿ ನೌಕರರ ವರ್ಗಾವಣೆ ಮಾಡುವ ಮೂಲಕ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲಾಗುತ್ತಿದೆ ಎಂದು ಹೇಳಿದರು.

ಹಿಂದುಳಿದ ನಮ್ಮ ಭಾಗದ ಜಿಲ್ಲೆಗಳ ಅಭಿವೃದ್ಧಿಗಾಗಿ ಅಧಿಕಾರಿಗಳು ಶ್ರಮವಹಿಸಿ ಕೆಲಸ ಮಾಡಬೇಕಿದೆ. ದೇಶದಲ್ಲಿಯೇ ಅತ್ಯುತ್ತಮ ಕೌಶಲ್ಯ ಅಭಿವೃದ್ಧಿ ತರಬೇತಿ ಕೇಂದ್ರ ತಳಕಲನಲ್ಲಿ ಮಾಡಲಾಗುತ್ತಿದೆ. ಜಿಲ್ಲೆಯ ಎಲ್ಲಾ ನೌಕರರಿಗೆ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಶುಭಾಶಯಗಳು ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಮಾತನಾಡಿ ಸರಕಾರಿ ನೌಕರರು ಸರಕಾರಿ ನೌಕರಿ ಸೇರಿದಾಗಿನಿಂದ ಹಿಡಿದು ನಿವೃತ್ತಿ ಜೀವನದ ತನಕ ತಮ್ಮ ಕುಟುಂಬದ ಕೆಲಸ ಕಾರ್ಯಗಳನ್ನು ಬದಿಗಿಟ್ಟು ಕೆಲಸ ಮಾಡುತ್ತಾರೆ. ಜನರು ಸಮಸ್ಯೆಗಳನ್ನು ತೆಗೆದು–ಕೊಂಡು ತಮ್ಮ ಕಛೇರಿಗೆ ಬಂದಾಗ ಅವರ ಸಮಸ್ಯೆಗಳಿಗೆ ಉತ್ತಮ ರೀತಿಯಲ್ಲಿ ಅಧಿಕಾರಿಗಳು ಸ್ಪಂದನೆ ನೀಡಿಬೇಕು. ಜಿಲ್ಲೆಯ ಅಭಿವೃದ್ಧಿಗಾಗಿ ಎಲ್ಲರೂ ಶ್ರಮಿಸಬೇಕಿದೆ ಎಂದು ಹೇಳಿದರು.

ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಮಾತನಾಡಿ ಒಂದು ದೇಶ ಹಾಗೂ ರಾಜ್ಯಗಳ ಆರ್ಥಿಕ ಅಭಿವೃದ್ಧಿಯಲ್ಲಿ ಸರ್ಕಾರಿ ನೌಕರರ ಪಾತ್ರ ಬಹಳ ಮುಖ್ಯ ಇದೆ. ಸರಕಾರಿ ನೌಕರರು ತಮ್ಮ ಎಲ್ಲಾ ಕೆಲಸಗಳನ್ನು ಬದಿಗಿಟ್ಟು ಸಾರ್ವಜನಿಕರ ಸೇವೆ ಮಾಡುತ್ತಾರೆ. ನಮ್ಮ ಜಿಲ್ಲೆಯಲ್ಲಿ ಅಧಿಕಾರಿಗಳು ಉತ್ತಮ ರೀತಿಯಲ್ಲಿ ಕೆಲಸ ಮಾಡುತ್ತಿದ್ದಾರೆ.

ಅವರಿಗೆ ನಾವು ಸರಿಯಾಗಿ ಸ್ಪಂದನೆ ಮಾಡಬೇಕಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಮಾತನಾಡಿ ನೌಕರರು ಜೀವನದಲ್ಲಿ ಶಿಸ್ತು ಅಳವಡಿಸಿಕೊಳ್ಳಬೇಕು. ಸರಿಯಾದ ಸಮಯಕ್ಕೆ ಕಛೇರಿಗೆ ಹೋಗಬೇಕು. ಜನರು ತಮ್ಮ ಸಮಸ್ಯೆಗಳನ್ನು ತೆಗೆದುಕೊಂಡು ಕಛೇರಿಗೆ ಬಂದಾಗ ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು.

ನಾವು ಮಾಡುವ ಕೆಲಸದ ಬಗ್ಗೆ ನಮಗೆ ಸಂಪೂರ್ಣ ಮಾಹಿತಿ ಇರಬೇಕು ಅಂದಾಗ ಜನರಿಗೆ ಸರಿಯಾದ ಮಾಹಿತಿ ನೀಡಿ ಅವರ ಸಮಸ್ಯೆಗೆ ಅರ್ಧ ಪರಿಹಾರ ಅಲ್ಲೆ ಸಿಗುತ್ತದೆ ಎಂದು ಹೇಳಿದರು.

ರಾಜ್ಯ ಸರ್ಕಾರಿ ನೌಕರರ ಸಂಘ ಕೊಪ್ಪಳದ ಜಿಲ್ಲಾಧ್ಯಕ್ಷರಾದ ನಾಗರಾಜ ಆರ್. ಜುಮ್ಮನ್ನವರ ಮಾತನಾಡಿ ಸರಕಾರಿ ನೌಕರರು ವರ್ಷದ 364 ದಿನ ಸೇವೆ ಸಲ್ಲಿಸುತ್ತಾರೆ. ಸರಕಾರಿ ನೌಕರರ ದಿನಾಚರಣೆ ಆಚರಿಸಲು ಅವಕಾಶ ನೀಡಿದ ಸರ್ಕಾರ–ಕ್ಕೆ ಎಲ್ಲಾ ನೌಕರ ಭಾಂದವರ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುತ್ತೆನೆ. ಸರಕಾರಿ ನೌಕರರಿಗೆ ಜಿಲ್ಲೆಯಲ್ಲಿ ಹೊಸದಾಗಿ ವಸತಿ ಗೃಹಗಳಾಗಬೇಕು ಈಗಾಗಲೇ ಇರುವ ಹಳೆಯ ಕಟ್ಟಡಗಳು ಡೆಮಾಲಿಸ್ ಹಂತದಲ್ಲಿವೆ. ಸರಕಾರಿ ನೌಕರರಿಗೆ ಜಿಲ್ಲೆಯಲ್ಲಿ ತರಬೇತಿ ನೀಡಲು ಒಂದು ಕಟ್ಟಡದ ಅವಶ್ಯಕತೆ ಇದೆ. ಜಿಲ್ಲೆಯಲ್ಲಿ ಶೇ. 40 ಪ್ರತಿಶತ ಹುದ್ದೆಗಳು ಖಾಲಿ ಇದ್ದರು ಎಲ್ಲಾ ಕೆಲಸವನ್ನು ನಾವು ನಿಭಾಯಿಸಿಕೊಂಡು ಹೋಗುತ್ತಿದ್ದೆವೆ ಎಂದು ಹೇಳಿದರು.

ಸಿಂಧನೂರಿನ ಶ್ರೀ ಕೃಷ್ಣ ದೇವರಾಯ ವಿದ್ಯಾ ಸಂಸ್ಥೆಯ ಪ್ರಾಚಾರ್ಯರಾದ ಚಂದ್ರಕಲಾ ಪ್ರಕಾಶ ಅವರು ವೃತ್ತಿ ಜೀವನದಲ್ಲಿ ಒತ್ತಡ ನಿರ್ವಹಣೆ ಕುರಿತು ವಿಶೇಷ ಉಪನ್ಯಾಸ ನೀಡಿದರು.

2023–24ನೇ ಸಾಲಿನ ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಭಾಜನರಾದ ಘಟ್ಟಿರಡ್ಡಿಹಾಳ ಗ್ರಾಮದ ಗ್ರಾಮ ಆಡಳಿತ ಅಧಿಕಾರಿ ಮಲ್ಲಮ್ಮ ಹೆಬ್ಬಾಳ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಭಾಜನರಾದ 10 ಜನ ಸರ್ಕಾರಿ ನೌಕರರಿಗೆ ಇದೇ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

2023–24ನೇ ಸಾಲಿನ ಜಿಲ್ಲಾ ಮಟ್ಟದ ಸರ್ವೋತ್ತಮ ಪ್ರಶಸ್ತಿಗೆ ಭಾಜನರಾದವರ ವಿವರ.:ಕೊಪ್ಪಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಲಿಂಗರಾಜು ಟಿ, ಕೊಪ್ಪಳ ಜಿಲ್ಲಾ ಖಜಾನೆ ಉಪನಿರ್ದೇಶಕ ಕೆ.ಸುರೇಶ ಕೊಪ್ಪಳ ಜಿಲ್ಲಾ ಪಂಚಾಯತ ಲೆಕ್ಕ ಅಧೀಕ್ಷಕ ಅಡವಿ ಅಶೋಕ, ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿಯ ಶಿರಸ್ತೇದಾರರಾದ ಸತೀಶ್ ಕುಮಾರ, ಯಲಬುರ್ಗಾ ತಹಶೀಲ್ದಾರ ಕಚೇರಿ ಶಿರಸ್ತೇದಾರರಾದ ದೇವರಡ್ಡಿ ಶರಣಪ್ಪ ಮೂಲಿಮನಿ, ಕೊಪ್ಪಳ ಜಿಲ್ಲಾ ಲಸಿಕಾ ಉಗ್ರಾಣದ ಫಾರ್ಮಸಿ ಅಧಿಕಾರಿ ವಸಂತ ಬೆಲ್ಲದ, ತಳಕಲ್ ಗ್ರಾಮ ಪಂಚಾಯತಿಯ ಪಂಚಾಯತ ಅಭಿವೃದ್ಧಿ ಅಧಿಕಾರಿ ವೀರನಗೌಡ ಚನವೀರನಗೌಡ, ಬೂದಗುಂಪಾದ ಗ್ರಾಮ ಆಡಳಿತ ಅಧಿಕಾರಿ ರಮೇಶ ನಾಯ್ಕ, ಹಾಗೂ ಭಾಗ್ಯನಗರ ಪಟ್ಟಣ ಪಂಚಾಯತಿಯ ಹಿರಿಯ ಆರೋಗ್ಯ ನಿರೀಕ್ಷಕರಾದ ಪರಶುರಾಮ ಮಹೇಂದ್ರಕರ, ಕೊಪ್ಪಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಿರಿಯ ಆರೋಗ್ಯ ಸಹಾಯಕ ರವಿನಾಗೇಶ, ಈ ಎಲ್ಲಾ ನೌಕರರಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ. ಸಹಾಯಕ ಆಯುಕ್ತರಾದ ಕ್ಯಾ. ಮಹೇಶ್ ಮಾಲಗಿತ್ತಿ. ಜಿಲ್ಲಾ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಶಿವಪ್ಪ ಜೋಗಿ. ಪ್ರಾಥಮಿಕ ಶಾಲಾ– ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರಾದ ಶರಣ ಬಸನಗೌಡ ಪಾಟೀಲ್. ಸೇರಿದಂತೆ ಜಿಲ್ಲಾ ಹಾಗೂ ವಿವಿಧ ತಾಲೂಕು ಘಟಕಗಳ ನೌಕರರ ಸಂಘದ ಪದಾಧಿಕಾರಿಗಳು. ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪರಿಶಿಷ್ಟ ಜಾತಿ ಸಮೀಕ್ಷೆ ಸಮೀಕ್ಷೆದಾರರಿಗೆ ಸಹಕರಿಸಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ.7:ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ರಾಜ್ಯದ ಪ್ರತಿಯೊಂದು ಪರಿಶಿಷ್ಟ ಜಾತಿಯ ಕುಟುಂಬದ ಸಮಗ್ರ ಸಮೀಕ್ಷೆ ಕೈಗೊಂಡು ಸಾಮಾಜಿಕ, ಶೈಕ್ಷಣಿಕ ,ಆರ್ಥಿಕ, ರಾಜಕೀಯ, ಔದ್ಯೋಗಿಕ, ಪ್ರಾತಿನಿಧ್ಯತೇ ಇತ್ಯಾದಿ ಸ್ಥಿತಿಗತಿಗಳ ಬಗ್ಗೆ ವಿಶ್ಲೇಷಣೆ ಮಾಡಿ ಒಳ ಮೀಸಲಾತಿ ವರ್ಗೀಕರಣ ಮಾಡಲು ಸರ್ಕಾರ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆಗಳನ್ನು ಸಾಮಾಜಿಕ ಕಲ್ಯಾಣ ಇಲಾಖೆ ಮೂಲಕ ಕೈಗೊಳ್ಳುತ್ತಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಚನ್ನಬಸಪ್ಪ ಅವರು ತಿಳಿಸಿದ್ದಾರೆ. ಸಮೀಕ್ಷೆದಾರರು ತಮ್ಮ ಮನೆಗೆ ಬಂದಾಗ ಅವರೊಂದಿಗೆ ಸಹಕರಿಸಿ ಅವರಿಗೆ ಬೇಕಾದ ವಿವರಗಳನ್ನು ಪೂರ್ಣವಾಗಿ ಸ್ಪಷ್ಟವಾಗಿ ನೀಡಲು ಅವರು ಪರಿಶಿಷ್ಟ ಜಾತಿ ಕುಟುಂಬಗಳಿಗೆ ಕೋರಿದ್ದಾರೆ. ಮೇ 5 ರಿಂದ 17ರ ವರೆಗೆ ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಮೇ 19ರಿಂದ 21ರವರೆಗೆ ವಿಶೇಷ ಶಿಬಿರಗಳನ್ನು ಕೈಗೊಂಡು ಮನೆ ಮನೆ ಭೇಟಿ ಅವಧಿಯಲ್ಲಿ ಬಿಟ್ಟು ಹೋದ ಕುಟುಂಬಗಳ ಮಾಹಿತಿಯನ್ನು ಸಂಗ್ರಹಿಸಲಾಗುತ್ತದೆ. ಹೆಚ್ಚಿನ ವಿವರಗಳಿಗಾಗಿ ತಮ್ಮ ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಅಥವಾ ತಹಶೀಲ್ದಾರ್ ಕಚೇರಿಯನ್ನು ಸಂಪರ್ಕಿಸುವುಂತೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಯಾದಗಿರಿ ಜಿಲ್ಲೆ ಮೂಲಕ ಕೋರಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಪರೇಷನ್ ಸಿಂಧೂರ: ನಾಳೆ ಸರ್ವಪಕ್ಷ ಸಭೆ ಕರೆದ ಕೇಂದ್ರ ಸರ್ಕಾರ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮೇ.7: ಭಾರತೀಯ ಸೇನೆ ಬುಧವಾರ ಬೆಳಗಿನ ಜಾವ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಉಗ್ರರ ನೆಲೆಗಳ ಮೇಲೆ ಕ್ಷಿಪಣಿ ದಾಳಿ ನಡೆಸುವ ಮೂಲಕ ಪಹಲ್ಗಾಮ್ ಉಗ್ರದಾಳಿಗೆ ಪ್ರತೀಕಾರ ತೀರಿಸಿಕೊಂಡಿದೆ.

ಇಂದು ಬೆಳಗಿನ ಜಾವ ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರ ಬಗ್ಗೆ ಮಾಹಿತಿ ನೀಡಲು ಕೇಂದ್ರ ಸರ್ಕಾರ ಗುರುವಾರ ಸರ್ವಪಕ್ಷ ಸಭೆ ಕರೆದಿದೆ.ನಾಳೆ ನಡೆಯುವ ಸರ್ವಪಕ್ಷ ಸಭೆಯ ಕುರಿತು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

"ಕೇಂದ್ರ ಸರ್ಕಾರ ಮೇ 8, 2025 ರಂದು ಬೆಳಗ್ಗೆ 11 ಗಂಟೆಗೆ ದೆಹಲಿಯ ಸಂಸತ್ತಿನ ಗ್ರಂಥಾಲಯ ಕಟ್ಟಡದ ಸಮಿತಿ ಕೊಠಡಿ ಜಿ–074 ರಲ್ಲಿ ಸರ್ವಪಕ್ಷ ನಾಯಕರ ಸಭೆಯನ್ನು ಕರೆದಿದೆ" ಎಂದು ಕಿರಣ್ ರಿಜಿಜು ಅವರು ತಿಳಿಸಿದ್ದಾರೆ.

# ರಾಷ್ಟ್ರಪತಿಗಳಿಗೆ ಆಪರೇಷನ್ ಸಿಂಧೂರ ಮಾಹಿತಿ ನೀಡಿದ ಪ್ರಧಾನಿ ಮೋದಿ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮೇ.7: ಭಾರತೀಯ ಸೇನೆ ಬುಧವಾರ ಬೆಳಗಿನ ಜಾವ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಉಗ್ರರ ನೆಲೆಗಳ ಮೇಲೆ ಕ್ಷಿಪಣಿ ದಾಳಿ ನಡೆಸುವ ಮೂಲಕ ಪಹಲ್ಗಾಮ್ ಉಗ್ರದಾಳಿಗೆ ಪ್ರತೀಕಾರ ತೀರಿಸಿಕೊಂಡಿದೆ.

ಪಾಕಿಸ್ತಾನದ ಉಗ್ರರ ನೆಲೆಗಳ ಮೇಲೆ ಕ್ಷಿಪಣಿ ದಾಳಿ ಬಳಿಕ ಪ್ರಧಾನಿ ನರೇಂದ್ರ ಮೋದಿ ಅವರು ಸಚಿವ ಸಂಪುಟ ಸಭೆ ನಡೆಸಿದರು. ನಂತರ ರಾಷ್ಟ್ರಪತಿ ಭವನಕ್ಕೆ ತೆರಳಿದ ಪ್ರಧಾನಿ ಮೋದಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ, ಇಂದು ಬೆಳಗಿನ ಜಾವ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಾದ್ಯಂತ ಒಂಬತ್ತು ಭಯೋತ್ಪಾದಕ ನೆಲೆಗಳನ್ನು ಗುರಿಯಾಗಿಸಿಕೊಂಡು ಭಾರತೀಯ ಸೇನೆ ನಡೆಸಿದ 'ಆಪರೇಷನ್ ಸಿಂಧೂರ್' ಬಗ್ಗೆ ವಿವರಿಸಿದರು.

ಈ ಮಧ್ಯೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಧ್ಯಾಹ್ನ 2 ಗಂಟೆಗೆ ಗಡಿ ರಾಜ್ಯಗಳ ಮುಖ್ಯಮಂತ್ರಿಗಳು, ಡಿಜಿಪಿಗಳು ಮತ್ತು ಮುಖ್ಯ ಕಾರ್ಯದರ್ಶಿಗಳ ಸಭೆ ಕರೆದಿದ್ದಾರೆ.

ಜಮ್ಮು ಮತ್ತು ಕಾಶ್ಮೀರ, ಪಂಜಾಬ್, ರಾಜಸ್ಥಾನ, ಗುಜರಾತ್, ಉತ್ತರಾಖಂಡ, ಉತ್ತರ ಪ್ರದೇಶ, ಬಿಹಾರ, ಸಿಕ್ಕಿಂ, ಪಶ್ಚಿಮ ಬಂಗಾಳದ ಮುಖ್ಯಮಂತ್ರಿಗಳು ಮತ್ತು ಲಡಾಖ್‌ನ ಲೆಫ್ಟಿನೆಂಟ್ ಗವರ್ನರ್ ಹಾಗೂ ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಬಳಿಕ ಮಾತನಾಡಿದ ಪ್ರಧಾನಿ ಮೋದಿ, ನಮ್ಮ ಸೇನೆ ಅತ್ಯುತ್ತಮ ಕೆಲಸ ಮಾಡಿದೆ. ಇದು ಇಡೀ ದೇಶಕ್ಕೆ ಹೆಮ್ಮೆಯ ಕ್ಷಣ ಎಂದು ಹೇಳಿದರು.

ಸಂಪುಟ ಸಭೆಯಲ್ಲಿ ಭಾರತದ ಮೂರು ಸೇನೆಪಡೆಗಳನ್ನು ಪ್ರಧಾನಿ ಮೋದಿ ಅಭಿನಂದಿಸಿದ್ದು, ನಮ್ಮ ಸೇನೆ ಅದ್ಭುತ ಕೆಲಸ ಮಾಡಿದೆ. ಇಡೀ ದೇಶ ಅವರ ಬಗ್ಗೆ ಹೆಮ್ಮೆಪಡುತ್ತದೆ ಎಂದು ಹೇಳಿದರು. ಆಪರೇಷನ್ ಸಿಂಧೂರ್ ಯಶಸ್ಸಿನ ಬಗ್ಗೆ ಪ್ರಧಾನಿ ಮೋದಿ ತಮ್ಮ ಸಂಪುಟಕ್ಕೆ ತಿಳಿಸಿದಾಗ ಎಲ್ಲಾ ಸದಸ್ಯರು ಮೇಜು ಬಡಿದು ಮೆಚ್ಚುಗೆ ವ್ಯಕ್ತಪಡಿಸಿದರು.

# ಜೆಇಎಂ ಉಗ್ರ ಮಸೂದ್ ಕುಟುಂಬದ 10 ಮಂದಿ ಸಾವು



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಮೇ.7: ಭಯೋತ್ಪಾದಕ ಶಿಬಿರಗಳನ್ನ ಗುರಿಯಾಗಿಸಿಕೊಂಡು ಭಾರತ ನಡೆಸಿದ ವಾಯುದಾಳಿಯಲ್ಲಿ ಜೈಶ್ ಇ ಮೊಹಮ್ಮದ್ ಉಗ್ರ ಸಂಘಟನೆಯ ಮುಖ್ಯಸ್ಥ ಮಸೂದ್ ಅಜರ್ ಅವರ ಕುಟುಂಬದ 10 ಮಂದಿ ದಾಳಿಯಲ್ಲಿ ಸಾವನ್ನಪ್ಪಿದ್ದಾರೆ.

ಆಪರೇಷನ್ ಸಿಂಧೂರ್ ಹೆಸರಲ್ಲಿ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಭಯೋತ್ಪಾದಕ ಸಂಘಟನೆಯ 21 ಶಿಬಿರಗಳ ಮೇಲೆ ನಡೆದ ದಾಳಿಯಲ್ಲಿ ಉಗ್ರಸಂಘಟನೆಯ ಮುಖ್ಯಸ್ಥ ಮಸೂದ್ ಕುಟುಂಬದ 10 ಮಂದಿ ಸೇನಾ ದಾಳಿಯಲ್ಲಿ ಮೃತಪಟ್ಟಿದ್ದಾರೆ.

ಭಾರತದ ವಿವಿಧ ಭಾಗಗಳಲ್ಲಿ ವಿಧ್ವಂಸಕ ಕೃತ್ಯ ನಡೆಸಿ ಭಾರತಕ್ಕೆ ಬೇಕಾಗಿರುವ ಪ್ರಮುಖ ಆರೋಪಿಗಳಲ್ಲಿ ಒಬ್ಬರಾಗಿರುವ ಮಸೂದ್ ಅಜರ್ ಕುಟುಂಬವನ್ನು ಎಡೆಮುರಿ ಕಟ್ಟುವಲ್ಲಿ ಭಾರತೀಯ ಸೇನೆ ಯಶಸ್ವಿಯಾಗಿದೆ.

ಸೇನಾ ದಾಳಿಯಲ್ಲಿ ಭಯೋತ್ಪಾದಕ ತಾಣಗಳನ್ನು ಅಷ್ಟೇ ಗುರಿಯಾಗಿಸಿಕೊಂಡು ದಾಳಿ ನಡೆಸಿದ ಹಿನ್ನೆಲೆಯಲ್ಲಿ ಯಾವುದೇ ಸಾರ್ವಜನಿಕರಿಗೆ ಹಾನಿಯಾಗಿಲ್ಲ ಮತ್ತು ಸಾವು ನೋವು ಸಂಭವಿಸಿಲ್ಲ ಎಂದು ಸೇನಾ ಪಡೆಯ ಅಧಿಕಾರಿಗಳು ತಿಳಿಸಿದ್ದಾರೆ

ಈ ದಾಳಿಯಲ್ಲಿ ತನ್ನ ಕುಟುಂಬ ನಾಶವಾದ ನಂತರ ಮಸೂದ್ ಅಜರ್ ತುಂಬಾ ಅಸಮಾಧಾನಗೊಂಡಿದ್ದಾನೆ. ಮಾಧ್ಯಮ ವರದಿಗಳ ಪ್ರಕಾರ, 'ನಾನು ಕೂಡ ಸತ್ತಿದ್ದರೆ ಚೆನ್ನಾಗಿರುತ್ತಿತ್ತು' ಎಂದು ಹೇಳಿದ್ದಾನೆ ಎಂದು ವರದಿಯಾಗಿದೆ.

# ನಾಲತವಾಡ ಬಳಿ ಭೀಕರ ಅಪಘಾತ: ಬೈಕ್ ಸವಾರ ಸ್ಥಳದಲ್ಲೇ ದುರ್ಮರಣ





ನಾಲತವಾಡ:ಮೇ.7: ನಾರಾಯಣಪುರದಿಂದ ಮುದ್ದೇಬಿಹಾಳ ಕಡೆಗೆ ಸಾಗುತ್ತಿದ್ದ ಸರಕಾರಿ ಬಸ್, ಬುಧವಾರ ಸಂಜೆ ಆರೇಶಂಕರ ಕ್ರಾಸ್ ಹತ್ತಿರ ಬೈಕಿಗೆ ಡಿಕ್ಕಿ ಹೊಡೆದು ಭೀಕರ ಅಪಘಾತ ಸಂಭವಿಸಿದ್ದು, ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಮೃತ ವ್ಯಕ್ತಿಯನ್ನು ನಾಲತವಾಡ ಪಟ್ಟಣದ 5ನೇ ವಾರ್ಡಿನ ನಿವಾಸಿ ಸಂಗಪ್ಪ ಬಸಪ್ಪ ಗೌಡೂರ (28) ಎಂದು ಗುರುತಿಸಲಾಗಿದೆ. ಸ್ಥಳೀಯ ಪ.ಪಂಯಲ್ಲಿ ಪೌರ ಕಾರ್ಮಿಕನಾಗಿ ಸೇವೆ ಸಲ್ಲಿಸುತ್ತಿದ್ದ ಅವರು, ಪರಿಚಯದ ಮಹಿಳೆಯೊಂದಿಗೆ ಬೈಕ್‌ನಲ್ಲಿ ಆರೇಶಂಕರ ಗ್ರಾಮಕ್ಕೆ ಹೋಗುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ. ಆರೇಶಂಕರ ಕ್ರಾಸ್ ಹತ್ತಿರ, ಮುಂಭಾಗದಿಂದ ಬಂದ ಬಸ್ ಹಠಾತ್ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ, ಸಂಗಪ್ಪ ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬೈಕ್‌ನಲ್ಲಿ ಜೊತೆಗಿದ್ದ ಮಹಿಳೆಗೆ ಲಘು ಗಾಯಗಳಾಗಿವೆ ಎಂದು ವರದಿಯಾಗಿದೆ. ಪೊಲೀಸರು ಮುದ್ದೇಬಿಹಾಳ ಪಿಎಸ್ಐ ಸಂಜೀವ ತಿಪ್ಪಾರಡ್ಡಿ ಸ್ಥಳಕ್ಕೆ ಭೇಟಿ ನೀಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಅಪಘಾತದ ಪರಿಣಾಮ ಗ್ರಾಮದಲ್ಲಿ ಶೋಕವಾತಾವರಣ ಮನೆಮಾಡಿದೆ. ಸೋಮವಾರ ಎರಡು ಅಪಘಾತದಲ್ಲಿ ಇಬ್ಬರು ಸಾವನ್ನಪ್ಪಿದರು. ಇದಾದ ಮೇಲೆ ಬುಧವಾರ ಮತ್ತೇ ಈ ಅಪಘಾತ ನಡೆದಿದೆ. ಎರಡು ದಿನಗಳಲ್ಲಿ ನಾಲತವಾಡ ಗ್ರಾಮದ ಮೂರು ಜನರು ದುರ್ಮರಣಕ್ಕೆ ಈಡಾಗಿದ್ದಾರೆ.

# ಭಾರತದತ್ತ ಕೆಟ್ಟದೃಷ್ಟಿ ಬೀರುವವರಿಗೆ ಎಚ್ಚರಿಕೆ:ಈಶ್ವರ ಖಂಡ್ರೆ



ಬೆಂಗಳೂರು, ಮೇ 07: ಪಾಕ್ ನೆಲದಲ್ಲಿನ ಭಯೋತ್ಪಾದಕ ತಾಣಗಳ ಮೇಲೆ ಯಶಸ್ವಿಯಾಗಿ ನಿರ್ದಿಷ್ಟ ಗುರಿ ದಾಳಿ ನಡೆಸಿರುವ ವಾಯುಪಡೆ ಸೇರಿದಂತೆ ಭಾರತೀಯ ಸೇನಾ, ನೌಕಾಪಡೆಗಳಿಗೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿನಂದನೆ ಸಲ್ಲಿಸಿದ್ದಾರೆ.

ಆಪರೇಷನ್ ಸಿಂಧೂರ್ ಹೆಸರಿನಲ್ಲಿ ಮಧ್ಯರಾತ್ರಿ ಕಾರ್ಯಾಚರಣೆ ಮಾಡಿ 9 ಭಯೋತ್ಪಾದಕ ತಾಣಗಳನ್ನು ನೆಲಸಮ ಮಾಡುವಲ್ಲಿ ಅಪರಿಮಿತ ದಕ್ಷತೆ, ಸಾಮರ್ಥ್ಯ ಮೆರೆದಿರುವ ಭಾರತೀಯ ಸೇನೆ ದೇಶದ ಜನರ ವಿಶ್ವಾಸವನ್ನು ನೂರ್ಮಡಿ ಮಾಡಿದೆ. ಮೂರೂ ಪಡೆಗಳಿಗೆ ಸಂಪೂರ್ಣ ಬೆಂಬಲ ಮತ್ತು ಕಾರ್ಯತಂತ್ರ ರೂಪಿಸಿದ ತಜ್ಞರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

ಇದು ಕೇವಲ ಪಾಕಿಸ್ತಾನಕ್ಕೆ ಮಾತ್ರವಲ್ಲ, ಭಾರತದತ್ತ ಕೆಟ್ಟದೃಷ್ಟಿ ಬೀರುವ ಎಲ್ಲರಿಗೂ ಎಚ್ಚರಿಕೆಯ ಗಂಟೆ–ಯಾಗಿದೆ. ದೇಶದ, ಅಖಂಡತೆ, ಸಾರ್ವಭೌಮತ್ವಕ್ಕೆ ಧಕ್ಕೆಯಾದಾಗ, ಭಾರತೀಯ ಮುಗ್ಧ ಪ್ರಜೆಗಳಿಗೆ ಹಾನಿಯಾದಾಗ ಭಾರತ ತಕ್ಕ ಉತ್ತರ ನೀಡುತ್ತದೆ ಎಂಬುದನ್ನು ಇದು ಮತ್ತೊಮ್ಮೆ ಸಾಬೀತು ಮಾಡಿದೆ. ಈ ಸಂದರ್ಭದಲ್ಲಿ ಭಾರತೀಯರೆಲ್ಲರೂ ನಮ್ಮ ಪಡೆಗಳೊಂದಿಗೆ ನಿಲ್ಲುತ್ತಾರೆ ಎಂದೂ ಈಶ್ವರ ಖಂಡ್ರೆ ತಿಳಿಸಿದ್ದಾರೆ.

# ಆಪರೇಷನ್ ಸಿಂಧೂರ:ಮಾಧ್ಯಮಗಳಿಗೆ ಮಾಹಿತಿ ನೀಡಿದ ಮಹಿಳಾ ಸೇನಾಧಿಕಾರಿಗಳು

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮೇ.7: ಭಾರತೀಯ ಸೇನೆ 'ಆಪರೇಷನ್ ಸಿಂಧೂರ್' ಹೆಸರಿನಲ್ಲಿ ಬುಧವಾರ ಬೆಳಗಿನ ಜಾವ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಉಗ್ರರ ನೆಲೆಗಳ ಮೇಲೆ ಕ್ಷಿಪಣಿ ದಾಳಿ ನಡೆಸುವ ಮೂಲಕ ಪಹಲ್ಗಾಮ್ ಉಗ್ರ ದಾಳಿಗೆ ಪ್ರತೀಕಾರ ತೀರಿಸಿಕೊಂಡಿದೆ.

ಇಂದು "ಆಪರೇಷನ್ ಸಿಂಧೂರ್" ಬಗ್ಗೆ ಭಾರತೀಯ ಸಶಸ್ತ್ರ ಪಡೆಗಳ ಇಬ್ಬರು ಮಹಿಳಾ ಅಧಿಕಾರಿಗಳಾದ ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಮತ್ತು ಕರ್ನಲ್ ಸೋಫಿಯಾ ಖುರೇಷಿ ಮಾಧ್ಯಮಗಳಿಗೆ ಮಾಹಿತಿ ನೀಡಿದರು. ಸೇನೆ ಮತ್ತು ವಾಯುಪಡೆಯ ಹಿರಿಯ ಅಧಿಕಾರಿಗಳಾದ ಈ ಇಬ್ಬರೂ ಮಹಿಳೆಯರು, ಪಾಕಿಸ್ತಾನದ ಒಂಬತ್ತು ಪ್ರಮುಖ ಭಯೋತ್ಪಾದಕ ತರಬೇತಿ ಶಿಬಿರಗಳ ಮೇಲೆ ಭಾರತೀಯ ಸೇನೆ ನಡೆಸಿದ ನಿಖರ ದಾಳಿಯ ಕಾರ್ಯಾಚರಣೆಯ ಬಗ್ಗೆ ವಿವರಿಸಿದರು.



ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲಗಮ್‌ನಲ್ಲಿ ಪ್ರವಾಸಿಗರನ್ನು ಅದರಲ್ಲೂ ಪುರುಷರನ್ನು ಗುರಿಯಾಗಿಸಿಕೊಂಡು ಉಗ್ರರು ನಡೆಸಿದ ದಾಳಿಯಲ್ಲಿ ತಮ್ಮ ಪತಿಯರನ್ನು ಕಳೆದುಕೊಂಡ ಮಹಿಳೆಯರಿಗೆ ಗೌರವ ಸಲ್ಲಿಸಲು ಉಗ್ರರ ವಿರುದ್ಧದ ಮಿಲಿಟರಿ ಕಾರ್ಯಾಚರಣೆಗೆ "ಆಪರೇಷನ್ ಸಿಂಧೂರ್" ಎಂದು ಹೆಸರಿಡಲಾಗಿದೆ.

ಹೆಸರಿನ ಜೊತೆಗೆ, ಮಾಧ್ಯಮಗಳಿಗೆ ಬ್ರೀಫಿಂಗ್ ಅನ್ನು ಮುನ್ನಡೆಸಲು ಸೇನೆ ಮತ್ತು ವಾಯುಪಡೆಯ ಇಬ್ಬರು ಹಿರಿಯ ಮಹಿಳಾ ಅಧಿಕಾರಿಗಳನ್ನು ನಿಯೋಜಿಸಿರುವುದು ದುಃಖಿತ ಮಹಿಳೆಯರಿಗೆ ಸಲ್ಲಿಸಿದ ಪ್ರಬಲ ಗೌರವವೆಂದು ಪರಿಗಣಿಸಲಾಗಿದೆ.

ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಮತ್ತು ಕರ್ನಲ್ ಸೋಫಿಯಾ ಖುರೇಷಿ:ಭಾರತೀಯ ಸೇನೆಯ ಕಾರ್ಪ್ಸ್ ಆಫ್ ಸಿಗ್ನಲ್ಸ್‌ನ ಅಧಿಕಾರಿಯಾಗಿರುವ ಕರ್ನಲ್ ಸೋಫಿಯಾ ಖುರೇಷಿ ಅವರು ಗುಜರಾತ್ ಮೂಲದವರಾಗಿದ್ದು, ಸೇನಾ ಕುಟುಂಬದ ಹಿನ್ನೆಲೆಯಿಂದ ಬಂದಿದ್ದಾರೆ. ಖುರೇಷಿ ಅವರ ಅಜ್ಜ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿದ್ದಾರೆ. ಭಾರತೀಯ ನೆಲದಲ್ಲಿ ಇದುವರೆಗೆ ನಡೆಸಿದ ಅತಿದೊಡ್ಡ ಬಹುರಾಷ್ಟ್ರೀಯ ಮಿಲಿಟರಿ ಸಮರಾಭ್ಯಾಸಗಳಲ್ಲಿ ಒಂದಾದ ಫೋರ್ಸ್ 18 ರಲ್ಲಿ ಭಾರತೀಯ ಸೇನಾ ತರಬೇತಿ ತುಕಡಿಯನ್ನು ಮುನ್ನಡೆಸಿದ ಮೊದಲ ಮಹಿಳೆ ಎಂಬ ಗೌರವಕ್ಕೆ ಖುರೇಷಿ ಪಾತ್ರರಾಗಿದ್ದಾರೆ. ಕರ್ನಲ್ ಖುರೇಷಿ ಜೀವರಸಾಯನಶಾಸ್ತ್ರದಲ್ಲಿ ಸ್ನಾತ–ಕೋತ್ತರ ಪದವಿ ಪಡೆದಿದ್ದಾರೆ ಮತ್ತು 1999 ರಲ್ಲಿ ಚೆನ್ನೈನ ಆಫೀಸರ್ಸ್ ಟ್ರೈನಿಂಗ್ ಅಕಾಡೆಮಿ (ಒಟಿಎ) ಯಿಂದ ನಿಯೋಜನೆಗೊಂಡರು. ಖುರೇಷಿ 2006 ರಲ್ಲಿ ಕಾಂಗೋದಲ್ಲಿ ಭಾರತೀಯ ಕಾರ್ಯಾಚರಣೆಯ ಭಾಗವಾಗಿದ್ದರು. ಇನ್ನು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಭಾರತೀಯ ವಾಯುಪಡೆಯಲ್ಲಿ (ಐಎಎಫ್) ವಿಶೇಷ ಹೆಲಿಕಾಪ್ಟರ್ ಪೈಲಟ್ ಆಗಿದ್ದು, "ವ್ಯೋಮಿಕಾ" ಎಂಬ ಹೆಸರು ಪೈಲಟ್ ಆಗುವ ಅವರ ಬಾಲ್ಯದ ಕನಸನ್ನು ಪ್ರತಿಬಿಂಬಿಸುತ್ತದೆ.

ಕಾಲೇಜು ದಿನಗಳಲ್ಲಿ ನ್ಯಾಷನಲ್ ಕೆಡೆಟ್ ಕಾರ್ಪ್ಸ್ (ಎನ್‌ಸಿಸಿ) ಸೇರಿದ್ದ ವ್ಯೋಮಿಕಾ, ಎಂಜಿನಿಯರಿಂಗ್ ಪದವಿ ಪಡೆದಿದ್ದಾರೆ. ನಂತರ ಡಿಸೆಂಬರ್ 18, 2019 ರಂದು ಐಎಎಫ್ ಸೇರಿದ ವ್ಯೋಮಿಕಾ ಅವರನ್ನು ಹೆಲಿಕಾಪ್ಟರ್ ಪೈಲಟ್ ಆಗಿ ನಿಯೋಜಿಸಲಾಯಿತು.

ಈಗ ಅನುಭವಿ ಪೈಲಟ್ ಆಗಿರುವ ವ್ಯೋಮಿಕಾ ಅವರು 2,500 ಗಂಟೆಗಳಿಗೂ ಹೆಚ್ಚು ಸಮಯ ಯುದ್ಧ ವಿಮಾನಗಳನ್ನು ಹಾರಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರ ಮತ್ತು ಈಶಾನ್ಯದಂತಹ ಎತ್ತರದ ಪ್ರದೇಶಗಳು ಸೇರಿದಂತೆ ಭಾರತದ ಅತ್ಯಂತ ಸವಾಲಿನ ಭೂಪ್ರದೇಶಗಳಲ್ಲಿ 'ಚೇತಕ್' ಮತ್ತು 'ಚೀತಾ' ನಂತಹ ಹೆಲಿಕಾಪ್ಟರ್‌ಗಳನ್ನು ಹಾರಿಸಿದ್ದಾರೆ.

# ಕನ್ನಡ ನಾಡಿಗೆ ಕಸಾಪ ಕೊಡುಗೆ ಅಪಾರ : ಡಾ. ಗೋವಿಂದ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಮೇ.7: ಕನ್ನಡ ನಾಡ, ನುಡಿ, ಜಲ, ನೆಲ ಸಂರಕ್ಷಣೆಗೆ ಕನ್ನಡ ಸಾಹಿತ್ಯ ಪರಿಷತ್ತು ನೀಡುತ್ತಿರುವ ಕೊಡುಗೆ ಅಪಾರವಾಗಿದೆ ಎಂದು ಪಶು ಸಂಗೋಪನೆ ಇಲಾಖೆ ಸಹಾಯಕ ನಿರ್ದೇಶಕ ಡಾ. ಗೋವಿಂದ ಹೇಳಿದರು.

ಪಟ್ಟಣದ ಖಾಸಗಿ ಕಚೇರಿಯ ಸಭಾಂಗಣದಲ್ಲಿ ಕನ್ನಡ ಸಾಹಿತ್ಯ ಪತಿಷತ್ತು ವತಿಯಿಂದ ನಡೆದ 111ನೇ ಕಸಾಪ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ನಮ್ಮ ಭಾಷೆ ಸಂಸ್ಕೃತಿ ಕಲೆ ಸಾಹಿತ್ಯ ಕನ್ನಡಿಗರ ಸ್ವತ್ತು, ನಮ್ಮ ಭಾಷೆ ತನ್ನದೆ ಆದ ಸಂಸ್ಕೃತಿ ಹೊಂದಿರುವುದರಿಂದ ಸಾಹಿತ್ಯ, ಕನ್ನಡ ಭಾಷೆ ಹಾಗೂ ಕನ್ನಡ ಸಂಸ್ಕೃತಿ, ಪರಂಪರೆ ಸುದೀರ್ಘ ಕಾಲಗಳ ವರೆಗೆ ಉಳಿಯಲು ಸಾಧ್ಯವಾಗಿದೆ. ಹೀಗಾಗಿ ಇಂದಿನ ಯುವ ಸಾಹಿತಿಗಳು ಹೆಚ್ಚಿನ ಶ್ರಮ ವಹಿಸಿ ಕನ್ನಡ ನಾಡಿನ ಬೆಳವಣಿಗೆಗೆ ಪೂರಕವಾಗಿ ಕೆಲಸ ಮಾಡಬೇಕು ಎಂದರು.

ಕಸಾಪ ಗೌರವ ಕೋಶಾದಕ್ಷ ಮಾಣಿಕಪ್ಪ ಬಕ್ಕನ ಮಾತನಾಡಿ, ಕನ್ನಡ ಪರಿಷತ್ತ ಸ್ಥಾಪನೆಯಾದ ದಿನದಿಂದ ಸಮಾಜಮುಖಿ ಕಾರ್ಯಕ್ರಮಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡ ಅನೇಕ ಮಹನೀಯರು, ಸಾಹಿತಿಗಳು ಬೆಳೆದಿದ್ದಾರೆ. ಇತ್ತಿಚಿನ ದಿನಗಳಲ್ಲಿ ಸಾಹಿತ್ಯ ಪರಿಷತ್ತು ಅತ್ಯಂತ ಬೃಹತ್ತಾಗಿ ಬೆಳೆದು ನಿಂತಿದೆ. ನಾಡಿನ ವಿವಿಧ ಸ್ಥಳಗಳಲ್ಲಿ ನಾನಾ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಮೂಲಕ ಕನ್ನಡ ಸಂಸ್ಕೃತಿ ಉಳಿಸಿ ಬೆಳಸುವ ಪ್ರಯತ್ನ ಮಾಡುತ್ತಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿದ್ದಲಿಂಗ ನಿರ್ಣಾ ಮಾತನಾಡಿ, ವಹಿಸಿಕೊಂಡು ಮಾತನಾಡಿ, ತಾಲೂಕಿನ ವ್ಯಾಪ್ತಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಸಮಾಜಮುಖಿ ಕಾರ್ಯಕ್ರಮ ಮಾಡಲಾಗುತ್ತಿದೆ. ಹೀಗಾಗಿ ಪರಿಷತ್ತು ಮಾಡುತ್ತಿರುವ ಸಮಾಜಮುಖಿ ಕಾರ್ಯಕ್ಕೆ ಯುವ ಸಾಹಿತಿಗಳು ಸಹಕಾರ ನೀಡಬೇಕು. ಕನ್ನಡ ನಾಡ, ನುಡಿ ಬೆಳವಣಿಗೆಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಕಸಾಪ ಗೌರವ ಅಧ್ಯಕ್ಷ ಡಾ. ನಾಗನಾಥ ಹುಲಸೂರೆ, ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ ಗೂಡಾಳ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಲಿಂಗರಾಜ ಅರಸು, ಸರಕಾರಿ ನಿವೃತ ನೌಕರರ ವೇದಿಕೆಯ ತಾಲೂಕು ಸಂಚಾಲಕ ಶಶಿಧರ ಪಾಟೀಲ್, ಪ್ರೌಢ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಶರದಕುಮರ ನಾರಾಯಣಪೆಟ್ಕರ್, ನಿವೃತ್ತ ಮುಖ್ಯಶಿಕ್ಷಕ ಸಂಗಣ್ಣಾ ಬಿದರೆಡ್ಡಿ ಸೇರಿ ಅನೇಕರು ಮಾತನಾಡಿದರು.

ಈ ವೇಳೆ ಮಡೆಪ್ಪ ಕುಂಬಾರ ,ರಮೇಶ್ ರೆಡ್ಡಿ, ಬಸಪ್ಪರೆಡ್ಡಿ, ಮದನ ಸಿಂಗ, ಶಿವಕುಮಾರ ಕಂಪ್ಲಿ , ವಿಜಯಕುಮಾರ ಚಟ್ಟಿ, ಸಜ್ಜನಶೆಟ್ಟಿ, ಗೀತಾ ರೆಡ್ಡಿ, ಜಯಶ್ರೀ ಕಾಳಗಿ ಇದ್ದರು. ಸದಾಶಿವಯ್ಯ ಹಿರೇಮಠ ಸ್ವಾಗತಿಸಿದರು. ಭುವನೇಶ್ವರಿ ನಿರುಪಿಸಿದರು.

# ಮುಗ್ದ ಜನರನ್ನು ಕೊಂದವರನ್ನು ನಾವು ಕೊಂದು ಮುಗಿಸಿದ್ದೇವೆ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮೇ.7: ಆಪರೇಷನ್ ಸಿಂಧೂರ ಯಶಸ್ಸಿನ ನಂತರ ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬುಧವಾರ ನಿರ್ಣಾಯಕ ಸಂದೇಶವನ್ನು ನೀಡಿ ಪಾಕಿಸ್ತಾನವನ್ನು ಬಲವಾಗಿ ಟೀಕಿಸಿದರು. ಬಿಆರ್‌ಓ ಯೋಜನೆಯ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ನಿನ್ನೆ ರಾತ್ರಿ ಭಾರತೀಯ ಪಡೆಗಳು ಮಾಡಿದ್ದು ಕೇವಲ ಮಿಲಿಟರಿ ಕಾರ್ಯಾಚರಣೆಯಲ್ಲ, ಬದಲಾಗಿ ಇತಿಹಾಸ ಸೃಷ್ಟಿಸಿದ ಧೈರ್ಯಶಾಲಿ ಕಾರ್ಯಾಚರಣೆಯಾಗಿದೆ ಎಂದು ಹೇಳಿದರು. ಭಾರತದ ಪಡೆಗಳು "ನಿಖರತೆ, ಜಾಗರೂಕತೆ ಮತ್ತು ಸೂಕ್ಷ್ಮತೆಯಿಂದ" ದಾಳಿ ಮಾಡಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಅದು ಪ್ರಪಂಚದಾದ್ಯಂತ ಪ್ರತಿಧ್ವನಿಸಿದೆ. ನಾವು ನಿಗದಿಪಡಿಸಿದ ಗುರಿಗಳನ್ನು ಒಂದೊಂದಾಗಿ ನಾಶಪಡಿಸಿದ್ದೇವೆ. ಮತ್ತು ಅದು ಕೂಡ ಒಬ್ಬ ನಾಗರಿಕನಿಗೂ ತೆ–ೊಂದರೆಯಾಗದ ರೀತಿಯಲ್ಲಿ. ಇದು ಭಾರತದ ಮಿಲಿಟರಿ ನೀತಿಶಾಸ್ತ್ರದ ವಿಶಿಷ್ಟಲಕ್ಷಣವಾಗಿದೆ ಎಂದು ಅವರು ಹೇಳಿದರು.

ನಿಮಗೆಲ್ಲರಿಗೂ ತಿಳಿದಿರುವಂತೆ, ನಿನ್ನೆ ರಾತ್ರಿ ಭಾರತೀಯ ಪಡೆಗಳು ತಮ್ಮ ಶೌರ್ಯ ಮತ್ತು ಧೈರ್ಯವನ್ನು ಪ್ರದರ್ಶಿಸುವ ಮೂಲಕ ಹೊಸ ಇತಿಹಾಸವನ್ನು ಸೃಷ್ಟಿಸಿವೆ. ಭಾರತೀಯ ಸೇನೆಯು ನಿಖರತೆ, ಜಾಗರೂಕತೆ ಮತ್ತು ಸೂಕ್ಷ್ಮತೆಯಿಂದ ಕ್ರಮ ಕೈಗೊಂಡಿದೆ. ನಾವು ನಿಗದಿಪಡಿಸಿದ ಗುರಿಗಳನ್ನು ಯೋಜಿತ ಯೋಜನೆಯಂತೆ ನಿಖರವಾಗಿ ಮತ್ತು ನಿರ್ದಿಷ್ಟವಾಗಿ ನಾಶಪಡಿಸಲಾಯಿತು. ಯಾವುದೇ ನಾಗರಿಕ ಸ್ಥಳ ಅಥವಾ ನಾಗರಿಕರ ಮೇಲೆ ಯಾವುದೇ ಪರಿಣಾಮ ಬೀರದಂತೆ



ಸೂಕ್ಷ್ಮತೆಯನ್ನು ತೋರಿಸಲಾಗಿದೆ. ಅಂದರೆ ಸೈನ್ಯವು ಒಂದು ರೀತಿಯ ನಿಖರತೆ, ಮುನ್ನೆಚ್ಚರಿಕೆ ಮತ್ತು ಸಹಾನುಭೂತಿಯನ್ನು ತೋರಿಸಿದೆ. ಇದಕ್ಕಾಗಿ ನಾನು ನಮ್ಮ ಯೋಧರಿಗೆ ಮತ್ತು ಅಧಿಕಾರಿಗಳನ್ನು ಇಡೀ ದೇಶದ ಪರವಾಗಿ ಅಭಿನಂದಿಸುತ್ತೇನೆ ಎಂದರು. ಅಶೋಕ ವನ ನಾಶದ ಕುರಿತು ಭಗವಂತ ಆಂಜನೇಯ ಮತ್ತು ರಾವಣ ನಡುವಿನ ಸಂಭಾಷಣೆಯನ್ನು ಉಲ್ಲೇಖಿಸಿದ ರಾಜನಾಥ ಸಿಂಗ್, ಸೇನೆಗೆ ಸಂಪೂರ್ಣ ಬೆಂಬಲ ನೀಡಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿಗೆ ನಾನು ಧನ್ಯವಾದ ಹೇಳುತ್ತೇನೆ. ಅಶೋಕ ವನ ನಾಶಮಾಡುವಾಗ ಆಂಜನೇಯ ಅನುಸರಿಸಿದ "ಜಿನ್ ಮೋಹಿ ಮಾರಾ, ತಿನ್ ಮೋಹಿ ಮಾರೆ" (ನಮ್ಮ ಮುಗ್ಧ ಜನರನ್ನು ಕೊಂದವರನ್ನೇ ನಾವು ಕೊಂದಿದ್ದೇವೆ. ನಮ್ಮ ಮುಗ್ಧ ಜನರನ್ನು ಕೊಂದವರನ್ನೇ ನಾವು ಗುರಿಯಾಗಿಸಿಕೊಂಡಿದ್ದೇವೆ) ಆದರ್ಶವನ್ನು ನಾವು ಅನುಸರಿಸಿದ್ದೇವೆ ಎಂದರು. 'ನರೇಂದ್ರ ಮೋದಿಯವರ ನೇತೃತ್ವದಲ್ಲಿ, ನಮ್ಮ ಪಡೆಗಳು 'ಆಪರೇಷನ್ ಸಿಂಧೂರ್' ಅನ್ನು ಪ್ರಾರಂಭಿಸುವ ಮೂಲಕ, ಹಿಂದಿನಂತೆ ಈ ಬಾರಿಯೂ ಭಯೋತ್ಪಾದಕರಿಗೆ ತರಬೇತಿ ನೀಡುವ ಶಿಬಿರಗಳನ್ನು ನಾಶಪಡಿಸುವ ಮೂಲಕ ಸೂಕ್ತ ಉತ್ತರವನ್ನು ನೀಡಿವೆ ಎಂದು ಅವರು ಹೇಳಿದರು. ಈ ದಾಳಿ ಭಯೋತ್ಪಾದಕರ ಅಡಗುತಾಣಗಳು ಮತ್ತು ಅವುಗಳ ಮೂಲಸೌಕರ್ಯಗಳಿಗೆ ಮಾತ್ರ ಸೀಮಿತವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸ್ಪಷ್ಟಪಡಿಸಿದ್ದಾರೆ. ಇದರಿಂದಾಗಿ ಭಾರತ ಭಯೋತ್ಪಾದನೆಗೆ ಹೆದರುವುದಿಲ್ಲ ಎಂಬ ಸಂದೇಶ ಹೋಗುತ್ತದೆ. ಆದರೆ ಮುಗ್ಧ ಜನರ ಮೇಲೆ ಕೈ ಎತ್ತುವ ಸ್ವಭಾವವಿಲ್ಲ ಎಂದು ಅವರು ಹೇಳಿದರು. "ಭಾರತವು ತನ್ನ ನೆಲದ ಮೇಲಿನ ದಾಳಿಗೆ 'ಪ್ರತಿಕ್ರಿಯಿಸುವ ಹಕ್ಕನ್ನು' ಬಳಸಿಕೊಂಡಿದೆ. ನಮ್ಮ ಕ್ರಮವನ್ನು ಬಹಳ ಚಿಂತನಶೀಲವಾಗಿ ಮತ್ತು ಯೋಜಿತ ರೀತಿಯಲ್ಲಿ ತೆಗೆದುಕೊಳ್ಳಲಾಗಿದೆ. ಭಯೋತ್ಪಾದಕರ ನೈತಿಕ ಸ್ಥೈರ್ಯವನ್ನು ಮುರಿಯುವ ಉದ್ದೇಶದಿಂದ, ಈ ಕ್ರಮವನ್ನು ಅವರ ಶಿಬಿರಗಳು ಮತ್ತು ಇತರ ಮೂಲಸೌಕರ್ಯಗಳಿಗೆ ಮಾತ್ರ ಸೀಮಿತಗೊಳಿಸಲಾಗಿದೆ. ನಮ್ಮ ಸಶಸ್ತ್ರ ಪಡೆಗಳ ಶೌರ್ಯಕ್ಕೆ ನಾನು ಮತ್ತೊಮ್ಮೆ ವಂದಿಸುತ್ತೇನೆ" ಎಂದು ಅವರು ಹೇಳಿದರು.

# ರಾಯಚೂರು : ರೈಲ್ವೇ ಇಲಾಖೆಯಿಂದ ಮಾಕ್ ಡ್ರಿಲ್



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಮೇ.7: ಸೌತ್ ಸೆಂಟ್ರಲ್ ರೈಲ್ವೇ ಗುಂತಕಲ್ ವಲಯದಿಂದ ರಾಯಚೂರಿನ ರೈಲ್ವೇ ನಿಲ್ದಾಣದವರೆಗೆ ಸಿವಿಲ್ ಡಿಫೆನ್ಸ್ ತಂಡದಿಂದ ಮಾಕ್ ಡ್ರಿಲ್ ನಡೆಸಲಾಯಿತು. ಯುದ್ಧದ ದಾಳಿ ಸಂದರ್ಭಗಳಲ್ಲಿ ನಾಗರಿಕರ ರಕ್ಷಣೆ ಬಗ್ಗೆ ಜಾಗೃತಿ ಮೂಡಿಸಲು 30ಕ್ಕೂ ಹೆಚ್ಚು ಜನರ ಸಿವಿಲ್ ಡಿಫೆನ್ಸ್ ತಂಡ ಅಣಕು ಕಾರ್ಯಾಚರಣೆ ಮಾಡಿತು.

ಲಕ್ಷ್ಮೀಬಾಂಬ್, ಸ್ಮೋಕ್‌ಬಾಂಬ್‌ಗಳನ್ನು ಬಳಸಿ ದಾಳಿ ವೇಳೆ ಜನ ಹೇಗೆ ತಮ್ಮನ್ನು ತಾವು ರಕ್ಷಿಸಿಕೊಳ್ಳಬೇಕು? ಅಧಿಕಾರಿಗಳು ಹೇಗೆ ಅಲರ್ಟ್ ಆಗಿರಬೇಕು? ಹಂತ ಹಂತವಾಗಿ ಗಾಯಾಳುಗಳನ್ನು ರಕ್ಷಿಸಿ ಹೇಗೆ ಪ್ರಾಥಮಿಕ ಚಿಕಿತ್ಸೆ ಕೊಡಿಸಬೇಕು ಎನ್ನುವುದರ ಬಗ್ಗೆ ಜಾಗೃತಿ ಮೂಡಿಸಲಾಯಿತು. ಡಿವಿಜನ್ ಸಿವಿಲ್ ಡಿಫೆನ್ಸ್ ಎಮರ್ಜೆನ್ಸಿ ಆಫಿಸರ್ ಕೆ.ಸುದರ್ಶನ ರೆಡ್ಡಿ ನೇತೃತ್ವದಲ್ಲಿ ಮಾಕ್ ಡ್ರಿಲ್ ನಡೆಸಲಾಯಿತು.

ರೈಲ್ವೇ ನಿಲ್ದಾಣದಲ್ಲಿ ಯುದ್ಧದ ದಾಳಿ ಸನ್ನಿವೇಶ ಸೃಷ್ಟಿಸಿ ಅಣಕು ಕಾರ್ಯಾಚರಣೆ ಮಾಡಿದ ಸಿಬ್ಬಂದಿ ಜನರು ತೆಗೆದುಕೊಳ್ಳಬೇಕಾದ ಎಚ್ಚರಿಕೆ ಕ್ರಮಗಳ ಬಗ್ಗೆ ತಿಳಿಸಿದರು. ಬೆಂಕಿ ನಂದಿಸಿ ಅಪಾಯಗಳನ್ನು ತಗ್ಗಿಸುವ ಬಗ್ಗೆ ಮಾಕ್ ಡ್ರಿಲ್ ಮಾಡಲಾಯಿತು. ಗಡಿಯಲ್ಲಿ ಯುದ್ಧದ ಕಾರ್ಮೋಡ ಆವರಿಸಿರುವುದರಿಂದ ಕೇಂದ್ರದ ಸೂಚನೆ ಮೇರೆಗೆ ರೈಲ್ವೇ ಇಲಾಖೆಯಿಂದ ಕಾಚಗೂಡು, ರಾಯಚೂರು, ಔರಂಗಾಬಾದ್ ಮೂರು ಸ್ಥಳಗಳಲ್ಲಿ ಅಣಕು ಕಾರ್ಯಾಚರಣೆ ನಡೆಸಲಾಯಿತು

# ಭಾರತದ ವಿರುದ್ಧ ಪ್ರತೀಕಾರಕ್ಕೆ ಸಿದ್ಧ: ಪಾಕಿಸ್ತಾನ

ಮಲ್ಲಮ್ಮ ನುಡಿ ವಾರ್ತೆ

ಲಾಹೋರ:ಮೇ.7: ಭಾರತೀಯ ಸೇನಾ ದಾಳಿಗಳಿಗೆ ಪ್ರತಿಕ್ರಿಯೆಯಾಗಿ ದೇಶದ ಸಶಸ್ತ್ರ ಪಡೆಗಳು ತಮ್ಮ ಆಯ್ಕೆಯ ಸಮಯ, ಸ್ಥಳ ಮತ್ತು ರೀತಿಯಲ್ಲಿ ಪ್ರತೀಕಾರ ತೀರಿಸಿಕೊಳ್ಳಲು ಸೂಕ್ತ ಅಧಿಕಾರವನ್ನು ಹೊಂದಿವೆ ಎಂದು ಪಾಕಿಸ್ತಾನದ ರಾಷ್ಟ್ರೀಯ ಭದ್ರತಾ ಮಂಡಳಿ ಹೇಳಿದೆ. ಭಾರತದ ಆಪರೇಷನ್ ಸಿಂಧೂರ್ ಕಾರ್ಯಾಚರಣೆಯ ಮೂಲಕ ಪಾಕ್ ನಲ್ಲಿರುವ ಉಗ್ರನೆಲೆಗಳನ್ನು ಧ್ವಂಸಗೊಳಿಸಿದ ಬೆನ್ನಲ್ಲೇ ಪ್ರಧಾನಿ ಶೆಹಬಾಜ್ ಷರೀಫ್ ರಾಷ್ಟ್ರೀಯ ಭದ್ರತಾ ಮಂಡಳಿ (ಎನ್‌ಎಸ್‌ಸಿ) ಸಭೆಯ ಅಧ್ಯಕ್ಷತೆ ವಹಿಸಿದ್ದರು. ಇದರಲ್ಲಿ ಸಂಪುಟ ಸಚಿವರು, ಮುಖ್ಯಮಂತ್ರಿಗಳು, ಎಲ್ಲಾ ಸೇವೆಗಳ ಮುಖ್ಯಸ್ಥರು ಮತ್ತು ಹಿರಿಯ ಅಧಿಕಾರಿಗಳು ಭಾಗವಹಿಸಿ ಪರಿಸ್ಥಿತಿಯನ್ನು ಚರ್ಚಿಸಿದ್ದಾರೆ. ವಿಶ್ವಸಂಸ್ಥೆಯ ಚಾರ್ಟರ್‌ನ 51 ನೇ ವಿಧಿಗೆ ಅನುಗುಣವಾಗಿ, ಭಾರತೀಯ ದಾಳಿಗಳಲ್ಲಿ ಅಮಾಯಕ ಪಾಕಿಸ್ತಾನಿಗಳ ಜೀವಹಾನಿಗೆ ಪ್ರತೀಕಾರ ತೀರಿಸಿಕೊಳ್ಳಲು ಪಾಕಿಸ್ತಾನ ಆತ್ಮರಕ್ಷಣೆಗಾಗಿ, ಆಯ್ಕೆ ಮಾಡಿದ ಸಮಯ, ಸ್ಥಳ ಮತ್ತು ರೀತಿಯಲ್ಲಿ ಪ್ರತಿಕ್ರಿಯಿಸುವ ಹಕ್ಕನ್ನು ಹೊಂದಿದೆ ಎಂದು ಎನ್‌ಎಸ್‌ಸಿ ಭಾರತಕ್ಕೆ ಎಚ್ಚರಿಸಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.